ಬೆಂಗಳೂರು ಸಂಪುಟ: 16 ಸಂಚಿಕೆ: 61 ಪುಟ: 06 ಮಂಗಳವಾರ 28-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಅಮ್ಮಮ್ಮನಿಗೆ ಸೀರೆಯಲ್ಲಿ ನೋಡೋ ಆಸೆಯಿತ್ತು

ಲೆಹಂಗಾದಲ್ಲಿ ರಂಗೇರಿಸಿದ ಅಂಜಲಿ

ಪ್ಯಾಂಟ್ ಜಿಪ್ ಬಿಚ್ಚಿದ ಪಟಾಕ ಪುಟ 6

# ಛಾಟಿ ಬೀಸಿದ ಸಿಎಂ

## ನಿಷೇಧಿತ ದೇವದಾಸಿ ಪದ್ಧತಿ ಕಂಡುಬಂದರೆ ಎಸ್‌ಪಿ, ಡಿಸಿಗಳ ವಿರುದ್ಧ ಕ್ರಮ

**ಬೆಂಗಳೂರು:** ರಾಜ್ಯದಲ್ಲಿ ಎಲ್ಲಿಯಾದರೂ ದೇವದಾಸಿ ಪದ್ಧತಿ ಕಂಡುಬಂದರೆ ಅಂತಹ ಪ್ರಕರಣಗಳಿಗೆ ಸಂಬಂಧಿಸಿದಂತೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವರಿಷ್ಠಾಧಿಕಾರಿಗಳನ್ನೇ ಹೊಣೆ ಮಾಡಲಾಗುವುದು ಹಾಗೂ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಎಚ್ಚರಿಕೆ ನೀಡಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಸಿಎಂ ಈ ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ದೇವದಾಸಿ ಪದ್ಧತಿ ನಿಷೇಧದಲ್ಲಿದೆ ಆದರೂ ಕೆಲವೆಡೆ ಇಂತಹ ಪದ್ಧತಿ ಇದೆ ಎಂಬ ಬಗ್ಗೆ ಮಾಹಿತಿ ಲಭ್ಯವಾಗಿದೆ. ಎಲ್ಲಿಯಾದರೂ ನಡೆದದ್ದು ನನ್ನ ಗಮನಕ್ಕೆ ಬಂದರೆ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ ಎಂದು ತಾಕೀತು ಮಾಡಿದರು. ರಾಯಚೂರಿನ ಅಂಬೇಡ್ಕರ್ ವೃತ್ತದಲ್ಲಿ ಪ್ರಗತಿಪರ ಸಂಘಟನೆಗಳ ಕ್ರಿಯಾ ಸಮಿತಿ ಅಡಿಯಲ್ಲಿ ನಡೆಯುತ್ತಿರುವ ಮಹಿಳೆಯರ ಅಹೋರಾತ್ರಿ ಧರಣಿ ವಿಚಾರವನ್ನು ಮುಖ್ಯಮಂತ್ರಿಗಳು ಈ ಸಭೆಯಲ್ಲಿ ಪ್ರಸ್ತಾಪಿಸಿ ಮಾತನಾಡಿದ ಸಿಎಂ, ದೇವದಾಸಿಯರ ಪುನರ್ವಸತಿ ಸಮಸ್ಯೆಗಳ ಬಗೆಗೀ ಕೂಡಲೇ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ದೇವದಾಸಿ ಮಹಿಳೆಯರಿಗೆ ಕಲ್ಪಿಸಬೇಕು, ವೈಜ್ಞಾನಿಕವಾಗಿ ದೇವದಾಸಿ ಮಹಿಳೆಯರ ಸ್ಥಿತಿ ಗತಿ ಬಗ್ಗೆ ಸಮೀಕ್ಷೆ ನಡೆಸಬೇಕು ಎನ್ನುವುದು ಪ್ರತಿಭಟನಾ ನಿರತರ ಬೇಡಿಕೆಯಾಗಿದೆ. ಈ ಸಂಬಂಧ ಮಾಹಿತಿ ಒದಗಿಸಿ ಎಂದರು.

ಈ ಬಗ್ಗೆಯೇ ಕೆಲ ಹೊತ್ತು ಚರ್ಚೆ ನಡೆದ ಬಳಿಕ ದೇವದಾಸಿ ಸಮಸ್ಯೆ ಮತ್ತು ಪುನರ್ವಸತಿ ಬಗ್ಗೆ ಸಮಗ್ರ ವರದಿ ಸಿದ್ದಪಡಿಸಲು ಮುಖ್ಯ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದರು



ಜಾತಿ ದೌರ್ಜನ್ಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಸಲೀಸಾಗಿ ಬೇಲ್ ಸಿಕ್ಕರೆ ಅದು ನಿಮ್ಮ ದೌರ್ಬಲ್ಯ. ಹೀಗಾದರೆ ಜಾತಿ ದೌರ್ಜನ್ಯ ತಡೆಗಟ್ಟುವುದು ಸಾಧ್ಯವಿಲ್ಲ ಎಂದು ಸಿಎಂ ವಿಷಾದ ವ್ಯಕ್ತಪಡಿಸಿದರು.

ಗಂಭೀರ ಪ್ರಕರಣಗಳಲ್ಲಿ ಆರೋಪಿಗಳಿಗೆ ಸಲೀಸಾಗಿ ಜಾಮೀನು ಸಿಕ್ಕರೆ, ಮೇಲ್ಮನವಿ ಹೋಗಿ ಜಾಮೀನು ರದ್ದುಪಡಿಸಿ ಆರೋಪಿಗೆ ಶಿಕ್ಷೆ ಕೊಡಿಸಿದ ಪ್ರಕರಣಗಳು ಎಷ್ಟಿವೆ ? ಈ ಬಗ್ಗೆ ವಿವರ ಕೊಡಿ ಎಂದು ಅಧಿಕಾರಿಗಳ ವಿರುದ್ಧ ಸಿಎಂ ಗರಂ ಆದರು.

ಬ್ಯಾಕ್ ಲಾಗ್ ಮತ್ತು ಬಡ್ತಿ ವಿಚಾರದಲ್ಲಿ ಆಗುತ್ತಿರುವ ಅನ್ಯಾಯಗಳನ್ನು ಸಬ್ ಕಮಿಟಿ ಪತ್ತೆ ಹಚ್ಚಿ ಸಮಸ್ಯೆಗಳನ್ನು ನಿಮ್ಮ ಗಮನಕ್ಕೆ ತಂದರೂ ಸಮಸ್ಯೆ ಬಗೆಹರಿಸದೆ ನಿರ್ಲಕ್ಷ್ಯ ತೋರಿಸುತ್ತಿದ್ದೀರಿ. ಹಾಗಾದರೆ ಸಬ್ ಕಮಿಟಿ ಕೊಡುವ ವರದಿಗಳಿಗೆ ಬೆಲೆ ಇಲ್ಲವೇ ಎಂದು ವಿಧಾನ ಪರಿಷತ್‌ಸದಸ್ಯ ಸುಧಾಮ್ ದಾಸ್ ಅವರು ಸಭೆಯ ಗಮನಕ್ಕೆ ತಂದರು.

ಜಾತಿ ದೌರ್ಜನ್ಯ ದೂರು ಬಂದಾಗ ಪೊಲೀಸರೇ ಕೌಂಟರ್ ದೂರು ಪಡೆದು ಪ್ರಕರಣ ದುರ್ಬಲಗೊಳಿಸುವ ಬಗ್ಗೆ ದೂರುಗಳು ಬಂದರೆ ಅದನ್ನು ನಾನು ಸಹಿಸಲ್ಲ. ನಮ್ಮ ಗಮನಕ್ಕೆ ಬಂದರೆ ಸಂಬಂಧಪಟ್ಟವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲು ಹಿಂಜರಿಯುವುದಿಲ್ಲ ಎಂದು ನುಡಿದರು.

ದೌರ್ಜನ್ಯ ಪ್ರಕರಣಗಳಲ್ಲಿ 60 ದಿನಗಳ ಪುಟ 2



ಬೆಂಗಳೂರಿನಲ್ಲಿ ಇಂದು ಬಿಡಿಎ, ಬಿಡಬ್ಲ್ಯೂಎಸ್‌ಎಸ್‌ಬಿ, ಬಿಬಿಎಂಪಿ ಹಾಗೂ ಬಿಎಂಆರ್‌ಸಿಎಲ್‌ಗೆ ಸಂಬಂಧಿಸಿದ ಹಲವು ಕಾಮಗಾರಿಗಳ ಸಂಬಂಧ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪರಿಶೀಲನಾ ಸಭೆ ನಡೆಸಿದರು. ಇಲಾಖಾವಾರು ಅಧಿಕಾರಿಗಳು ಈ ಸಭೆಯಲ್ಲಿ ಹಾಜರಿದ್ದರು.

## ಇಡಿ ನೋಟಿಸ್ ರಾಜಕೀಯ ಪ್ರೇರಿತ

**ಬೆಂಗಳೂರು:** ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಪತ್ನಿಗೆ ಹಾಗೂ ಸಚಿವ ಭೈರತಿ ಸುರೇಶ್‌ಗೆ ಇಡಿ ನೋಟಿಸ್ ನೀಡಿರುವುದು ರಾಜಕೀಯ ಪ್ರೇರಿತ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಇಂದು ಮಾತನಾಡಿದ ಸಚಿವ ಚಲುವರಾಯಸ್ವಾಮಿ, 50:50 ಅನುಪಾತದಲ್ಲಿ ಸೈಟ್ ಹಂಚಿಕೆಯಾಗಿದೆ. ಬಿಜೆಪಿ ಅವಧಿಯಲ್ಲೇ ಸೈಟ್ ಹಂಚಿಕೆಯಾಗಿದೆ. ತನಿಖೆ ಆದರೆ ಬಿಜೆಪಿ ಅವಧಿಯ ತನಿಖೆಯಾಗಿದೆ. ಹೀಗಾಗಿ ನಮಗೆ ಆತಂಕ ಇಲ್ಲ. ಸಿಎಂ ಸಿದ್ದರಾಮಯ್ಯ ಪತ್ನಿ ಸೈಟ್ ವಾಪಸ್ ನೀಡಿದ್ದಾರೆ ಇಡಿ ನೋಟಿಸ್ ರಾಜಕೀಯ ಪ್ರೇರಿತವಾದುದು. ಪುಟ 2



## ಮುಡಾ; ನನ್ನ ಹಾಗೂ ಸಿಎಂ ಪತ್ನಿ ಪಾತ್ರ ಶೂನ್ಯ

**ಬೆಂಗಳೂರು:** ಮುಡಾ ಹಗರಣದಲ್ಲಿ ನನ್ನ ಮತ್ತು ಸಿಎಂ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರ ಪಾತ್ರ ಶೂನ್ಯವಾಗಿದೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಸಮರ್ಥನೆ ನೀಡಿದ್ದಾರೆ.



ಬೆಂಗಳೂರಿನಲ್ಲಿ ಮಂಗಳವಾರ ಮಾತನಾಡಿದ ಅವರು, ಇಡಿ ನೋಟಿಸ್‌ಗೆ ಮಧ್ಯಂತರ ತಡೆ ವಿಚಾರವಾಗಿ ಮಾತನಾಡಿ, ನಾನು ಬಹಳ ಕ್ಲಿಯರ್ ಆಗಿದ್ದೇನೆ. ನಂದಾಗಲಿ ಮುಖ್ಯಮಂತ್ರಿಗಳ ಪತ್ನಿಯವರದ್ದಾಗಲಿ ಪಾತ್ರ ಇಲ್ಲ ಸೊನ್ನೆ ಎಂದರು.

ಆ ರೀತಿ ಪಾತ್ರ ಇಲ್ಲ ಅಂತಾನೇ ಒಪ್ಪಿಕೊಂಡು ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ಕೊಟ್ಟಿದೆ. ಸೋಮವಾರ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನ್ಯಾಯಮೂರ್ತಿಗಳು ಕೇಸ್ ಮುಂದಕ್ಕೆ ಹಾಕಿದ್ದಾರೆ. 10 ನೇ ತಾರೀಕು ಆದ ಮೇಲೆ ನೋಡೋಣ ಎಂದರು. ನ್ಯಾಯಾಂಗದ ಮೇಲೆ ಸಂವಿಧಾನದ ಮೇಲೆ ನಾನು ಕಾಂಗ್ರೆಸ್ ಪಕ್ಷ ನಂಬಿಕೆ ಇಟ್ಟುಕೊಂಡಿದೆ. ನ್ಯಾಯಾಲಯದ ಆದೇಶವನ್ನು ನಾವು ಪಾಲಿಸ್ತೇವೆ. ಇಡಿ ಅವರು, ಸಿಬಿಐ ಅವರನ್ನೇ ಕೇಳಬೇಕು ಯಾಕೆ ನೋಟಿಸ್ ಕೊಟ್ಟರು ಅಂತ. ನನಗೆ ನೋಟಿಸ್ ಬಂದಾಗ ಆಶ್ಚರ್ಯ ಆಯ್ತು ಎಂದು ಹೇಳಿದರು.

ಹಗರಣ ನಡೆದಾಗ ನಾನು ಮಂತ್ರಿನೂ ಅಲ್ಲ ಸೈಟನ್ನು ಪಡೆದಿಲ್ಲ. ಯಾರಿಗೂ ಸೈಟನ್ನು ಕೊಟ್ಟು ಇಲ್ಲ. ಪುಟ 2

## ಉದ್ಯಮಿಗಳಿಗೆ ಐಟಿ ಶಾಕ್

**ಬೆಳಗಾವಿ:** ಆದಾಯ ತೆರಿಗೆ ವಂಚನೆಯ ಹಿನ್ನೆಲೆಯಲ್ಲಿ ಉದ್ಯಮಿಗಳಾದ ವಿನೋದ್ ದೊಡ್ಡಣ್ಣವರ, ಪುಷ್ಪದಂತ ದೊಡ್ಡಣ್ಣವರ, ಅಜಿತ್ ಪಟೇಲ್ ಮತ್ತು ಅಶೋಕ ಹುಂಬರವಾಡಿ ಅವರ ಮನೆಗಳು ಮತ್ತು ಕಚೇರಿಗಳ ಮೇಲೆ ಇಂದು ಬೆಳಗ್ಗೆ ದಾಳಿ ಮಾಡಿದ ಆದಾಯ ತೆರಿಗೆ ಇಲಾಖೆ(ಐಟಿ) ಅಧಿಕಾರಿಗಳು, ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ.

ಸಕ್ಕರೆ ಕಾರ್ಖಾನೆ, ಕಬ್ಬಿಣ ಹಾಗೂ ಗ್ರ್ಯಾನೈಟ್ ಉದ್ಯಮಿಯಾಗಿರುವ ದೊಡ್ಡಣ್ಣವರ ಕುಟುಂಬದ ವಿನೋದ್ ದೊಡ್ಡಣ್ಣವರ, ಪುಷ್ಪದಂತ ದೊಡ್ಡಣ್ಣವರ ಅವರು ದೇಶ-ವಿದೇಶಗಳಿಗೆ ಕಬ್ಬಿಣ ಹಾಗೂ ಗ್ರ್ಯಾನೈಟ್ ರಫ್ತು ಮಾಡುತ್ತಾರೆ. ಅಲ್ಲದೇ, ಕಾಗವಾಡ ತಾಲೂಕಿನಲ್ಲಿ ಎರಡು ಸಕ್ಕರೆ ಕಾರ್ಖಾನೆಗಳನ್ನು ಇವರ ಕುಟುಂಬ ಹೊಂದಿದೆ.



ಅದೇ ರೀತಿ, ಬೆಳಗಾವಿಯ ಕ್ಯಾಂಪ್ ಪ್ರದೇಶದಲ್ಲಿರುವ ಉದ್ಯಮಿ ಅಜಿತ್ ಪಟೇಲ್, ಗಣೇಶಪುರದಲ್ಲಿರುವ ಅಶೋಕ ಐರನ್ ಮಾಲೀಕ ಅಶೋಕ ಹುಂಬರವಾಡಿ ಮನೆಯಲ್ಲೂ ಅಧಿಕಾರಿಗಳು ದಾಖಲೆ ಪರಿಶೀಲನೆಯಲ್ಲಿ ತೊಡಗಿದ್ದಾರೆ.

ಬೆಂಗಳೂರಿನ ಐಟಿ ಅಧಿಕಾರಿಗಳು ಉದ್ಯಮಿಗಳ ಮನೆ ಕಚೇರಿಗಳ ಮೇಲೆ ಏಕಕಾಲದ ದಾಳಿ ನಡೆಸಿದ್ದಾರೆ. ಗೋವಾ ಮತ್ತು ಬೆಂಗಳೂರಿನ ಆದಾಯ ತೆರಿಗೆ ಅಧಿಕಾರಿ ಈ ದಾಳಿಯ ತಂಡದಲ್ಲಿದ್ದಾರೆ.

ದಾಳಿಯ ವೇಳೆ ಉದ್ಯಮಗಳಿಗೆ ಸೇರಿದ ಮಹತ್ವದ ದಾಖಲೆಗಳನ್ನು ಅಧಿಕಾರಿಗಳು ಪತ್ತೆ ಹಚ್ಚಿದ್ದಾರೆಎಂದು ಮೂಲಗಳು ತಿಳಿಸಿವೆ.

## ಈಗಿನ ಬಿಜೆಪಿ ನೋಡಿದ್ರೆ ದುಃಖ ಆಗುತ್ತೆ

**ಬೆಳಗಾವಿ:** ರಾಜ್ಯ ಬಿಜೆಪಿಯಲ್ಲಿ ಬಣ ರಾಜಕೀಯ, ಗೊಂದಲ ಹಿನ್ನೆಲೆಯಲ್ಲಿ ಈ ಬಗ್ಗೆ ಮಾತನಾಡಿರುವ ಮಾಜಿ ಸಚಿವ ಕೆ.ಸ್ ಈಶ್ವರಪ್ಪ, ಬಿಜೆಪಿ ಪಕ್ಷದ ಈಗಿನ ಸ್ಥಿತಿ ನೋಡಿದ್ರೆ ದುಃಖ ಆಗುತ್ತೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.



ಬೆಳಗಾವಿ ಜಿಲ್ಲೆಯ ರಾಯಭಾಗ ತಾಲೂಕಿನ ಮುಗಳಖೋಡದ ಜಿಡಗಾ ಮಠದಲ್ಲಿ ಮಾತನಾಡಿದ ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ, ಬಿಜೆಪಿ ನಾನೇ ಕಟ್ಟಿ ಬೆಳೆಸಿದ್ದೇನೆ ಎಂಬ ಅಹಂಕಾರ ನನ್ನಲ್ಲಿ ಇಲ್ಲ. ನನ್ನಂತೆ ಸಾಕಷ್ಟು ಹಿರಿಯರು ತಪಸ್ಸು ಮಾಡಿ ಬಿಜೆಪಿ ಪಕ್ಷ ಕಟ್ಟಿದ್ದಾರೆ. ಈಗಿನ ಪರಿಸ್ಥಿತಿ ನೋಡಿದ್ರೆ ಅವರಿಗೆಲ್ಲ ಬೇಸರ ಇದೆ, ನೋವು ಇದೆ, ಆ ನೋವು ಯಾರ ಹತ್ತಿರ ಹೇಳಿಕೊಳ್ಳಬೇಕು ಎಂಬ ಗೊಂದಲ ಇದೆ. ಬಿಜೆಪಿ ನನ್ನ ತಾಯಿ, ಮೊದಲಿನಂತೆ ಪಕ್ಷದ ಸಿದ್ದಾಂತ ಪ್ರಕಾರ ಎಲ್ಲವೂ ಸರಿ ನಡೆದರೆ ಪಕ್ಷಕ್ಕೆ ಬರುವೆ ಎಂದರು. ಪುಟ 2

## ಬೆಂಗಳೂರು ಕರಗಕ್ಕೆ ದಿನಾಂಕ ನಿಗದಿ

ಬೆಂಗಳೂರು: ವಿಶ್ವವಿಖ್ಯಾತ ಬೆಂಗಳೂರು ಕರಗ ಶಕ್ತ್ಯೋತ್ಸವಕ್ಕೆ ದಿನಾಂಕ ನಿಗದಿಯಾಗಿದ್ದು, ಏಪ್ರಿಲ್ 4ರಿಂದ ಏಪ್ರಿಲ್ 14 ರವರೆಗೆ ಬೆಂಗಳೂರು ಕರಗ ಮಹೋತ್ಸವ ನಡೆಯಲಿದೆ.

ಏಪ್ರಿಲ್ 12ರ ಚೈತ್ರ ಪೌರ್ಣಮಿಯಂದು ಆರಂಭವಾದ ಕರಗೋತ್ಸವ ಒಟ್ಟು 11 ದಿನಗಳ ಕಾಲ ನಡೆಯಲಿದ್ದು, ಈ ಬಾರಿಯೂ ಪೂಜಾರಿ ಎ.ಜ್ಞಾನೇಂದ್ರ ಕರಗ ಹೊರಲಿದ್ದಾರೆ.



ಕರಗ ಸಂಬಂಧ ಸೋಮವಾರ ರಾತ್ರಿ ಸಭೆ ನಡೆಸಿದ್ದು, ಕರಗ ಹೊರುವ ಪೂಜಾರಿಯಾಗಿ ಎ.ಜ್ಞಾನೇಂದ್ರ ಒಮ್ಮತದಿಂದ ಆಯ್ಕೆಯಾದರು. ಇವರು 14 ವರ್ಷಗಳಿಂದ ಬೆಂಗಳೂರು ಕರಗ ಹೊರುತ್ತಿದ್ದಾರೆ. ಈ ವರ್ಷ ದ್ರೌಪದಿ ದೇವಿ ಕರಗ ಹೊತ್ತರೆ ಹದಿನೈದು ಬಾರಿ ಕರಗ ಹೊತ್ತಂತೆ ಆಗಲಿದೆ. ಈ ವರ್ಷ ಅವರು ಕೊನೆಯ ಬಾರಿ ಕರಗ ಹೊರಲಿದ್ದಾರೆ.

ಮುಜರಾಯಿ ಇಲಾಖೆಯ ಕಾರ್ಯನಿರ್ವಾಹಣಾಧಿಕಾರಿ ನವೀನ್, ಧರ್ಮರಾಯ ಸ್ವಾಮಿ ದೇವಾಲಯದ ಆಡಳಿತ ಮಂಡಳಿಯ ಅಧ್ಯಕ್ಷ ಸತೀಶ್, ಖಜಾಂಚಿ ಜಿ.ಬಾಲಕೃಷ್ಣ, ವ್ಯವಸ್ಥಾಪನಾ ಸಮಿತಿ ಸದಸ್ಯ ಅಮರನಾರಾಯಣ ಸಭೆಯಲ್ಲಿ ಭಾಗವಹಿಸಿದ್ದರು.

**ಬೆಂಗಳೂರು ಕರಗದ ಹಿನ್ನೆಲೆ**

ಬೆಂಗಳೂರು ಕರಗದ ಹಿನ್ನೆಲೆ ಬಗ್ಗೆ ಕೆಲವು ಕಥೆಗಳಿವೆ. ಆದರೆ, ಈ ಪೈಕಿ ದ್ರೌಪದಿಯ ಕಥೆ ಹಾಗೂ ಹಿನ್ನೆಲೆ ಹೆಚ್ಚು ಪ್ರಚಲಿತದಲ್ಲಿದೆ. ಕುರುಕ್ಷೇತ್ರ ಯುದ್ಧದ ಬಳಿಕ ಪಾಂಡವರು ಸ್ವರ್ಗಾರೋಹಣ ಮಾಡುವಾಗ ದ್ರೌಪದಿ ಮೂರ್ಛೆ ತಪ್ಪಿ ಬಿದ್ದಿದ್ದಳಂತೆ. ಇದನ್ನು ತಿಳಿಯದೆ ಪಾಂಡವರು ಮುಂದೆ ಸಾಗಿದ್ದರು. ದ್ರೌಪದಿ ಎಚ್ಚರವಾಗಿ ನೋಡಿದಾಗ ತಿಮಿರಾಸುರ ಎಂಬ ರಾಕ್ಷಸ ದೂರದಲ್ಲಿ ನಿಂತಿದ್ದ. ಆಗ ತಿಮಿರಾಸುರನನ್ನು ನೋಡಿದ ದ್ರೌಪದಿ ಆದಿಶಕ್ತಿಯ ರೂಪವನ್ನು ತೋರುತ್ತಾಳೆ ಎಂಬ ಪ್ರತೀತಿ ಇದೆ.

ರಾಕ್ಷಸನನ್ನು ಸದೆಬಡಿಯಲು ದ್ರೌಪದಿ ತಲೆಯಿಂದ ಯಜಮಾನ, ಹಣೆಯಿಂದ ಗಣಾಚಾರಿ, ಕಿವಿಗಳಿಂದ ಗೌಡರು, ಬಾಯಿಯಿಂದ ಗಂಟೆ ಪೂಜಾರಿ, ಪುಟ 2

## 2025ರ ಹಂಪಿ ಉತ್ಸವದ ಲಾಂಛನ ಅನಾವರಣ



ವಿಜಯನಗರ: ಹಂಪಿ ಉತ್ಸವದ ವೇಳೆ ಒಂದು ವಾರಗಳ ಕಾಲ ವಿಜಯನಗರ ಜಿಲ್ಲೆಯಲ್ಲೇ ಠಿಕಾಣಿ ಹೂಡುತ್ತೇನೆ. ವಿಜೃಂಭಣೆಯಿಂದ ಹಂಪಿ ಉತ್ಸವ ಮಾಡೋಣ ಎಂದು ಉಸ್ತುವಾರಿ ಸಚಿವ ಜಮೀರ್ ಹೇಳಿದರು.ವಿಜಯನಗರ ಸಾಮ್ರಾಜ್ಯದ ಗತವೈಭವ ಸಾರುವ 2025ರ ಹಂಪಿ ಉತ್ಸವದ ಲಾಂಛನವನ್ನ ವಿಜಯನಗರ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸಚಿವ ಪುಟ 2

## ಸಹಕಾರ ಮಹಾಮಂಡಳದ ₹19 ಕೋಟಿ ಅಕ್ರಮ ವರ್ಗಾವಣೆ ಆರೋಪ: ಮೂವರ ಬಂಧನ

**ಬೆಂಗಳೂರು:** ರಾಜ್ಯ ಪತ್ತಿನ ಸಹಕಾರ ಸಂಘಗಳ ಮಹಾಮಂಡಳವು ಬೆಂಗಳೂರು ನಗರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ (ಬಿಡಿಸಿಸಿ) ಮತ್ತು ರಾಜ್ಯ ಅಪೆಕ್ಸ್ ಸಹಕಾರಿ ಬ್ಯಾಂಕ್‌ನಲ್ಲಿಟ್ಟಿದ್ದ ನಿಗದಿತ ಠೇವಣಿ (ಎಫ್‌ಡಿ) ಖಾತೆಗಳಿಂದ ₹19.34 ಕೋಟಿಯನ್ನು ಖಾಸಗಿ ವ್ಯಕ್ತಿಗಳ ಖಾತೆಗಳಿಗೆ ಅಕ್ರಮವಾಗಿ ವರ್ಗಾಯಿಸಿ ವಂಚಿಸಿರುವ ಆರೋಪ ಸಂಬಂಧ ಮೂವರನ್ನು ಅಪರಾಧ ತನಿಖಾ ಇಲಾಖೆ (ಸಿಐಡಿ) ಪೊಲೀಸರು ಬಂಧಿಸಿದ್ದಾರೆ.



ಮಹಾಮಂಡಳದ ಅಧ್ಯಕ್ಷ ರಾಜು ವಿ ಅವರು ಅಕ್ಟೋಬರ್‌ನಲ್ಲಿ ಸಲ್ಲಿಸಿದ್ದ ದೂರು ಆಧರಿಸಿ, ನಂದಿನಿ ಲೇಔಟ್ ಪೊಲೀಸ್ ಠಾಣೆಯಲ್ಲಿ ಸಂಸ್ಥೆಯ ಹಿಂದಿನ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ (ಸಿಇಒ) ಆಶಾಲತಾ ಪಿ, ಇವರ ಪತಿ ಸೋಮಶೇಖರ್ ಮತ್ತು ವಿಜಯ್ ಕಿರಣ್, ಜೆ. ಮಂಜುನಾಥ್, ಸುಜಯ್, ಬಿಡಿಸಿಸಿ ಮತ್ತು ಅಪೆಕ್ಸ್ ಬ್ಯಾಂಕ್ ಶಾಖೆಗಳ ವ್ಯವಸ್ಥಾಪಕರು ಹಾಗೂ ರಾಜ್ಯ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಲೆಕ್ಕಪರಿಶೋಧಕರ ವಿರುದ್ಧ ಪ್ರಕರಣ ದಾಖಲಾಗಿತ್ತು. ನಂದಿನಿ ಲೇಔಟ್ ಪೊಲೀಸರು ಪ್ರಾಥಮಿಕ ತನಿಖೆ ನಡೆಸಿದ್ದರು. ನಂತರ ಪ್ರಕರಣದ ತನಿಖೆಯನ್ನು ಸಿಐಡಿಗೆ ವರ್ಗಾವಣೆ ಮಾಡಲಾಗಿತ್ತು.ಪ್ರಕರಣದ ಮೊದಲ ಆರೋಪಿ ಆಶಾಲತಾ ಅವರ ಸಹೋದರನ ಪುತ್ರ ಜೆ.ಮಂಜುನಾಥ್, ಆತನ ಸ್ನೇಹಿತರಾದ ವಿಜಯ್ ಕಿರಣ್ ಮತ್ತು ಸುಜಯ್ ಅವರನ್ನು ಸಿಐಡಿ ಪೊಲೀಸರು ಬಂಧಿಸಿದ್ದಾರೆ. ಜೆ.ಮಂಜುನಾಥ್, ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ದ್ವಿತೀಯ ದರ್ಜೆ ಪುಟ 2

## ಕೋಟ್ಯಂತರ ರೂಪಾಯಿ ವಂಚನೆ: ಮೂವರ ಸೆರೆ

**ಬೆಂಗಳೂರು:** ರಾಜಕಾರಣಿಗಳ ಹೆಸರು ಬಳಸಿ ಸಾರ್ವಜನಿಕರಿಗೆ ಕೋಟ್ಯಂತರ ರೂಪಾಯಿ ವಂಚಿಸಿದ ಆರೋಪದಡಿ ಮಹಿಳೆ ಸೇರಿ ಮೂವರನ್ನು ಕೇಂದ್ರ ಅಪರಾಧ ವಿಭಾಗ (ಸಿಸಿಬಿ)ದ ಪೊಲೀಸರು ಬಂಧಿಸಿದ್ದಾರೆ.

ರೇಖಾ(38), ಈಕೆಯ ಪತಿ ಮಂಜುನಾಥಚಾರಿ(40) ಮತ್ತು ಸ್ನೇಹಿತ ಚೇತನ್(35) ಬಂಧಿತರು.

ಇತ್ತೀಚೆಗೆ ನಿಸಾರ್ ಅಹ್ಮದ್ ಎಂಬವರಿಗೆ 6 ಕೋಟಿ ರೂ. ವಂಚಿಸಿದ ಆರೋಪದಲ್ಲಿ ಪ್ರಕರಣ ದಾಖಲಿಸಿಕೊಂಡು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಆರೋಪಿಗಳ ಪೈಕಿ ರೇಖಾ ಖಾಸಗಿ ಬ್ಯಾಂಕ್ ಹಾಗೂ ಫೈನಾನ್ಸ್‌ಗಳ ಸಂಪರ್ಕ ಹೊಂದಿದ್ದು, ಸಾಲ ಕೊಡಿಸುವ ಕೆಲಸ ಮಾಡುತ್ತಿದ್ದಳು. ಇದೇ ವೇಳೆ ದೂರುದಾರ ನಿಸಾರ್ ಅಹ್ಮದ್ ಸಾಲ ಪಡೆಯಲು ರೇಖಾಳನ್ನು ಸಂಪರ್ಕಿಸಿದ್ದರು. ನಿಸಾರ್ ಅಹ್ಮದ್ ಅಪಾರ ಪ್ರಮಾಣದ ಹಣ ಹೊಂದಿರುವ ವಿಚಾರ ರೇಖಾ ಗಮನಕ್ಕೆ ಬಂದಿದೆ. ಪುಟ 2

## ಕೇಜ್ರಿವಾಲ್ ವಿರುದ್ಧ ಮಾನನಷ್ಟ ಮೊಕದ್ದಮೆ!

**ನವದೆಹಲಿ** :ಎಎಪಿ ಸಂಚಾಲಕ ಅರವಿಂದ್ ಕೇಜ್ರಿವಾಲ್ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಲು ಹರಿಯಾಣ ಸರ್ಕಾರ ತೀರ್ಮಾನಿಸಿದೆ. ಬಿಜೆಪಿ ಆಡಳಿತವಿರುವ ಹರಿಯಾಣವೂ ಚುನಾವಣೆಗೆ ಮುನ್ನ ದೆಹಲಿಯ ನೀರು ಸರಬರಾಜನ್ನು ಅಡ್ಡಿಪಡಿಸಲು ಯಮುನಾ ನೀರಿಗೆ ವಿಷವನ್ನು ಬೆರೆಸುತ್ತಿದೆ ಎಂಬ ಆರೋಪದ ಮಾಡಿದ್ದಎಎಪಿ ಸಂಚಾಲಕ ಅರವಿಂದ್ ಕೇಜ್ರಿವಾಲ್ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲು ಹರಿಯಾಣ ಸರ್ಕಾರ ಯೋಜಿಸುತ್ತಿದೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ.ದೆಹಲಿಯ ಮಾಜಿ ಮುಖ್ಯಮಂತ್ರಿ ವಿರುದ್ಧ ದೂರಿನೊಂದಿಗೆ ಕೇಸರಿ ಪಕ್ಷವು ಚುನಾವಣಾ ಆಯೋಗವನ್ನು (ಇಸಿಐ) ಸಂಪರ್ಕಿಸಲಿದೆ ಎಂದು ಮೂಲಗಳು ತಿಳಿಸಿವೆ. ಪುಟ 2

## ಲೋಕಾ ಬಲೆಗೆ ಪಿಡಿಓ

**ಮಂಡ್ಯ:** ಲಂಚ ಸ್ವೀಕರಿಸುತ್ತಿದ್ದ ವೇಳೆ ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಕೆ.ಶೆಟ್ಟಹಳ್ಳಿ ಗ್ರಾಮ ಪಂಚಾಯತಿ ಪ್ರಭಾರ ಪಿಡಿಒ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಕೆ.ಶೆಟ್ಟಹಳ್ಳಿ ಪ್ರಭಾರ ಪಿಡಿಒ ದಯಾನಂದ್ ಲೋಕಾಯುಕ್ತ ಬಲೆಗೆ ಬಿದ್ದವರು. ಇ-ಖಾತೆ ಮಾಡಿಸಿಕೊಡಲು ಅಶ್ವಥ್ ಎಂಬುವವರ ಬಳಿ ದಯಾನಂದ್ 25 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಇದೀಗ 12 ಸಾವಿರ ಹಣ ಪಡೆಯುವಾಗ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.ಲೋಕಾಯುಕ್ತ ಎಸ್ಪಿ ಸುರೇಶ್ ಬಾಬು ನೇತೃತ್ವದಲ್ಲಿ ದಾಳಿಯಾಗಿದ್ದು ದಯಾನಂದ್ ಅವರನ್ನ ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ ಎನ್ನಲಾಗಿದೆ.

## ಹಲವೆಡೆ ಎನ್ಐಎ ದಾಳಿ

ಶ್ರೀನಗರ: ಭಯೋತ್ಪಾದಕ ಕೃತ್ಯಗಳು, ದುಷ್ಕೃತ್ಯಕ್ಕೆ ಪಿತೂರಿ ಹಾಗು ಸ್ಥಳೀಯೇತರ ಜನರ ಹತ್ಯೆ ಪ್ರಕರಣಗಳ ತನಿಖೆ ನಡೆಸುತ್ತಿರುವ ರಾಷ್ಟ್ರೀಯ ತನಿಖಾ ದಳ (ಎನ್ಐಎ) ಇಂದು ಕಾಶ್ಮೀರದ ಹಲವೆಡೆ ದಾಳಿ ನಡೆಸುತ್ತಿದೆ. ಶ್ರೀನಗರ, ಸೊಪೋರ್ ಮತ್ತು ಬುಡ್ಗಾಮ್ ಸೇರಿದಂತೆ ಹಲವು ಸ್ಥಳದಲ್ಲಿ ದಾಳಿ ಮುಂದುವರೆದಿದೆ. 2024ರ ಫೆಬ್ರವರಿ 7ರಂದು ಶ್ರೀನಗರದ ಶಲ್ಲಾ ಕಡಲ್ ಸಮೀಪ ಇಬ್ಬರು ಸ್ಥಳೀಯರಲ್ಲದ ಪಂಜಾಬ್ ನೌಕರರ ಹತ್ಯೆ ನಡೆದಿತ್ತು. ಅಮೃತ್‌ಪಾಲ್ ಸಿಂಗ್ ಮತ್ತು ರೋಹಿತ್ ಮಶಿಹ್ ಎಂಬವರನ್ನು ಎಲ್ಇಟಿ ಉಗ್ರ ಸಂಘಟನೆಯ ನಂಟು ಹೊಂದಿರುವ ದಿ ರೆಸಿಸ್ಟೆಂಟ್ ಫ್ರಂಟ್ ಉಗ್ರರು ಕೊಂದಿದ್ದರು. 2024ರ ಆಗಸ್ಟ್‌ನಲ್ಲಿ ಪಾಕಿಸ್ತಾನದ ಲಷ್ಕರ್–ಎ–ತೊಯ್ಬಾ ಉಗ್ರ ಸೇರಿದಂತೆ ನಾಲ್ವರ ವಿರುದ್ಧ ಎನ್ಐಎ ಚಾರ್ಜ್‌ಶೀಟ್ ದಾಖಲಿಸಿತ್ತು. ಈ ಚಾರ್ಜ್‌ಶೀಟ್ ಪ್ರಕಾರ, ಆದಿಲ್ ಮಂಜೂರ್ ಲಾಂಗೂ ಎಂಬ ಉಗ್ರ ಇಬ್ಬರು ಕಾರ್ಮಿಕರ ಮೇಲೆ ಗುಂಡು ಹಾರಿಸಿ ಹತ್ಯೆಗೈದಿದ್ದ. ಈ ವೇಳೆ ಗಂಭೀರವಾಗಿ ಗಾಯಗೊಂಡಿದ್ದ ಮಶಿಹ್ ಒಂದು ದಿನದ ಬಳಿಕ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದ. ಲಾಂಗೂ ಹೊರತಾಗಿ, ಚಾರ್ಜ್‌ಶೀಟ್‌ನಲ್ಲಿ ಎನ್ಐಎ ಅಹ್ರಾನ್ ರಸೂಲ್ ದಾರ್ ಅಲಿಯಾಸ್ ತೋಟಾ, ದಾವೂದ್ ಮತ್ತು ಪಾಕಿಸ್ತಾನದ ಹ್ಯಾಂಡ್ಲರ್ ಜಹಂಗೀರ್ ಅಲಿಯಾಸ್ ಪೀರ್ ಸಾಹಬ್ ಎಂಬಾತನೂ ಆರೋಪಿ ಎಂದು ಉಲ್ಲೇಖಿಸಿದೆ. ಜಮ್ಮು ನ್ಯಾಯಾಲಯಕ್ಕೆ ಜಾರ್ಜ್‌ಶೀಟ್ ಸಲ್ಲಿಸಲಾಗಿದೆ. ಸೋಪೋರ್‌ನ ಎರಡು ಸ್ಥಳಗಳಲ್ಲದೇ ಶ್ರೀನಗರದಲ್ಲಿರುವ ಉದ್ಯಮಿಯೊಬ್ಬರ ಕುಟುಂಬಕ್ಕೆ ಸೇರಿದ ಮನೆಯ ಮೇಲೂ ಎನ್ಐಎ ದಾಳಿ ನಡೆಸಿದೆ ಎಂದು ತಿಳಿದು ಬಂದಿದೆ.

## ಮರದ ನಿರ್ಮಿತಿ ಕುಸಿದು 5 ಸಾವು, 40 ಮಂದಿಗೆ ಗಾಯ

**ಭಗ್ಪತ್:** ಜೈನ ಸಮುದಾಯದ ಕಾರ್ಯಕ್ರಮಕ್ಕೆ ನಿರ್ಮಿಸಲಾಗಿದ್ದ ಮರದ ನಿರ್ಮಿತಿ ಕುಸಿದು ಐವರು ಸಾವನ್ನಪ್ಪಿ, 40 ಮಂದಿ ಗಾಯಗೊಂಡ ಘಟನೆ ಉತ್ತರ ಪ್ರದೇಶದ ಭಗ್ಪತ್‌ನ ಬರುತ್ ಎಂಬಲ್ಲಿ ಮಂಗಳವಾರ ನಡೆದಿದೆ. ಈ ಕುರಿತು ಜಿಲ್ಲಾಧಿಕಾರಿ ಅಸ್ಮಿತ ಲಾಲ್ ಪ್ರತಿಕ್ರಿಯಿಸಿ, " ಗಾಯಾಳುಗಳನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಈಗಾಗಲೇ 20 ಮಂದಿ ಚಿಕಿತ್ಸೆ ಪಡೆದು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ" ಎಂದರು.

ಭಗ್ಪತ್ ಎಸ್‌ಪಿ ಅರ್ಪಿತ ವಿಜಯ್‌ವರ್ಗೀಯಾ ಮಾತನಾಡಿ, "ಘಟನೆಯ ತನಿಖೆ ನಡೆಯುತ್ತಿದೆ. 2–3 ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ" ಎಂದು ತಿಳಿಸಿದರು.

ಕಳೆದ 30 ವರ್ಷಗಳಿಂದಲೂ ಬರುತ್‌ನಲ್ಲಿ ಜೈನ ಸಮುದಾಯ ಲಡ್ಡು ಮಹೋತ್ಸವ ಕಾರ್ಯಕ್ರಮ ಆಯೋಜಿಸುತ್ತಿದೆ. ಈ ಬಾರಿ ಮರದ ನಿರ್ಮಿತಿ ಕುಸಿದಿದ್ದು, ಘಟನೆ ಸಂಭವಿಸಿತು. ಜಿಲ್ಲಾಡಳಿತ ಮತ್ತು ಅಗ್ನಿ ಶಾಮಕದಳ ಸ್ಥಳಕ್ಕೆ ಧಾವಿಸಿ, ರಕ್ಷಣಾ ಕಾರ್ಯ ನಡೆಸಿದೆ" ಎಂದು ಅವರು ಮಾಹಿತಿ ನೀಡಿದರು.

ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಸಿಎಂ ಯೋಗಿ ಆದಿತ್ಯನಾಥ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

# ಫೈನಾನ್ಸ್ ಹಾವಳಿ: ಮಿತಿ ಮೀರಿ ವರ್ತಿಸಿದ್ರೆ ಕ್ರಿಮಿನಲ್ ಕೇಸ್ ದಾಖಲಿಸಿ

**ಬೆಂಗಳೂರು:** ಮೈಕ್ರೋ ಫೈನಾನ್ಸ್ ಕಂಪೆನಿಗಳು ಸಾಲ ಮರುಪಾವತಿ ವಿಚಾರದಲ್ಲಿ ಜನರಿಗೆ ಕಿರುಕುಳ ನೀಡುವುದು ಕಂಡು ಬಂದರೆ ಕ್ರಿಮಿನಲ್ ಪ್ರಕರಣ ದಾಖಲಿಸಿ ಎಂದು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ವಿಕಾಸಸೌಧದಲ್ಲಿ ಜಿಲ್ಲಾಧಿಕಾರಿಗಳ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ನಂತರ ಪತ್ರಿಕಾಗೋಷ್ಠಿ ನಡೆಸಿ ಮಾಹಿತಿ ನೀಡಿದ ಸಚಿವ ಕೃಷ್ಣಭೈರೇಗೌಡ ಅವರು, "ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪೆನಿಗಳು 59 ಸಾವಿರ ಕೋಟಿ ರೂ. ಸಾಲ ನೀಡಿವೆ. ಅಲ್ಲದೆ, ತಮ್ಮ ಸಾಮರ್ಥ್ಯ ವಿಸ್ತರಿಸಿಕೊಳ್ಳುವ ಸಲುವಾಗಿ ಆರ್‌ಬಿಐ ಗೈಡ್ ಲೈನ್ಸ್ ಉಲ್ಲಂಘಿಸಿ ಸಾಲ ನೀಡುತ್ತಿವೆ. ಸಾಲ ನೀಡುವಾಗ ಸಾಲ ಪಡೆದವರ ಆರ್ಥಿಕ ಸಾಮರ್ಥ್ಯವನ್ನು ಕಡೆಗಣಿಸಲಾಗುತ್ತಿರುವುದು ಅಹಿತಕರ ಪ್ರಸಂಗಗಳಿಗೆ ಕಾರಣವಾಗುತ್ತಿದೆ" ಎಂದು ಆತಂಕ ವ್ಯಕ್ತಪಡಿಸಿದರು.

ಓರ್ವ ವ್ಯಕ್ತಿಗೆ 2 ಲಕ್ಷಕ್ಕಿಂತ ಹೆಚ್ಚು ಸಾಲ ನೀಡಬಾರದು ಎಂದು ಆರ್ ಬಿಐ ಗೈಡ್ಲೈನ್ಸ್ ಇದೆ. ಇದನ್ನು ಯಾರೂ ಅನುಸರಿಸುತ್ತಿಲ್ಲ. ಓರ್ವ ವ್ಯಕ್ತಿಗೆ 5–6 ಲಕ್ಷ ರೂ. ಸಾಲ ನೀಡಲಾಗುತ್ತಿದೆ. ಈ ಮೂಲಕ ಬಡವರನ್ನು ಸಾಲದ ಸುಳಿಗೆ ಸಿಲುಕಿಸಲಾಗುತ್ತಿದೆ. ಸಾಲ ಮರುಪಾವತಿ ಮಾಡದಿದ್ದರೆ ಮೈಕ್ರೋ ಫೈನಾನ್ಸ್ ಕಂಪೆನಿಗಳ ಅಸ್ತಿತ್ವಕ್ಕೂ ತೊಂದರೆಯಾಗಲಿದೆ. ಹೀಗಾಗಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳು ಈ ವಾರದೊಳಗೆ ಮೈಕ್ರೋ ಫೈನಾನ್ಸ್ ಕಂಪನಿಗಳ ಮುಖ್ಯಸ್ಥರ ಜೊತೆಗೆ ಸಭೆ ನಡೆಸಿ ಸಾಲ ವಸೂಲಾತಿಗೆ ಆರ್ ಬಿಐ ನಿಗದಿಪಡಿಸಿರುವ ಮಾದರಿ ಕಾರ್ಯಾಚರಣೆಯನ್ನು ಪಾಲನೆ ಮಾಡಲು ಹಾಗೂ ಬೇಜಾಬ್ದಾರಿಯಿಂದ ಸಾಲ ನೀಡುವುದನ್ನೂ ನಿಗ್ರಹಿಸಲು ಸೂಚಿಸಲಾಗಿದೆ ಎಂದರು.

ಮೈಕ್ರೋ ಫೈನಾನ್ಸ್ ಕಂಪೆನಿಗಳ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಕೇಂದ್ರ ಸರ್ಕಾರ ಯಾವುದೇ ವಿಶೇಷ ಅಧಿಕಾರ ನೀಡಿಲ್ಲ. ಆದರೆ, ರಾಜ್ಯ ಸರ್ಕಾರವೇ ತನ್ನ ಅಧಿಕಾರದ ಮಿತಿಯಲ್ಲಿ ಬೇರೆ ಬೇರೆ ಕಾನೂನುಗಳ ಮೂಲಕ ಮೈಕ್ರೋ ಫೈನಾನ್ಸ್‌ಗಳ ಅಕ್ರಮಗಳಿಗೆ ಕಡಿವಾಣ ಹಾಕಲಿದೆ. ಇಂತಹ ಕಂಪೆನಿಗಳ ಅವ್ಯಾಹತ ಅಕ್ರಮಗಳನ್ನು ಕಂಡು ರಾಜ್ಯ ಸರ್ಕಾರ ಸುಮ್ಮನೆ ಕೂರಲು ಸಾಧ್ಯವಿಲ್ಲ. ಇದನ್ನು ಹೀಗೆ ಬಿಟ್ಟರೆ ಮುಂದಿನ ದಿನಗಳಲ್ಲಿ ಇನ್ನೂ ದೊಡ್ಡ ಮಟ್ಟದ ಅನಾಹುತಗಳು ಸಂಭವಿಸುವ ಸಾಧ್ಯತೆ ಇದೆ. ಹೀಗಾಗಿ ರಾಜ್ಯ ಸರ್ಕಾರ ಮಧ್ಯ ಪ್ರವೇಶಿಸಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ ಎಂದು ತಿಳಿಸಿದರು.

**ನಗರ ವ್ಯಾಪ್ತಿಯಲ್ಲಿ ಇ–ಖಾತಾ ಇಲ್ಲದ ಎಲ್ಲಾ ಆಸ್ತಿಗಳಿಗೂ ಬಿ–ಖಾತಾ.!:** ಬೆಂಗಳೂರು ಹೊರತುಪಡಿಸಿ ರಾಜ್ಯದ ಬೇರೆ ಬೇರೆ ಸ್ಥಳೀಯ ಸಂಸ್ಥೆಗಳ ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ 55 ಲಕ್ಷ ನಿವೇಶನಗಳಿವೆ. ಈ ಪೈಕಿ 22 ಲಕ್ಷ ನಿವೇಶನ ಮಾಲೀಕರು ಇ– ಖಾತಾ ಮಾಡಿಸಿದ್ದಾರೆ. ಆದರೆ, 30 ರಿಂದ 32 ಲಕ್ಷ ನಿವೇಶನ ಆಸ್ತಿಗಳಿಗೆ ಯಾವುದೇ ರೀತಿಯಾದ ಇ–ದಾಖಲೆ ಇರುವುದಿಲ್ಲ. ಈ ಎಲ್ಲರಿಗೂ ಒನ್ಟೈಮ್ ಮಾದರಿಯಲ್ಲಿ ಬಿ–ಖಾತಾ ನೀಡಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಸಿಎಂ ಸಿದ್ದರಾಮಯ್ಯನವರು ಜನವರಿ7 ರಂದು ಸಭೆ ನಡೆಸಿ ಫೆ.10 ರಿಂದ ದಾಖಲೆ ಇಲ್ಲದ ನಿವೇಶನಗಳ ಮಾಲೀಕರಿಗೆ ಒಮ್ಮೆ ಇ–ಆಸ್ತಿ ನಮೂದಿಸಿ ಬಿ–ಖಾತಾ ಸಮಾನಾಂತರ ದಾಖಲೆ ನೀಡಬೇಕು ಎಂದು ಸೂಚನೆ ನೀಡಿದ್ದಾರೆ. ಹೀಗಾಗಿ ಇಂದು ಜಿಲ್ಲಾಧಿಕಾರಿಗಳ ಸಭೆ ನಡೆಸಿ ಸರ್ಕಾರ ಮುಖ್ಯ ಕಾರ್ಯದರ್ಶಿಗಳ ಸಮ್ಮುಖದಲ್ಲಿ ಫೆ.10 ರೊಳಗೆ ಸುತ್ತೋಲೆ ಹೊರಡಿಸಿ ಗರಿಷ್ಠ ಮೂರು ತಿಂಗಳ ಒಳಗೆ ಅಭಿಯಾನ ಮಾದರಿಯಲ್ಲಿ ಬಾಕಿ ಇರುವ ಎಲ್ಲಾ ಆಸ್ತಿಗಳಿಗೆ ಬಿ–ಖಾತಾ ಮಾಡಿಕೊಡಬೇಕು ಎಂದು ಸೂಚಿಸಲಾಗಿದೆ ಎಂದರು.

ಅನಧಿಕೃತ ನಿವೇಶನಗಳ ಬಗ್ಗೆ ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದು, ಇದೀಗ ನಾವು ಅದನ್ನು ಪಾಲಿಸಲೇಕಾದ ತುರ್ತು ಎದುರಾಗಿದೆ. ಹೀಗಾಗಿ ಎಷ್ಟು ನಿವೇಶನ ಇವೆ ಎಂದು ಗುರುತಿಸಿ ಸರ್ಕಾರವೇ ಬಿ–ಖಾತಾ ಮಾಡಿಕೊಡಲಿದೆ. ಇದಾದ ಮೇಲೆ ರಾಜ್ಯದಲ್ಲಿ ಬಿ–ಖಾತಾ ಇರುವುದಿಲ್ಲ. ಎ–ಖಾತಾ ಮಾತ್ರ ಇರಲಿದ್ದು, ಮುಂದಿನ ದಿನಗಳಲ್ಲಿಅನಧಿಕೃತ ನಿವೇಶನಗಳಿಗೆ ಅವಕಾಶವೇ ಇಲ್ಲ. ನಗರ ವ್ಯಾಪ್ತಿಯಲ್ಲಿ ಈ ಅಭಿಯಾನ ಮುಗಿಯುತ್ತಿದ್ದಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲೂ ಇದೇ ಮಾದರಿಯನ್ನು ಆರಂಭಿಸಲಾಗುವುದು ಎಂದು ಮಾಹಿತಿ ನೀಡಿದರು.

**ತಹಶೀಲ್ದಾರ್–ಎಸಿ ಕೋರ್ಟ್ ಕೇಸ್ ಮುಗಿಸಲು 6 ತಿಂಗಳ ಗಡುವು..!:** ತಹಶೀಲ್ದಾರ್ ಹಾಗೂ ಉಪ ವಿಭಾಗಾಧಿಕಾರಿಗಳ (ಎಸಿ) ನ್ಯಾಯಾಲಯಗಳಲ್ಲಿ ಅವಧಿ ಮೀರಿ ಇರುವ ಎಲ್ಲಾ ಪ್ರಕರಣಗಳ ಇತ್ಯರ್ಥಕ್ಕೆ ಆರು



ತಿಂಗಳ ಗಡುವು ನೀಡಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ತಕರಾರು ಪ್ರಕರಣಗಳನ್ನು ತಹಶೀಲ್ದಾರ್ ನ್ಯಾಯಾಲಯಗಳು 90 ದಿನಗಳಲ್ಲಿ ಇತ್ಯರ್ಥಪಡಿಸಬೇಕು ಎಂಬ ನಿಯಮವಿದೆ. ಆದರೆ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಸಂದರ್ಭದಲ್ಲಿ ಅವಧಿ ಮೀರಿದ 10,774 ಪ್ರಕರಣಗಳಿದ್ದವು. ಪ್ರಸ್ತುತ ಈ ಸಂಖ್ಯೆಯನ್ನು 369ಕ್ಕೆ ಇಳಿಸಲಾಗಿದೆ. ಈ ಹಿಂದೆ ಪ್ರತಿ ಪ್ರಕರಣಗಳ ಇತ್ಯರ್ಥಕ್ಕೆ ತಹಶೀಲ್ದಾರ್ ನ್ಯಾಯಾಲಯಗಳಲ್ಲಿ ಸರಾಸರಿ 7 ತಿಂಗಳಿಗಿಂತ ಹೆಚ್ಚು ಸಮಯ ವ್ಯಯವಾಗುತ್ತಿತ್ತು. ಆದರೆ, ಪ್ರಸ್ತುತ 67 ದಿನಕ್ಕೆ ಪ್ರಕರಣಗಳನ್ನು ವಿಲೇ ಮಾಡಲಾಗುತ್ತಿದೆ ಎಂದರು.

ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ 62,857 ಪ್ರಕರಣಗಳು ಬಾಕಿ ಇದ್ದವು. ಆದರೆ, ಇದೀಗ ಆ ಸಂಖ್ಯೆಯನ್ನು 26,726ಕ್ಕೆ ಇಳಿಸಲಾಗಿದೆ. ಕಳೆದ ಒಂದೂವರೆ ವರ್ಷದಲ್ಲಿ 36,131 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ನಾವು ಅಧಿಕಾರ ಸ್ವೀಕರಿಸುವಾಗ ಐದು ವರ್ಷಕ್ಕೆ ಮೇಲ್ಪಟ್ಟ 32,777 ಪ್ರಕರಣಗಳಿದ್ದವು, ಈ ಸಂಖ್ಯೆಯನ್ನು 6,602ಕ್ಕೆ ಇಳಿಸಲಾಗಿದೆ. ಮುಂದಿನ ಆರು ತಿಂಗಳಲ್ಲಿ ಉಳಿದ ಪ್ರಕರಣಗಳನ್ನೂ ಇತ್ಯರ್ಥಪಡಿಸಲು ಸೂಚಿಸಲಾಗಿದೆ. ಇದರಿಂದ ಜನರು ಅನಗತ್ಯವಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದು ತಪ್ಪಲಿದೆ ಎಂದು ತಿಳಿಸಿದರು.

**ಪೋಡಿ ಅಭಿಯಾನ..!:** ದಶಕಗಳ ಹಿಂದೆ ಜಮೀನು ಮಂಜೂರು ಆಗಿದ್ದರೂ ಸಹ ಸರಿಯಾದ ದಾಖಲೆ ಇಲ್ಲದವರಿಗೆ ಜಮೀನಿನ ಮಾಲೀಕತ್ವದ ಗ್ಯಾರಂಟಿ ನೀಡುವ ಸಲುವಾಗಿ ದರ್ಖಾಸ್ತು ಪೋಡಿ ಕಾರ್ಯಕ್ರಮವನ್ನು ಅಭಿಯಾನ ಮಾದರಿಯಲ್ಲಿ ಜಾರಿಗೊಳಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.ಡಿಸೆಂಬರ್ ಮೊದಲ ವಾರದಿಂದಲೇ ದರ್ಖಾಸ್ತು ಪೋಡಿ ಅಭಿಯಾನ ಶುರುವಾಗಿದ್ದು, 26 ಸಾವಿರ ಮಂಜೂರಿದಾರರ ಜಮೀನುಗಳನ್ನು ಸರ್ವೇಗೆ ಅಂಕಿತ ಹಾಕಲಾಗಿದೆ. ಈ ಪೈಕಿ 5 ಸಾವಿರ ಜನರಿಗೆ ಈಗಾಗಲೇ ಸರ್ವೇ ಮುಗಿಸಿದ್ದೇವೆ. ಈ ಎಲ್ಲರಿಗೂ ಹೊಸ ಆರ್ಟಿಸಿ, ಪಹಣಿ ಹಾಗೂ ನಕ್ಷೆ ನೀಡಲಾಗುವುದು. ಇದು ಜಮೀನಿನ ಮಾಲೀಕತ್ವದ ಗ್ಯಾರಂಟಿಯಾಗಿದ್ದು, ಈ ಅಭಿಯಾನಕ್ಕೆ "ನನ್ನ ಭೂಮಿ" ಎಂದು ಹೆಸರಿಡಲಾಗಿದೆ ಎಂದು ಮಾಹಿತಿ ನೀಡಿದರು.

ಕಳೆದ ಮೂರು ವರ್ಷದಲ್ಲಿ 5 ಸಾವಿರ ಜನರಿಗೆ ಪೋಡಿ ಮಾಡಿಕೊಡಲಾಗಿತ್ತು. ಆದರೆ, ಕಾಂಗ್ರೆಸ್ ಸರ್ಕಾರದ ಕಳೆದ ಎರಡು ತಿಂಗಳಲ್ಲಿ 5 ಸಾವಿರ ಜನರಿಗೆ ಪೋಡಿ ದುರಸ್ಥಿ ಮಾಡಲಾಗಿದೆ. ನಮ್ಮ ಗುರಿ ದೊಡ್ಡದಿದೆ. ಕನಿಷ್ಟ 5 ರಿಂದ 7 ಲಕ್ಷ ಕುಟುಂಬಗಳಿಗೆ ಪೋಡಿ ದುರಸ್ಥಿಗೊಳಿಸಬೇಕು ಎಂಬುದು ನಮ್ಮ ಗುರಿಯಾಗಿದ್ದು, ಎಲ್ಲಾ ಜಿಲ್ಲೆಗಳಲ್ಲೂ ಅಭಿಯಾನ ಮಾದರಿಯಲ್ಲಿ ಅಧಿಕಾರಿಗಳು ಕೆಲಸ ಮಾಡುತ್ತಿದ್ದಾರೆ ಎಂದು ಅವರು ತಿಳಿಸಿದರು.

**4.5 ಕೋಟಿ ರೂ. ಪ್ರೋತ್ಸಾಹ ಧನ**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಆಧಾರ್ ಸೀಡಿಂಗ್ ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಿದ ಗ್ರಾಮ ಸಹಾಯಕರು ಮತ್ತು ಗ್ರಾಮ ಲೆಕ್ಕಿಗರಿಗೆ 4.5 ಕೋಟಿ ರೂ. ಪ್ರೋತ್ಸಾಹ ಧನ ನೀಡಲು ನಿರ್ಧರಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ರಾಜ್ಯದಲ್ಲಿ 2.12 ಕೋಟಿ ಜಮೀನುಗಳನ್ನು ಆರ್ಟಿಸಿ ಜೊತೆಗೆ ಆಧಾರ್ ಜೋಡಿಸಲಾಗಿದೆ. ಇದನ್ನೆಲ್ಲಾ ಮಾಡಿದ್ದು ಗ್ರಾಮ ಸಹಾಯಕರು ಮತ್ತು ಗ್ರಾಮ ಲೆಕ್ಕಿಗರು. ಇವರು ಫೀಲ್ಡ್ ಗೆ ಹೋಗಿ ಈ ಕೆಲಸ ಮಾಡದಿದ್ದರೆ ಆಧಾರ್ ಸೀಡಿಂಗ್ ಸಾಧ್ಯವೇ ಇರುತ್ತಿರಲಿಲ್ಲ. ಹಲವರು ತಮ್ಮ ಕೈಯಿಂದ ಖರ್ಚು ಮಾಡಿ ಆಧಾರ್ ಸೀಡಿಂಗ್ ಮಾಡಿದ್ದಾರೆ. ಹೀಗಾಗಿ ಗ್ರಾಮ ಸಹಾಯಕರು ಹಾಗೂ ಗ್ರಾಮ ಲೆಕ್ಕಿಗರಿಗೆ 4.5 ಕೋಟಿ ರೂ. ಪ್ರೋತ್ಸಾಹ ಧನ ನೀಡಬೇಕು ಎಂದು ತೀರ್ಮಾನಿಸಲಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ ಹಾಗೂ ಕಂದಾಯ ಆಯುಕ್ತರಾದ ಸುನೀಲ್ ಕುಮಾರ್ ಉಪಸ್ಥಿತರಿದ್ದರು.




**ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಡಿಸಿಎಂ ಡಿ ಕೆ ಶಿವ ಕುಮಾರ್ ಅವರನ್ನು ಸದಾ ಶಿವನಗರ ನಿವಾಸದಲ್ಲಿ ಮಂಗಳವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು.**

## ಬಾಣಂತಿ ಸಾವು: ವೈದ್ಯರ ವಿರುದ್ಧ ನಿರ್ಲಕ್ಷ್ಯ ಆರೋಪ

**ಬೆಳಗಾವಿ:** ನಗರದ ಬಿಮ್ಸ್ ಆಸ್ಪತ್ರೆಯಲ್ಲಿ ಹೆಣ್ಣು ಮಗುವಿಗೆ ಜನ್ಮ ನೀಡಿ ಬಾಣಂತಿ ಮೃತಪಟ್ಟಿರುವ ಘಟನೆ ಮಂಗಳವಾರ ಬೆಳಗಿನ ಜಾವ ಸಂಭವಿಸಿದೆ.

ಬೆಳಗಾವಿ ತಾಲೂಕಿನ ನಿಲಜಿ ಗ್ರಾಮದ ಬಾಣಂತಿ ಅಂಜಲಿ ಪಾಟೀಲ್ (31) ಮೃತಪಟ್ಟವರು. ನಾರ್ಮಲ್ ಹೆರಿಗೆ ಆಗುತ್ತದೆ ಎಂದು ವೈದ್ಯರು ಮೊದಲು ಹೇಳಿದ್ದರು. ಆಮೇಲೆ ಸಿಜೇರಿಯನ್ ಮಾಡಿದ್ದಾರೆ. ಸರಿಯಾದ ಸಮಯಕ್ಕೆ ವೈದ್ಯರು ಚಿಕಿತ್ಸೆ ನೀಡಿಲ್ಲ. ಹಾಗಾಗಿ, ಅಂಜಲಿ ಸಾವಿಗೆ ವೈದ್ಯರ ನಿರ್ಲಕ್ಷ್ಯವೇ ಕಾರಣ ಎಂದು ಕುಟುಂಬಸ್ಥರು ದೂರಿದ್ದಾರೆ. ಆಸ್ಪತ್ರೆ ಮುಂದೆ ಮೃತ ಅಂಜಲಿ ಕುಟುಂಬಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದು, ವೈದ್ಯರ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಶವಾಗಾರದ ಮುಂದೆ ಕುಟುಂಬಸ್ಥರು ಪ್ರತಿಭಟನೆ ಮಾಡಿದರು. ವೈದ್ಯರ ಸ್ಪಷ್ಟನೆ ಹೀಗಿದೆ; ಬಿಮ್ಸ್ ಹೆರಿಗೆ ವಿಭಾಗದ ಮುಖ್ಯಸ್ಥ ಡಾ. ವಸಂತ ಕಬ್ಬೂರ ಘಟನೆ ಕುರಿತು ಮಾಹಿತಿ ನೀಡಿದ್ದು, ನಿನ್ನೆ ಸಂಜೆ ನಾಲ್ಕು ಗಂಟೆಗೆ ಅಂಜಲಿ ಪಾಟೀಲ ಒಪಿಡಿಗೆ ಬಂದಿದ್ದರು. ಜ.22ಕ್ಕೆ ಅಂಜಲಿ ಅವರಿಗೆ ಹೆರಿಗೆ ದಿನಾಂಕ ನೀಡಲಾಗಿತ್ತು. ಒಪಿಡಿಯಲ್ಲಿ ಪರಿಶೀಲನೆ ನಡೆಸಿದಾಗ ಮಗುವಿನ ಹಾರ್ಟ್‌ಬೀಟ್ ಕಡಿಮೆ ಆಗಿತ್ತು. ಆ ಕಾರಣಕ್ಕೆ ಸಿಜೇರಿಯನ್ ಮೂಲಕ ರಾತ್ರಿ 11.05ಕ್ಕೆ ಹೆರಿಗೆ ಮಾಡಲಾಗಿದೆ. ಬೆಳಗ್ಗೆ 5ಕ್ಕೆ ಅಂಜಲಿ ಸಾವನ್ನಪ್ಪಿದ್ದಾರೆ. ಅವರಿಗೆ ರಕ್ತ ಹೆಪ್ಪುಗಟ್ಟಿ ಹಾಗೂ ಉಸಿರಾಟದ ಸಮಸ್ಯೆ ಕಾಣಿಸಿಕೊಂಡಿದೆ. ಅಂಜಲಿ ಸಾವಿಗೆ ಆಮ್ನಿಯೊಟಿಕ್ ಫ್ಲೂಯಿಡ್ ಎಂಬಾಲಿಸ್ ಕಾರಣ ಎಂಬುದು ಗೊತ್ತಾಗಿದೆ. ಮರಣೋತ್ತರ ಪರೀಕ್ಷೆ ನಡೆಸಲಾಗಿದೆ. ವರದಿ ಬಂದ ನಂತರ ನಿಖರ ಕಾರಣ ತಿಳಿಯಲಿದೆ ಎಂದರು. ಬಿಮ್ಸ್ ನಿರ್ದೇಶಕ ಡಾ. ಅಶೋಕಕುಮಾರ ಶೆಟ್ಟಿ ಮಾತನಾಡಿ, ಇದರಲ್ಲಿ ವೈದ್ಯರ ನಿರ್ಲಕ್ಷ್ಯ ಕಂಡು ಬಂದಿಲ್ಲ. ಪ್ರತಿವರ್ಷ ಸುಮಾರು 10 ಸಾವಿರ ಹೆರಿಗೆ ಆಗುತ್ತವೆ. ಅದರಲ್ಲಿ 6 ಸಾವಿರ ಹೈ ರಿಸ್ಕ್ ಸಿಜೇರಿಯನ್ ಆಗುತ್ತವೆ. ತಾಲೂಕು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ದಾಖಲಾದ ಗರ್ಭಿಣಿಯರು ಕೊನೆ ಘಳಿಗೆಯಲ್ಲಿ ಗಂಭೀರ ಸ್ಥಿತಿಯಲ್ಲಿ ನಮ್ಮಲ್ಲಿಗೆ ಬರುತ್ತಾರೆ. ಹಿಂದಿನ ವರ್ಷಗಳಿಗೆ ಹೋಲಿಸಿದರೆ ಈ ವರ್ಷ ಕಡಿಮೆ ಸಾವಿನ ಪ್ರಕರಣಗಳಿವೆ ಎಂದು ಮಾಹಿತಿ ನೀಡಿದರು.

ಮೊದಲ ಪುಟದಿಂದ

## ಛಾಟಿ ಬೀಸಿದ ಸಿಎಂ

ಒಳಗೆ ಆರೋಪಪಟ್ಟಿ ದಾಖಲಿಸಲೇಬೇಕು. ಯಾರಾದರೂ ನ್ಯಾಯಾಲಯದಿಂದ ತಡೆಯಾಜ್ಞೆ ತಂದರೆ ಅಡ್ವೊಕೇಟ್ ಜನರಲ್ ಜೊತೆ ಚರ್ಚಿಸಿ ತಡೆಯಾಜ್ಞೆ ತೆರವುಗೊಳಿಸಬೇಕು ಎಂದು ಸಿಎಂ ಸ್ಪಷ್ಟ ಸೂಚನೆ ನೀಡಿದರು.

ಜಾತಿ ದೌರ್ಜನ್ಯ ಪ್ರಕರಣಗಳಲ್ಲಿ ಶಿಕ್ಷೆಯ ಪ್ರಮಾಣ ಹಲವು ದಶಕಗಳಿಂದ 3% ಗಿಂತ ಹೆಚ್ಚಾಗಿಲ್ಲ. ಈ ಕಾರಣಕ್ಕೂ ನಾನು ಡಿಸಿಆರ್‌ಇಸೆಲ್ ಗಳಿಗೆ ಪೊಲೀಸ್ ಠಾಣೆ ಶಕ್ತಿ ನೀಡಿದ್ದಾಗಿದೆ. ಇನ್ನೂ ಶಿಕ್ಷೆ ಪ್ರಮಾಣ ಹೆಚ್ಚಾಗದಿದ್ದರೆ ಹೇಗೆ? ಪ್ರಕರಣಗಳ ತನಿಖೆಯ ಗುಣಮಟ್ಟದ ಬಗ್ಗೆ ಗಮನ ಹರಿಸುವಂತೆ ಅಧಿಕಾರಿಗಳಿಗೆ ಸಿಎಂ ಸೂಚಿಸಿದರು.

ದೌರ್ಜನ್ಯ ಪ್ರಕರಣಗಳಲ್ಲಿ ಶಿಕ್ಷೆ ಪ್ರಮಾಣ ಕಡಿಮೆ ಇದೆ, ಕೌಂಟರ್ ಪ್ರಕರಣ ಶಿಕ್ಷೆ ಪ್ರಮಾಣ ಹೆಚ್ಚಾಗಿದೆಯೇ ಎಂದು ವಿಧಾನ ಪರಿಷತ್ ಸದಸ್ಯ ಸುಧಾಮ್ ದಾಸ್ ಅವರು ಅಸಮಾಧಾನದಿಂದ ಸಭೆಯಲ್ಲಿ ಪ್ರಶ್ನಿಸಿದರು. 3 ವಿಶೇಷ ನ್ಯಾಯಾಲಯಗಳಿಗೆ ಮಾತ್ರ ಅನುಮತಿ ಸಿಕ್ಕಿದೆ. ಇನ್ನೂ 24 ವಿಶೇಷ ನ್ಯಾಯಾಲಯಗಳಿಗೆ ಅನುಮತಿ ದೊರೆತಿಲ್ಲ ಎಂದು ಮುಖ್ಯಮಂತ್ರಿಗಳ ಗಮನ ಸೆಳೆದರು. ಬಳಿಕ ಈ ಬಗ್ಗೆ ತಾವು ತೀವ್ರವಾಗಿ ಗಮನಿಸಿ ಬಾಕಿ ನ್ಯಾಯಾಲಯಗಳಿಗೆ ಬೇಗ ಅನುಮತಿ ಸಿಗುವ ದಿಕ್ಕಿನಲ್ಲಿ ಗಮನ ಹರಿಸುವುದಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ತಿಳಿಸಿದರು.

ಪೊಲೀಸ್ ಇಲಾಖೆಯಲ್ಲಿ ಸೀನಿಯರಿಟಿ ಲೀಸ್ಟ್ ಉಲ್ಲಂಘನೆ ಆಗಿ ಪರಿಶಿಷ್ಠರಿಗೆ ಅನ್ಯಾಯ ಆಗುತ್ತಿದೆ. ಸಮಿತಿ ಮುಂದೆ ದೂರು ಬಂದು ನಾವು ಹಿರಿಯ ಅಧಿಕಾರಿಗಳ ಗಮನಕ್ಕೂ ತಂದರೂ ಸಮಸ್ಯೆ ಬಗೆಹರಿಸುತ್ತಿಲ್ಲ ಏಕೆ? ಎಡಿಜಿಪಿ ಅಡ್ಮಿನ್ ಅವರು ಸರಿಯಾಗಿ ನಡೆದುಕೊಳ್ಳುತ್ತಿಲ್ಲ ಎಂದು ಸಂಸದ ಈ.ತುಕಾರಾಮ್ ಮತ್ತು ಶಾಸಕ ನರೇಂದ್ರಸ್ವಾಮಿ ಅವರು ಸಭೆಯ ಗಮನಕ್ಕೆ ತಂದರು. ಇದರಿಂದ ಅಸಮಾಧಾನಗೊಂಡ ಸಿಎಂ ಈ ವಿಚಾರವನ್ನು ಮುಂದಿನ ಕ್ಯಾಬಿನೆಟ್ ಗೆ ತರಲು ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರಿಗೆ ಸಿಎಂ ಸೂಚಿಸಿದರು.

ಎಲ್ಲಾ ಇಲಾಖೆಗಳೂ ಬಡ್ತಿಯಲ್ಲಿ ಮೀಸಲಾತಿಯನ್ನು ಚಾಚೂ ತಪ್ಪದೆ ಪಾಲಿಸಬೇಕು. ಪರಿಶಿಷ್ ಸಮುದಾಯದವರಿಗೆ ಅವಕಾಶ ತಪ್ಪಿಸಲು ಅಧಿಕಾರಿಗಳು ಕುಟಿಲ ನೀತಿ ಅನುಸರಿಸಿದರೆ ಸಹಿಸಲ್ಲ ಎಂದು ಎಚ್ಚರಿಕೆಯ ಸಂದೇಶ ನೀಡಿದರು.

ಇಲಾಖಾವಾರು ಮುಂಬಡ್ತಿಯಲ್ಲಿ ಆಗಿರುವ ಅನ್ಯಾಯಗಳ ಬಗ್ಗೆ ಪರಿಶೀಲಿಸಲು ಪ್ರತ್ಯೇಕ ಖಜತುಜತಿ ಮೀಟಿಂಗ್ ಕರೆಯುವಂತೆ ಮುಖ್ಯಮಂತ್ರಿಗಳು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸೂಚಿಸಿದರು.

ಪ್ರತೀ ಆರು ತಿಂಗಳಿಗೊಮ್ಮೆ ಉಸ್ತುವಾರಿ ಸಮಿತಿ ಸಭೆಯನ್ನು ಕಡ್ಡಾಯವಾಗಿ ಕರೆಯುತ್ತೇವೆ. ಈ ಸಭೆಗಳಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಕಂಡು ಬಂದರೆ ಸರ್ಕಾರ ಕ್ರಮ ತೆಗೆದುಕೊಳ್ಳುತ್ತದೆ ಎಂದು ಸಿಎಂ ಎಚ್ಚರಿಸಿದರು.

ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ಹಕ್ಕು ಪತ್ರ ಸಮರ್ಪಕವಾಗಿ ನೀಡಬೇಕು. ಯಾವುದೇ ಕಾರಣಕ್ಕೂ ಅರಣ್ಯವಾಸಿಗಳನ್ನು ಕಾಡಿನಿಂದ ಹೊರಗೆ ಹಾಕಬಾರದು ಎಂದು ಸೂಚಿಸಿದರು

ಸಭೆಗೆ ಅಧಿಕಾರಿಗಳು ನೀಡಿರುವ ಅನುಪಾಲನಾ ವರದಿಯಲ್ಲಿ ಮುಂದಿನ ಬಾರಿ ಜಿಲ್ಲಾವಾರು ಅಂಕಿ ಅಂಶ ನಮೂದಿಸಲು ಇದೇ ವೇಳೆ ಅವರು ತಾಕೀತು ಮಾಡಿದರು.

ಪರಿಶಿಷ್ಠರ ಕೊಲೆ ಮತ್ತು ಅತ್ಯಾಚಾರ ಪ್ರಕರಣಗಳಲ್ಲಿ ತನಿಖೆ ತಡ ಆದಷ್ಟೂ, ನ್ಯಾಯಾಲಯಗಳಲ್ಲಿ ವಿಚಾರಣೆ ತಡೆ ಆದಷ್ಟೂ ಸಾಕ್ಷಿ ನಾಶ ಆಗುತ್ತದೆ. ಈ ಪ್ರಕರಣಗಳಲ್ಲಿ ಃಣಡಿಜಜಟ ಠಜಿ ಠಿಡಿಠಠಜಿ ಆರೋಪಿಗಳ ಮೇಲಿರುತ್ತದೆ. ಆದ್ದರಿಂದ ಶಿಕ್ಷೆ ಪ್ರಮಾಣ ಹೆಚ್ಚಾಗಲೇ ಬೇಕು. ಯಾಕೆ ಆಗುತ್ತಿಲ್ಲ ಎಂದು ಪ್ರಶ್ನಿಸಿದ ಸಿಎಂ, ಆರೋಪ ಪಟ್ಟಿ ಶೀಘ್ರವಾಗಿ ಸಲ್ಲಿಸಿ ಸಾಕ್ಷ್ಯಗಳನ್ನು ಪರಿಣಾಮಕಾರಿಯಾಗಿ ನ್ಯಾಯಾಲಯದ ಮುಂದೆ ಹಾಜರುಪಡಿಸಿ ಎಂದು ಸಿಎಂ ಸೂಚಿಸಿದರು.

ಪೋಕ್ಸೋ ಪ್ರಕರಣಗಳು ನ್ಯಾಯಾಲಯಗಳಲ್ಲಿ ದೀರ್ಘ ಕಾಲದಿಂದ ಬಾಕಿ ಇದ್ದರೆ ಪ್ರಾಸಿಕ್ಯೂಷನ್ ಜೊತೆ ಚರ್ಚಿಸಿ ಬೇಗ ಇತ್ಯರ್ಥ ಪಡಿಸಲು, ಶೀಘ್ರ ನ್ಯಾಯದಾನಕ್ಕೆ ಕ್ರಮ ವಹಿಸುವಂತೆ ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಸೂಚಿಸಿದರು.

## ರಾಜಕೀಯ ಪ್ರೇರಿತ

ಸಿದ್ದರಾಮಯ್ಯ ಅವರ ಮೇಲೆ ಒಂದು ಕಪ್ಪು ಚುಕ್ಕೆ ಇಲ್ಲ ಕಾಂಗ್ರೆಸ್ ಸಮರ್ಥ ಆಡಳಿತ ನಡೆಸುತ್ತಿದೆ. ಹೀಗಾಗಿ ಬಿಜೆಪಿಗೆ ಸಹಿಸಲು ಆಗುತ್ತಿಲ್ಲ ಎಂದರು. ನಾವು ಸತತ ಮೂರು ಚುನಾವಣೆ ಗೆದ್ದಿದ್ದೇವೆ. ಮುಂದೆ 2028ಕ್ಕೂ ನಮ್ಮದೇ ಸರ್ಕಾರ ಬರಲಿದೆ. ಯಾವುದೇ ತೀರ್ಮಾನ ಆದರೂ ಅದು ಹೈಕಮಾಂಡ್ ತೀರ್ಮಾನ ಅಂತಿಮ ಸಿಎಂ ಡಿಸಿಎಂ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡುತ್ತೆ. ನಾವು ಮಾತನಾಡುವುದು ನಮ್ಮಲ್ಲಿ ಮಾತ್ರ . ಬಿಜೆಪಿಯಲ್ಲಿ ಇರುವಷ್ಟು ಗೊಂದಲ ನಮ್ಮಲ್ಲಿ ಇಲ್ಲ ಎಂದರು.

## ಸಿಎಂ ಪತ್ನಿ ಪಾತ್ರ ಶೂನ್ಯ

ಸೈಟ್ ಹಂಚಿಕೆ ಗೊಂದಲ ಆದ ಮೇಲೆ ಸೈಟ್ ವಾಪಸ್ ಕೂಡ ಕೊಟ್ಟಿದ್ದಾರೆ. ಇದೆಲ್ಲ ನ್ಯಾಯಮೂರ್ತಿಗಳಿಗೆ ಮನದಟ್ಟಾಗಿದೆ ಹಾಗಾಗಿ ಸ್ಟೇ ಕೊಟ್ಟಿದ್ದಾರೆ ಎಂದು ವಿವರಿಸಿದರು. ನನಗೆ ಕೊಟ್ಟಿರುವುದು ಒಂದೇ ನೋಟಿಸ್. ಸಿಎಂ ಪತ್ನಿಗೆ ಎರಡನೇ ನೋಟಿಸ್ ಕೊಟ್ಟಿದ್ದಾರಾ ಎಂಬ ಪ್ರಶ್ನೆಗೆ ನನಗೆ ಗೊತ್ತಿಲ್ಲ ಎಂದು ಬೈರತಿ ಸುರೇಶ್ ಉತ್ತರಿಸದೆ ಜಾರಿಕೊಂಡರು.

## ನೋಡಿದ್ರೆ ದುಃಖ ಆಗುತ್ತೆ

ಬಿಜೆಪಿ ಮನೆಯೊಂದು ಆರು ಬಾಗಿಲು ಎಂಬ ಕಾಂಗ್ರೆಸ್ ಹೇಳಿಕೆ ವಿಚಾರ ಕುರಿತು ಪ್ರತಿಕ್ರಿಯಿಸಿದ ಕೆ.ಎಸ್ ಈಶ್ವರಪ್ಪ, ದೇಶದಲ್ಲಿ ಬಿಜೆಪಿ ಒಂದೇ ಇದೆ. ಅದೇ ಕಾಂಗ್ರೆಸ್ ಎಷ್ಟು ಇದೆ ನೂರಾರು ಕಾಂಗ್ರೆಸ್ ಇದೆ. ದೇಶದಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಒಂದೇ ಬಾಗಿಲು ಇದೆಯಾ, ಅವರ ಪಕ್ಷದ ಬಾಗಿಲುಗಳ ಲೆಕ್ಕ ಹಾಕಲಿ. ಅಂತವರು ಬಿಜೆಪಿ ಬಗ್ಗೆ ಆಪಾದನೆ ಮಾಡುವ ಸ್ಥಿತಿಗೆ ಬಂದಿದ್ದಕ್ಕೆ ನನಗೂ ನೋವಿದೆ. ಇದು ಸರಿಯಾಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ. ಇವತ್ತಲ್ಲ ನಾಳೆ ಬಿಜೆಪಿ ಪಕ್ಷ ಎಲ್ಲವೂ ಸರಿ ಹೋಗುತ್ತೆ ಎನ್ನುವ ವಿಶ್ವಾಸ ನನಗಿದೆ ಎಂದರು.

ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ ಆಗಿರುವುದು ಕೆಲವ ವಿರೋಧ ವಿಚಾರ ಕುರಿತು ಪ್ರತಿಕ್ರಿಯಿಸಿದ ಕೆ.ಎಸ್ ಈಶ್ವರಪ್ಪ, ನಾನು ಮೊದಲಿನಿಂದಲೂ ಹೇಳುತಿದ್ದೇನೆ ಬಿಜೆಪಿ ತಂದೆ ಮಕ್ಕಳ ಪಕ್ಷ ಆಗಿದೆ. ಅದು ಪಕ್ಷದ ಆಂತರಿಕ ವಿಚಾರ ಅವರೇ ತೀರ್ಮಾನ ಮಾಡಲಿ. ಕಾಂಗ್ರೆಸ್ ಪಕ್ಷದಲ್ಲಿ ಭ್ರಷ್ಟಾಚಾರ ಆರೋಪಗಳು ಹೆಚ್ಚು ಸದ್ದು ಮಾಡುತ್ತಿದೆ. ಕಾಂಗ್ರೆಸ್ ಪಕ್ಷ ಹುಟ್ಟಿದಾಗಿನಿಂದಲೂ ಭ್ರಷ್ಟಾಚಾರ ಮಾಡುತ್ತಿದೆ. ಮಹಾತ್ಮ ಗಾಂಧೀಜಿ ಅವತ್ತೇ ಕಾಂಗ್ರೆಸ್ ಪಕ್ಷವನ್ನು ವಿಸರ್ಜನೆ ಅಂತಾ ಹೇಳಿದ್ದರು ಎಂದರು.

## ಕರಗಕ್ಕೆ ದಿನಾಂಕ ನಿಗದಿ

ಹೆಗಲಿನಿಂದ ವೀರಕುಮಾರರ ಸೃಷ್ಟಿಸುತ್ತಾಳೆ. ಹೀಗೆ ಹುಟ್ಟಿದ ಇವರೆಲ್ಲರೂ ಸೇರಿ ತಿಮಿರಾಸುರನನ್ನು ಮಣಿಸುತ್ತಾರೆ. ಇದಾ ಬಳಿಕ ಜನ್ಮ ನೀಡಿದ ತಾಯಿ ದ್ರೌಪದಿ ತಮ್ಮನ್ನು ಬಿಟ್ಟು ಕೈಸಾಲಕ್ಕೆ ತೆರಳುವುದನ್ನು ನೋಡಿ ಮಕ್ಕಳಿಗೆ ದುಃಖವಾಗುತ್ತದೆ. ಕೈಲಾಸಕ್ಕೆ ತೆರಳದಂತೆ ದ್ರೌಪದಿ ಬಳಿ ಬೇಡಿಕೊಳ್ಳುವಂತೆ ಮಕ್ಕಳಿಗೆ ಕೃಷ್ಣ ಸಲಹೆ ನೀಡುತ್ತಾನೆ. ಆಗ ವೀರಕುಮಾರರು ಕತ್ತಿಯಿಂದ ಎದೆಗೆ ತಿವಿದುಕೊಳ್ಳುತ್ತಾ ಬೇಡಿಕೊಳ್ಳುತ್ತಾರೆ. ಇದರಿಂದ ಮರುಕಗೊಂಡ ದ್ರೌಪದಿ ಪ್ರತಿ ವರ್ಷವೂ ಮೂರು ದಿನ ಭೂಮಿಗೆ ಬರುವುದಾಗಿ ಮಾತು ನೀಡಿದ್ದಳು. ಅದರಂತೆ, ಆಕೆ ಭೂಮಿಗೆ ಬರುವ ಆ ಮೂರು ದಿನಗಳನ್ನೇ ಕರಗ ಮಹೋತ್ಸವವನ್ನಾಗಿ ಆಚರಿಸಲಾಗುತ್ತದೆ ಎಂಬ ಪ್ರತೀತಿ ಇದೆ.

ಭಾವೈಕ್ಯತೆ ದೃಷ್ಟಿಯಿಂದಲೂ ಬೆಂಗಳೂರು ಕರಗ ಮಹೋತ್ಸವ ತನ್ನದೇ ಆದ ವಿಶೇಷ ಹೊಂದಿದೆ. ಕರಗ ಮೆರವಣಿಗೆ ದರ್ಗಾಕ್ಕೆ ತೆರಳುವುದು, ಮುಸ್ಲಿಂ ಸಂತನ ಸಮಾಧಿಗೆ ಭೇಟಿ ನೀಡುವುದು ಇದಕ್ಕೆ ಉದಾಹರಣೆ.

ಕರ್ನಾಟಕದ ವಿವಿಧೆಡೆ ಕರಗ ಮಹೋತ್ಸವ ಆಚರಿಸಲಾಗುತ್ತದೆ. ಆದರೆ ಬೆಂಗಳೂರು ಕರಗ ಉತ್ಸವ ಉಳಿದೆಲ್ಲವುಗಳಿಂದ ಭರ್ಜರಿಯಾಗಿ ವಿಜ್ರಂಭಣೆಯಿಂದ ನೆರವೇರುತ್ತದೆ.

## ಲಾಂಛನ ಅನಾವರಣ

ಜಮೀರ್ ಅಹ್ಮದ್ ಅನಾವರಣಗೊಳಿಸಿದರು. ಫೆಬ್ರವರಿ 28 ರಿಂದ ಮಾರ್ಚ್ 1 ಮತ್ತು 2ನೇ ತಾರೀಖಿನವರೆಗೆ ಮೂರು ದಿನಗಳ ಕಾಲ ಹಂಪಿ ಉತ್ಸವ ನಡೆಯಲಿದೆ. ಹೀಗಾಗಿ, ಕಳೆದ ಬಾರಿಗಿಂತಲೂ ಈ ಬಾರಿ ಇನ್ನಷ್ಟು ಅದ್ದೂರಿಯಾಗಿ ಮಾಡಲು ಜಿಲ್ಲಾಡಳಿತ ಸಿದ್ದತೆ ಮಾಡಿಕೊಳ್ಳುತ್ತಿದೆ. ಹಂಪಿ ಉತ್ಸವದಲ್ಲಿ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ಕೊಡಬೇಕು ಎಂಬ ಕೂಗು ಕೇಳಿ ಬರುತ್ತಿದೆ. ಆದರೆ, ಉತ್ಸವದಲ್ಲಿ ಯಾವೆಲ್ಲ ಕಲಾವಿದರು ಭಾಗಿಯಾಗಬೇಕು ಎಂಬುವುದು ಇನ್ನೂ ಅಂತಿಮವಾಗಿಲ್ಲ.

ಇನ್ನು ಹಂಪಿ ಉತ್ಸವ ಲಾಂಛನ ಅನಾವರಣ ಕಾರ್ಯಕ್ರಮದಲ್ಲಿ ಶಾಸಕರಾದ ಗವಿಯಪ್ಪ, ಎನ್‌ಟಿ ಶ್ರೀನಿವಾಸ್, ನೇಮಿರಾಜ್ ನಾಯಕ್, ಕೃಷ್ಣ ನಾಯಕ್, ಲತಾ ಮಲ್ಲಿಕಾರ್ಜುನ, ಜಿಲ್ಲಾಧಿಕಾರಿ, ಸಿಇಓ, ಡಿಸಿಎಫ್ ಅರ್ಸಲಾನ್, ಎಎಸ್‌ಪಿ ಅಕ್ರಂ ಪಾಷಾ ಸೇರಿ ಇತರರು ಭಾಗಿಯಾಗಿದ್ದರು.

## ಮೂವರ ಬಂಧನ

ಸಹಾಯಕನಾಗಿದ್ದರು. ವಿಜಯ್ ಕಿರಣ್ ಸಾಫ್ಟ್‌ವೇರ್ ಎಂಜಿನಿಯರ್ ಎಂದು ತನಿಖಾಧಿಕಾರಿಯೊಬ್ಬರು ಮಾಹಿತಿ ನೀಡಿದರು.

ಪಿ.ಆಶಾಲತಾ ಹಾಗೂ ಅವರ ಪತಿ ಎನ್.ಸೋಮಶೇಖರ್ ಬ್ಯಾಂಕಾಕ್‌ಗೆ ಪರಾರಿಯಾಗಿದ್ದಾರೆ. ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿ ಮಾಡಲಾಗಿದೆ. ದಂಪತಿ ವಿಚಾರಣೆಗೆ ಬಂದಿಲ್ಲ. ಹೀಗಾಗಿ, ಅವರ ಪತ್ತೆಗೆ ಇಂಟರ್‌ಪೋಲ್ ಮೂಲಕ ಬ್ಲೂ ಕಾರ್ನರ್ ನೋಟಿಸ್ ಹೊರಡಿಸಲು ನಿರ್ಧರಿಸಲಾಗಿದೆ ಎಂದು ತನಿಖಾಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಥಮ ದರ್ಜೆ ಸಹಾಯಕಿ ಹಾಗೂ ಅಕೌಂಟೆಂಟ್ ಹುದ್ದೆಗೆ ನೇಮಕಗೊಂಡಿದ್ದ ಆಶಾಲತಾ 2017ರಿಂದ 2023ರವರೆಗೂ ಮಹಾಮಂಡಳದ ಪ್ರಭಾರ ಸಿಇಒ ಆಗಿದ್ದರು. ಈ ಅವಧಿಯಲ್ಲಿ ಸಂಸ್ಥೆಯು ಬಿಡಿಸಿಸಿ ಮತ್ತು ಅಪೆಕ್ಸ್ ಬ್ಯಾಂಕ್ ಶಾಖೆಗಳಲ್ಲಿ ನಿಗದಿತ ಠೇವಣಿಯಲ್ಲಿ ಇರಿಸಿದ್ದ ಮೊತ್ತವನ್ನು ತನ್ನ ಪತಿ ಮತ್ತು ಇತರರ ಖಾತೆಗಳಿಗೆ ವರ್ಗಾವಣೆ ಮಾಡಿ ವಂಚಿಸಿದ್ದಾರೆ ಎಂಬುದು ತನಿಖೆಯಿಂದ ತಿಳಿದುಬಂದಿದೆ ಎಂದು ಸಿಐಡಿ ಮೂಲಗಳು ಮಾಹಿತಿ ನೀಡಿವೆ.

ಜಂಟಿ ಖಾತೆಯಾಗಿದ್ದರೂ ಅಧ್ಯಕ್ಷರ ಸಹಿ ಇಲ್ಲದೆ ಆಶಾಲತಾ ಅವರೊಬ್ಬರೇ ನಕಲಿ ಸಹಿ ಮಾಡಿ, ಪತಿ ಹಾಗೂ ಇತರೆ ಆರೋಪಿಗಳ ಖಾತೆಗೆ ಮಹಾಮಂಡಳದ ಹಣವನ್ನು ಅಕ್ರಮವಾಗಿ ವರ್ಗಾವಣೆ ಮಾಡಿದ್ದರು. ನಿಶ್ಚಿತ ಠೇವಣಿ ಇರಿಸಿದಂತೆ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಲೆಕ್ಕಪರಿಶೋಧಕರಿಗೂ ಸಲ್ಲಿಸಿದ್ದರು. ಲೆಕ್ಕಪರಿಶೋಧಕರು ಈ ನಕಲಿ ದಾಖಲೆಗಳನ್ನು ಪರಿಶೀಲಿಸದೆ ವರದಿ ನೀಡಿದ್ದರು ಎಂದು ಮೂಲಗಳು ತಿಳಿಸಿವೆ.

ಆರೋಪಿಗಳಾದ ಮಂಜುನಾಥ್, ವಿಜಯ್ ಕಿರಣ್ ಮತ್ತು ಸುಜಯ್ ತಮ್ಮ ಖಾತೆಗೆ ಜಮೆಯಾಗಿದ್ದ ಹಣವನ್ನು ಡ್ರಾ ಮಾಡಿ ಆಶಾಲತಾಗೆ ಮರಳಿಸಿದ್ದರು. ಆರೋಪಿಗಳು ಪ್ರತಿ ಹಣಕಾಸು ವ್ಯವಹಾರಕ್ಕೆ 15 ಸಾವಿರ ಕಮಿಷನ್ ಪಡೆದುಕೊಳ್ಳುತ್ತಿದ್ದರು. ಅಕ್ಟೋಬರ್ 9ರಂದು ರಾಜ್ಯದ ಪ್ರಮುಖ ಸಹಕಾರ ಸಂಸ್ಥೆಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳ ಸಭೆ ನಡೆದಿತ್ತು. ಆಗ ವಂಚನೆ ಪ್ರಕರಣ ಬಯಲಾಗಿತ್ತು. ನಂತರ ತನಿಖೆ ನಡೆಸುವಂತೆ ರಾಜು ವಿ ಅವರು ಪೊಲೀಸರಿಗೆ ದೂರು ನೀಡಿದ್ದರು.

## ಮೂವರ ಸೆರೆ

"2009ರಲ್ಲಿ ನಡೆದಿದ್ದ ಕಾರ್ಲ್‌ಟನ್ ಟವರ್ ಬೆಂಕಿ ದುರಂತದಲ್ಲಿ ನಾನೇ ಪ್ರತ್ಯಕ್ಷ ಸಾಕ್ಷಿಯಾಗಿದ್ದು, ಸಾಕ್ಷಿ ಹೇಳದಂತೆ ಮಾಲೀಕ ಹಾಗೂ ಇತರರು 25 ಕೋಟಿ ರೂ. ಹಣ ಜಮೆ ಮಾಡಿದ್ದಾರೆ. ಅದನ್ನು ಬಿಡಿಸಿಕೊಳ್ಳಲು ನಾನು ತೆರಿಗೆ ಪಾವತಿ ಮಾಡಬೇಕಿದೆ. ನೀವು 1 ಕೋಟಿ ರೂ. ಕೊಟ್ಟರೆ, 5 ಕೋಟಿ ರೂ. ವಾಪಸ್ ಕೊಡುತ್ತೇನೆ" ಎಂದು ನಿಸಾರ್‌ಗೆ ರೇಖಾ ಆಮಿಷವೊಡ್ಡಿದ್ದಳು. ಈ ಮಾತು ನಂಬಿದ ನಿಸಾರ್, ರೇಖಾ ಖಾತೆಗೆ 5.75 ಕೋಟಿ ರೂ. ವರ್ಗಾವಣೆ ಮಾಡಿದ್ದರು. ನಂತರವೂ ಆರೋಪಿ ರೇಖಾ ಹಣಕ್ಕೆಣಟಿಜಜಿಟಿಜಜ ಬೇಡಿಕೆಯಿಟ್ಟಾಗ, ತಮ್ಮ ಆಪ್ತರ ಮೂಲಕ ಪರಿಶೀಲಿಸಿದಾಗ ಆಕೆ ವಂಚಕಿ ಎಂಬುದು ಗೊತ್ತಾಗಿದೆ. ಹಣ ಕೇಳಿದಾಗ ರೇಖಾ ಪ್ರಾಣ ಬೆದರಿಕೆ ಹಾಕಿದ್ದಾರೆ. ಈ ಕುರಿತು ನಿಸಾರ್ ಅಹ್ಮದ್ ಪೊಲೀಸರಿಗೆ ದೂರು ನೀಡಿದ್ದರು. ಈ ಹಿನ್ನೆಣಟಿಜಜಿಟಿಜಜಲೆಯಲ್ಲಿ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿ ರೇಖಾ ವಿರುದ್ಧ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ 80ಕ್ಕೂ ಹೆಚ್ಚು ವಂಚನೆ ಪ್ರಕರಣಗಳು ದಾಖಲಾಗಿವೆ. ನೆರೆ ರಾಜ್ಯ ಆಂಧ್ರ ಪ್ರದೇಶದಲ್ಲೂ ವಂಚನೆ ಪ್ರಕರಣಗಳು ದಾಖಲಾಗಿವೆ ಎಂಬ ಮಾಹಿತಿಯಿದೆ.

**ರಾಜಕಾರಣಿಗಳ ಹೆಸರಲ್ಲಿ ವಂಚನೆ:** ರಾಜಕಾರಣಿಗಳ ಹೆಸರಿನಲ್ಲೂ ರೇಖಾ ವಂಚಿಸುತ್ತಿದ್ದಳು ಎಂಬುದು ಗೊತ್ತಾಗಿದೆ. ಉತ್ತರ ಕರ್ನಾಟಕದ ಮಾಜಿ ಶಾಸಕರೊಬ್ಬರ ಹೆಸರಿನಲ್ಲೂ ವಂಚಿಸಿದ್ದರು. ಅದೇ ರೀತಿ ಹಾಲಿ ಶಾಸಕರು, ಸಚಿವರ ಜೊತೆ ಪರಿಚಯಸ್ಥಳಂತೆ ಫೋಟೋ ತೆಗೆಸಿಕೊಂಡು, ಬಳಿಕ ಕೆಲ ಉದ್ಯಮಿಗಳಿಗೆ ತೋರಿಸಿ, ಜನಪ್ರತಿನಿಧಿಗಳ ಆಪ್ತರೆಂದು ನಂಬಿಸಿ ಸರ್ಕಾರಿ ಕೆಲಸ ಮಾಡಿಸಿಕೊಡುವುದಾಗಿ ಹಣ ಸುಲಿಗೆ ಮಾಡುತ್ತಿದ್ದಳು ಎಂದು ಗೊತ್ತಾಗಿದೆ. ಪ್ರಕರಣದ ತನಿಖೆ ನಡೆಯುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಮಾನನಷ್ಟ ಮೊಕದ್ದಮೆ!

ದೆಹಲಿಯಲ್ಲಿ ಚುನಾವಣಾ ರ್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ್ದ ಕೇಜ್ರಿವಾಲ್ ಅವರು, ಹರಿಯಾಣದಿಂದ ದೆಹಲಿ ಮತ್ತು ಇತರ ರಾಜ್ಯಗಳಿಗೆ ಹರಿಯುವ ಯಮುನಾದಲ್ಲಿ ಹೆಚ್ಚಿನ ಮಟ್ಟದ ಅಮೋನಿಯಾವನ್ನು ಹರಿಯಾಣದ ನಯಾಬ್ ಸಿಂಗ್ ಸೈನಿ ಸರ್ಕಾರವು ಉದ್ದೇಶಪೂರ್ವಕವಾಗಿ ನದಿಗೆ ಬಿಡುತ್ತಿದೆ ಎಂದು ಆರೋಪಿಸಿದ್ದರು.

## ತನ್ವೀರ್ ಅಹಮದ್‌ಗೆ ಸನ್ಮಾನ



**ಶಿಡ್ಲಘಟ್ಟ:** ತಾಲ್ಲೂಕಿನ ಇ.ತಿಮ್ಮಸಂದ್ರ ಗ್ರಾಮ ಪಂಚಾಯಿತಿ ಅಭಿವೃ ಅಭಿವೃದ್ಧಿ ಅಧಿಕಾರಿ ತನ್ವೀರ್ ಅಹಮದ್ ಅವರನ್ನು ಜಿಲ್ಲಾ ಆಡಳಿತದಿಂದ ಜಿಲ್ಲಾ ಕೇಂದ್ರದ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ನಡೆದ 76 ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಇ.ತಿಮ್ಮಸಂದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೈಗೊಂಡ ಅಭಿವೃದ್ಧಿ ಕೆಲಸ, ಮನೇರಗಾದ ಪರಿಣಾಮಕಾರಿ ಅನುಷ್ಠಾನ, ಪಂಚಾಯತ್‌ರಾಜ್‌ನ ಕಾರ್ಯಕ್ರಮಗಳ ಪರಿಣಾಮಕಾರಿ ಜಾರಿಗಾಗಿ ರಾಜ್ಯ ಮತ್ತು ಕೇಂದ್ರ ಸರಕಾರದ ರಾಷ್ಟ್ರೀಯ ಪಂಚಾಯತ್ ರಾಜ್ ಪ್ರಶಸ್ತಿಗೆ ಭಾಜನರಾಗಿದ್ದರು.

ಇವರು ಹೊಸದಿಲ್ಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪಿಡಿಒ ತನ್ನೀರ್ ಅಹಮದ್, ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ರಾಷ್ಟ್ರೀಯ ಪಂಚಾಯತ್‌ರಾಜ್ ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು.

ಒಟ್ಟಾರೆ ವಿಶೇಷ ಸಾಧನೆಗಾಗಿ 76ನೇ ಗಣರಾಜ್ಯೋತ್ಸವದಲ್ಲಿ ಪಿಡಿಒ ತನ್ವೀರ್ ಅಹಮದ್ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಸಿ.ಸುಧಾಕರ್, ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ, ಜಿಲ್ಲಾ ಪಂಚಾಯತಿ ಸಿಇಒ ಪ್ರಕಾಶ್ ಜಿ.ಟಿ.ನಿಟ್ಟಾಲಿ ಸನ್ಮಾನಿಸಿದ್ದಾರೆ.

## ನಾಳೆ ಗ್ರಾಮೀಣ ಕ್ರೀಡಾಕೂಟ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಗುಂಡ್ಲುಪೇಟೆ ತಾಲೂಕು ಮಟ್ಟದ ಗ್ರಾಮೀಣ ಕ್ರೀಡಾಕೂಟವನ್ನು ನಾಳೆ ಬೆಳಿಗ್ಗೆ 10.30 ಗಂಟೆಗೆ ಗುಂಡ್ಲುಪೇಟೆ ಪಟ್ಟಣದ ಡಿ. ದೇವರಾಜ ಅರಸು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಶಾಸಕರಾದ ಹೆಚ್.ಎಂ ಗಣೇಶ್ ಪ್ರಸಾದ್ ಅವರು ಕಾರ್ಯಕ್ರಮ ಉದ್ಘಾಟಿಸಿ, ಅಧ್ಯಕ್ಷತೆ ವಹಿಸುವರು. ಪುರಸಭೆ ಸದಸ್ಯರಾದ ಜಿ.ಎಸ್ ಕಿರಣ್, ತಹಶೀಲ್ದಾರ್ ಟಿ. ರಮೇಶ್ ಬಾಬು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ಕೆ.ಪಿ ವಸಂತಕುಮಾರಿ, ಕ್ಷೇತ್ರ ಶಿಕ್ಷಣಾಧಿಕಾರಿ ಟಿ.ಆರ್ ಸ್ವಾಮಿ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಎಂ. ಚಿಕ್ಕಮಲ್ಲಪ್ಪ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಜಕಣಾಚಾರಿ ಸಂಸ್ಮರಣಾ ದಿನಾಚರಣೆ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಜನವರಿ 30 ರಂದು ಬೆಳಿಗ್ಗೆ 11 ಗಂಟೆಗೆ ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಸರಳವಾಗಿ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.30ರಂದು ಜಾಥಾ

**ಚಾಮರಾಜನಗರ:** ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಜನವರಿ 30 ರಿಂದ ಫೆಬ್ರವರಿ 13ರವರೆಗೆ ಹಮ್ಮಿಕೊಳ್ಳಲಾಗಿರುವ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮದ ಅಂಗವಾಗಿ ಜನವರಿ 30 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಿಂದ ಜಿಲ್ಲಾಡಳಿತ ಭವನದವರೆಗೆ ಜಾಥಾ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೂ ದಾಖಲೆಗಳಿಗೆ ಹಣದ ಆಮಿಷ ಬೇಡ ರೈತರಿಗೆ ಕಿವಿಮಾತು



ನಾಗಮಂಗಲ: ಸಾರ್ವಜನಿಕರು ರೈತರು ತಮ್ಮ ಭೂ ದಾಖಲೆಗಳ ಹಳೆಯ ದಾಖಲೆಗಳಿಗೆ ಶಾಶ್ವತವಾಗಿ ಉಳಿಯುವಂತಹ ಗಣಕೀಕೃತ ಯೋಜನೆಗೆ ಕೃಷಿ ಸಚಿವರಾದ ಚೆಲುವರಾಯಸ್ವಾಮಿ ಅವರು ಚಾಲನೆ ನೀಡಿದರು.

ಅವರು ನಾಗಮಂಗಲ ತಾಲೂಕು ಆಡಳಿತದ ಕಚೇರಿಯಲ್ಲಿ ಭೂ ದಾಖಲೆಗಳ ಈ ಖಾತೆ ನೂತನ ಕಚೇರಿಯನ್ನು ಚಾಲನೆ ನೀಡಿ ಮಾತನಾಡಿದರು. ರೈತರು ತಮ್ಮ ಜಮೀನುಗಳ ಹಳೆಯ ದಾಖಲೆಗಳು ಗಣಕೀಕೃತ ಮಾಡಲು ನಮ್ಮ ಸರ್ಕಾರ ಕಂದಾಯ ಸಚಿವರು ಹೊಸ ಯೋಜನೆಯನ್ನು ಜಾರಿಗೆ ತರುವ ಮುಖಾಂತರ ಪೋಡಿ. ನಕಾಶೆ. ಈ ರೀತಿಯ ಹೊಸ ದಾಖಲೆಗಳು ಶಾಶ್ವತವಾಗಿ ಇರುವಂತೆ ಸ್ಥಳೀಯ ತಾಲೂಕು ಆಡಳಿತದ ಕಚೇರಿಯಲ್ಲಿ ತಮ್ಮ ಜಮೀನುಗಳ ಪೂರ್ಣ ಮಾಹಿತಿಯನ್ನು ಒಳಗೊಂಡ ದಾಖಲೆ ಇರುವುದರಿಂದ ರೈತರಿಗೆ ಸಾರ್ವಜನಿಕರಿಗೂ ಬಹು ಉಪಯುಕ್ತವಾಗಿರುವಂತಹ ಕೆಲಸವಾಗಿದ್ದು ಇಂತಹ ಯೋಜನೆಗಳಿಗೆ ಜರುರಾಗಿ ಮಾಡಿಸುವ ತಾವುಗಳು ಲಕ್ಷಾಂತರ ರೂಪಾಯಿಗಳನ್ನ ನೀಡುತ್ತಾರೆಂಬ ಮಾಹಿತಿ ಕೇಳಿದ್ದು ತಾವುಗಳು ತಾಳ್ಮೆವಹಿಸಿ ಕೆಲಸ ಮಾಡಿಸಿಕೊಳ್ಳುವುದು ತಮ್ಮಗಳ ಕರ್ತವ್ಯವೆಂದು ತಿಳಿಸಿದರು.

ಸಾರ್ವಜನಿಕರು ಇಂತಹ ದಾಖಲೆಗಳ ಉಪಯುಕ್ತ ಮಾಹಿತಿಗಳನ್ನು ಸಂಬಂಧಪಟ್ಟ ಇಲಾಕಾ ಅಧಿಕಾರಿಗಳಲ್ಲಿ ಸರಿಯಾದ ಮಾಹಿತಿ ನೀಡಿ ಇಂತಹ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಮಾತನಾಡಿದರು.

ಇದೇ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿಗಳಾದ ಆದರ್ಶ ಇಲಾಖೆ ಅಧಿಕಾರಿಗಳು ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಾಜೇಶ್ ಹಾಗೂ ಅನೇಕ ಮುಖಂಡರು ಗಣ್ಯರು ಹಾಜರಿದ್ದರು.

# ನಾಗಮಂಗಲದಲ್ಲಿ ವಾಹನ ಚಾಲನಾ ತರಬೇತಿ ಕೇಂದ್ರ

ಬೆಳ್ಳೂರು: ನಿರುದ್ಯೋಗಿ ಯುವಜನರಿಗೆ ವಾಹನ ಚಾಲನೆ ತರಬೇತಿ ನೀಡಲು ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ವಾಹನ ಚಾಲನಾ ತರಬೇತಿ ಕೇಂದ್ರ ಪ್ರಾರಂಭಿಸಲಾಗುವುದು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ತಿಳಿಸಿದರು.

ಅವರು ಬೆಳ್ಳೂರಿನಲ್ಲಿ ನಡೆದ ಜನಸಂಪರ್ಕ ಸಭೆಯನ್ನು ಉದ್ಘಾಟಿಸಿ ತರಬೇತಿ ಕೇಂದ್ರ ಪ್ರಾರಂಭಿಸಲು 9.5 ಎಕರೆ ಸ್ಥಳವನ್ನು ಪ್ರಾದೇಶಿಕ ಸಾರಿಗೆ ಇಲಾಖೆಗೆ ಹಸ್ತಾಂತರಿಸಿ ಮಾತನಾಡಿದರು.

ಭೂ ಸುರಕ್ಷಾ ಯೋಜನೆಗೆ ಚಾಲನೆ* ನಾಗಮಂಗಲ ತಾಲ್ಲೂಕು ಕಚೇರಿಯಲ್ಲಿ ಪುರಾತನ ಕಾಲದಿಂದಿರುವ ಆಸ್ತಿ ಪತ್ರಗಳು ಹಾಗೂ ಇನ್ನಿತರೆ ದಾಖಲೆಗಳನ್ನು ಡಿಜಟಲೀಕರಣ ಮಾಡುವ ಭೂ ಸುರಕ್ಷಾ ಯೋಜನೆಗೆ ಇಂದು ಚಾಲನೆ ನೀಡಲಾಗಿದೆ. ಇದರಿಂದ ಯಾವುದೇ ದಾಖಲೆಗಳನ್ನು ಮುಂದೆ ಕಳೆದುಹೋಗುವುದು, ತಿದ್ದುವುದು ತಪ್ಪುತ್ತದೆ ಎಂದರು.

31 ಕೋಟಿ ರೂ ವಚ್ಚದಲ್ಲಿ ಬೆಳ್ಳೂರು ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ವಿತರಣಾ ಜಾಲ ವ್ಯವಸ್ಥೆಯನ್ನು ಒದಗಿಸುವ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಇದರಿಂದ ಹೆಚ್ಚುವರಿ ಟ್ಯಾಂಕ್ ಹಾಗೂ ಮನೆ– ಮನೆಗೆ ಕುಡಿಯುವ ನೀರಿನ ನಳ ಸಂಪರ್ಕ ಒದಗಿಸಲಾಗುವುದು ಎಂದರು.

1 ಕೋಟಿ ರೂ ವೆಚ್ಚದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಕಟ್ಟಡ, 55 ಲಕ್ಷ ರೂ ವೆಚ್ಚದಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಕಟ್ಟಡವನ್ನು ಉದ್ಘಾಟಿಸಲಾಗಿದೆ.

5 ಕೋಟಿ ರೂ ವೆಚ್ಚದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟಲ್ ಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಇದೇ ರೀತಿ ಹಲವಾರು ಅಭಿವೃದ್ಧಿ ಕೆಲಸಗಳನ್ನು ಬೆಳ್ಳೂರಿಗೆ ನೀಡಲಾಗುತ್ತಿದೆ. ಸಾರ್ವಜನಿಕರು



ಸಹ ಜನಪ್ರತಿನಿಧಿಗಳಿಗೆ ಅಭಿವೃದ್ಧಿ ಕೆಲಸಗಳನ್ನು ನಡೆಸಲು ಸಮಯಾವಕಾಶ ನೀಡುವುದರೊಂದಿಗೆ ಸಹಕರಿಸಬೇಕು ಎಂದರು.

ಪಟ್ಟಣ ಪಂಚಾಯಿತಿಯ ವ್ಯಾಪ್ತಿ ಹೆಚ್ಚಳವಾಗುತ್ತಿದ್ದು, 70 ಕೋಟಿ ರೂ ವೆಚ್ಚದಲ್ಲಿ ಒಳ ಚರಂಡಿ ಕೆಲಸಗಳು ಹಾಗೂ ಸುತ್ತ ಮುತ್ತಲಿನ ರಸ್ತೆಯನ್ನು 7 ಕೋಟಿ ರೂ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುವುದು ಎಂದರು.

ಬೆಳ್ಳೂರಿನಲ್ಲಿ ಪಟ್ಟಣ ಪಂಚಾಯಿತಿ ಹೊಸ ಕಟ್ಟಡ, ಬಸ್ ನಿಲ್ದಾಣ, ನಾಡ ಕಚೇರಿ ಕಟ್ಟಡ ನಿರ್ಮಾಣಕ್ಕೆ ಅಗತ್ಯ ಕ್ರಮ ವಹಿಸಲಾಗುವುದು ಎಂದ ಅವರು ಬಸ್ ನಿಲ್ದಾಣ ಕ್ಕೆ ಮಂಜೂರು ಮಾಡಲಾಗಿರುವ 1ಎಕರೆ 30 ಕುಂಟೆ ಸ್ಥಳವನ್ನು ಹಸ್ತಾಂತರ ಮಾಡಿದರು.

ಸಾರ್ವಜನಿಕರು ಕುಂದು ಕೊರತೆಗಳನ್ನು ದಾಖಲಿಸಲು ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು, ತಹಶೀಲ್ದಾರ್ ಕಚೇರಿಗಳಲ್ಲಿ ಪುಸ್ತಕ ಇಡಬೇಕು.ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿ ಪ್ರತಿವಾರ ಪುಸ್ತಕವನ್ನು ಪರಿಶೀಲಿಸಿ ಸಾರ್ವಜನಿಕರ ಕುಂದುಕೊರತೆಯನ್ನು ಸಂಬಂಧಿಸಿದ ಇಲಾಖೆಗೆ ವರ್ಗಾಯಿಸಿ ಪರಿಹರಿಸಬೇಕು ಎಂದರು.

ಪ್ರತಿ ತಾಲ್ಲೂಕಿಗೆ 220 ಕೋಟಿ ರೂ* ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಪ್ರತಿ ತಾಲ್ಲೂಕಿಗೆ ಒಂದು ವರ್ಷಕ್ಕೆ 220 ಕೋಟಿ ರೂ ನೇರವಾಗಿ ಒದಗಿಸಲಾಗುವುದು. ಇದರೊಂದಿಗೆ ಹಲವಾರು ಅಭಿವೃದ್ಧಿ ಕೆಲಸಗಳನ್ನು ನಡೆಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಶ್ರೀನಿವಾಸ್, ತಹಶೀಲ್ದಾರ್ ಆದರ್ಶ, ಬೆಳ್ಳೂರು ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಲಕ್ಷ್ಮಮ್ಮ, ಮೂಡಲಪ್ಪ, ದಿನೇಶ್, ಸುರೇಶ್, ರಾಜೇಶ್, ಸೇರಿದಂತೆ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

## ರಸ್ತೆ ಭಾಗ್ಯ ನೀಡಿ: ಶಾಸಕರಿಗೆ ಮನವಿ




**ಮಾಲೂರು:** ಚುನಾವಣೆ ವೇಳೆ ಗ್ರಾಮಕ್ಕೆ ರಸ್ತೆ ಕಲ್ಪಿಸುವುದಾಗಿ ಹೇಳಿ, ಚುನಾವಣೆ ಗೆದ್ದ ನಂತರ ರಸ್ತೆ ಬಗ್ಗೆ ಎಷ್ಟೇ ಮನವಿ ಮಾಡಿದರು ಕಾರ್ಯರೂಪಕ್ಕೆ ತಂದಿಲ್ಲ. ಇನ್ನೇನು ಮತ್ತೆ ಗ್ರಾಮ ಪಂಚಾಯತಿ ಚುನಾವಣೆ ಹತ್ತಿರ ಬರುತ್ತಿದೆ, ಈಗಲಾದರೂ ರಸ್ತೆ ಭಾಗ್ಯ ನೀಡಿ ಎಂದು ಕಂಬೀಪುರ ಗ್ರಾಮಸ್ಥರು ಶಾಸಕ ಕೆ.ವೈ.ನಂಜೇಗೌಡ ಬಳಿ ಮನವಿ ಮಾಡಿಕೊಂಡಿದ್ದಾರೆ.

ಕಳೆದ ಸಾರ್ವತ್ರಿಕ ಗ್ರಾಮ ಪಂಚಾಯತಿ ಚುನಾವಣೆ ವೇಳೆ ಕಂಬೀಪುರ ಗ್ರಾಮಸ್ಥರು ಗ್ರಾಮಕ್ಕೆ ರಸ್ತೆ ಕಲ್ಪಿಸಸದೇ ಹೋದಲ್ಲಿ ಬಹಿಷ್ಕಾರ ಮಾಡುತ್ತೇವೆ ಎಂದಿದ್ದರು, ಚುನಾವಣೆ ವೇಳೆಗೆ ರಸ್ತೆ ವ್ಯವಸ್ಥೆ ಕಲ್ಪಿಸಿದೆ ಹಿನ್ನೆಲೆ ಚುನಾವಣೆ ಭಹಿಷ್ಕರಿಸಿದ್ದರು, ನಂತರ ಜಿಲ್ಲಾಡಳಿತ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಚುನಾವಣೆ ನಡೆಸಿದ್ದರು.

ರಸ್ತೆ ಮಾಡುವುದೇ ನಮ್ಮ ಮುಖ್ಯ ಗುರಿ ಎಂದು ಹೇಳಿ ಜಮುನಾ ಬಾಯಿ ರವರು ಚುನಾವಣೆಯಲ್ಲಿ ಜಯಗಳಿಸಿದ್ದರು ಇದೀಗ ಗ್ರಾಪಂನ ಅಧ್ಯಕ್ಷರು ಆಗಿದ್ದಾರೆ ಆದರೆ ರಸ್ತೆ ಬಗ್ಗೆ ಮಾತ್ರ ಯಾವುದೇ ಕ್ರಮ ಇಲ್ಲ ಎಂದು ಆರೋಪಿಸಿದ್ದಾರೆ.

ವಿದ್ಯಾರ್ಥಿಗಳಿಂದ ಶಾಸಕರು ಪ್ರೀತಿಯ ಮುತ್ತಿಗೆ : ಸಭೆ ಮುಗಿಸಿ ಹೊರಟಿದ್ದ ಶಾಸಕರಿಗೆ ಕಂಬೀಪುರದಿಂದ ಅಬ್ಬೇನಹಳ್ಳಿ ಗ್ರಾಮಕ್ಕೆ ಶಾಲೆಗೆ ಬರುವ ವಿದ್ಯಾರ್ಥಿಗಳು ಸುತ್ತಲೂ ಮುತ್ತಿಕೊಂಡು, ಶಾಲೆಗೆ ಬರಲು ತೊಂದರೆ ಆಗುತ್ತಿದೆ ರೋಡ್ ಹಾಕಿಸಿ ಸಾರ್ ಎಂದು ಪ್ರೀತಿಯಿಂದ ಮನವಿ ಮಾಡಿಕೊಂಡರು, ನಿಮ್ಮ ಬೇಸಿಗೆ ರಜೆ ನಂತರ ಮತ್ತೆ ಶಾಲೆಗೆ ಬರುವ ವೇಳೆಗೆ ರಸ್ತೆ ನಿರ್ಮಾಣ ಆಗಿರುತ್ತದೆ ಶಾಸಕರು ಪ್ರತಿಕ್ರಿಯಿಸಿದರು.

ಶಾಸಕರ ಕೆ.ವೈ.ನಂಜೇಗೌಡ ಮಾತನಾಡಿ, ಬಹುದಿನಗಳ ಸಮಸ್ಯೆ ಇದಾಗಿದ್ದು ಇನ್ನು 3 ತಿಂಗಳ ಒಳಗೆ ರಸ್ತೆ ನಿರ್ವಾಣ ಮಾಡಲಾಗುವುದು , ಅಲ್ಲದೆ ಗ್ರಾಮ ಪಂಚಾಯತಿ ಕಟ್ಟಡ ಮಾದರಿ ರೀತಿಯಲ್ಲಿ ನಿರ್ಮಾಣ ಮಾಡಲು ಸೂಚಿಸಲಾಗಿದೆ ,ಇಲ್ಲಿನ ಸದಸ್ಯರಲ್ಲಿ ಒಗ್ಗಟ್ಟಿನ ಕೊರತೆ ಇದ್ದು, ಒಗ್ಗಟ್ಟಿನಿಂದ ಅಭಿವೃದ್ಧಿ ಕೆಲಸಗಳತ್ತ ಗಮನ ನೀಡದೇ ಹೋದಲ್ಲಿ ನಾನು ಮತ್ತು ತಾಪಂ ಇಓ ಖುದ್ದು ಕ್ರಿಯಾಯೋಜನೆ ರೂಪಿಸಿ ಅಭಿವೃದ್ಧಿಗೆ ಒತ್ತು ನೀಡುತ್ತವೆ ಎಂದು ಸದಸ್ಯರಿಗೆ ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಪಿಡಿಓ ವಿರುದ್ಧ ಸದಸ್ಯ ಬೇಸರ: ಕಾರ್ಯ ನಿರ್ವಹಣಾಧಿಕಾರಿ ಉಪಸ್ಥಿತಿಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಸದಸ್ಯರು ಮತ್ತು ಅಧಿಕಾರಿಗಳೊಂದಿಗೆ ಕುಂದುಕೊರತೆ ಸಭೆ ಆಯೋಜಿಸಿದ್ದು, ಸಭೆಯಲ್ಲಿ ಗ್ರಾಮ ಪಂಚಾಯತಿ ಸದಸ್ಯ ಮಂಜುನಾಥ್ ಅವರು ಶಾಸಕರಿಗೆ ನೇರವಾಗಿ ಪಿಡಿಓ ವಿರುದ್ಧ ಅಸಮಾದಾನ ವ್ಯಕ್ತಪಡಿಸಿದರು, ಸದಸ್ಯರಿಗೆ ಬೆಲೆ ಇಲ್ಲ, ಸಾಮಾನ್ಯ ಗೌರವ ನೀಡುವುದಿಲ್ಲ ಅಧ್ಯಕ್ಷ,ಉಪಾಧ್ಯಕ್ಷ ಮತ್ತು 2 ಸದಸ್ಯರು ಮಾತ್ರ ಜನಪ್ರತಿನಿಧಿಗಳಂತೆ ನೋಡುತ್ತಾರೆ ಉಳಿದವರನ್ನು ಲೆಕ್ಕಕ್ಕಿಲ್ಲದವರಂತೆ ನೋಡುತ್ತಾರೆ ಅದನ್ನು ಸರಿಪಡಿಕೊಳ್ಳುವಂತೆ ತಿಳಿಸಿ ಎಂದಿದ್ದಾರೆ.

ಈ ಸಂದರ್ಭದಲ್ಲಿ ಪಿ.ಎಲ್.ಡಿ ಬ್ಯಾಂಕ್ ನಿರ್ದೇಶಕ ಮುನಿರಾಜು, ದರಖಾಸ್ತು ಸಮಿತಿ ಸದಸ್ಯ ಗೋಪಿನಾಥ್,ಮುಖಂಡರಾದ ತಂಬಿಹಳ್ಳಿನಾರಾಯಣಸ್ವಾಮಿ, ಅಬ್ಬೇನಹಳ್ಳಿ ರಮೇಶ್, ಡಿಇಓ ನಾಗರಾಜ್ , ಗ್ರಾಪಂ ವ್ಯಾಪ್ತಿಯ ಜಲಗಾರರು ಇದ್ದರು.

## ಜನರಿಗೆ ಉತ್ತಮ ಶಿಕ್ಷಣ,ಆರೋಗ್ಯ ಸಿಗಲು ನೆರವು

**ಶಿಡ್ಲಘಟ್ಟ:** ತಾಲ್ಲೂಕಿನ ಜನರಿಗೆ ಉತ್ತಮ ಶಿಕ್ಷಣ ಮತ್ತು ಆರೋಗ್ಯ ಸವಲತ್ತು ಸಿಗಲು ಅಗತ್ಯವಾದ ಎಲ್ಲ ರೀತಿಯ ನೆರವನ್ನು ನಮ್ಮ ಎಬಿಡಿ ಟ್ರಸ್ಟ್‌ನಿಂದ ನೀಡಲಾಗುತ್ತಿದೆ. ಐಎಎಸ್, ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ಉಚಿತವಾಗಿ ತರಬೇತಿ ಕೇಂದ್ರವನ್ನು ತೆರೆಯಲಾಗುತ್ತಿದೆ ಎಂದು ಕೆಪಿಸಿಸಿ ಸಂಯೋಜಕ, ಎಬಿಡಿ ಟ್ರಸ್ಟ್‌ನ ಮುಖ್ಯಸ್ಥ ರಾಜೀವ್‌ಗೌಡ ತಿಳಿಸಿದರು.

ತಾಲ್ಲೂಕಿನ ನಾನಾ ಕಡೆಯಿಂದ ತಮಿಳುನಾಡಿನ ಮೇಲ್ಮರುವತ್ತೂರಿನ ಓಂ ಶಕ್ತಿ ದೇವಾಲಯಕ್ಕೆ ತೆರಳಿದ 500 ಮಂದಿ ಮಾಲೆಧಾರಿಗಳಿಗೆ ಬಸ್, ಊಟ, ಪ್ರವೇಶ ಟಿಕೇಟ್ ಇನ್ನಿತರೆ ಸವಲತ್ತುಗಳನ್ನ ಕಲ್ಪಿಸಿ ಕಳುಹಿಸಿಕೊಟ್ಟು ಅವರು ಮಾತನಾಡಿದರು.

ನಗರ ಸೇರಿದಂತೆ ಪ್ರತಿ ಹೋಬಳಿ ಕೇಂದ್ರದಲ್ಲೂ ಎಬಿಡಿ ಟ್ರಸ್ಟ್‌ನಿಂದ ಆಂಬ್ಯುಲೆನ್ಸ್ ವಾಹನಗಳನ್ನು ನಿಯೋಜಿಸಿದ್ದು ತುರ್ತು ಪರಿಸ್ಥಿತಿಯಲ್ಲಿ ಸ್ಥಳದಿಂದ ಆಸ್ಪತ್ರೆಗಳಿಗೆ ಕರೆದೊಯ್ದು ಪ್ರಾಣ ಉಳಿಸುವಂತ ಕಾರ್ಯ ಮಾಡುತ್ತಿದ್ದು ಇದುವರೆಗೂ 4 ಸಾವಿರಕ್ಕೂ ಹೆಚ್ಚು ಮಂದಿಯ ಜೀವ ಉಳಿಸಿದ ಆತ್ಮ ತೃಪ್ತಿ ಇದೆ ಎಂದರು.

ಪ್ರತಿಭಾವಂತರಾಗಿದ್ದು ಉನ್ನತ ವಿದ್ಯಾಭ್ಯಾಸಕ್ಕೆ ಆರ್ಥಿಕ ತೊಂದರೆಯಾದ ವಿದ್ಯಾರ್ಥಿಗಳಿಗೆ ಹಣಕಾಸಿನ ನೆರವು ನೀಡುವ ಕಾರ್ಯ ಮುಂದುವರೆಯಲಿದೆ ಎಂದು ವಿವರಿಸಿದರು.

ಇದೀಗ ಐಎಎಸ್, ಕೆಎಎಸ್ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವಂತ ವಿದ್ಯಾರ್ಥಿಗಳಿಗೆ ಶಿಡ್ಲಘಟ್ಟದಲ್ಲೆ ಕೋಚಿಂಗ್ ಕೇಂದ್ರವನ್ನು ಮುಂದಿನ ಫೆಬ್ರವತಿ 20 ರಂದು ಆರಂಭಿಸಲಿದ್ದು ಸಂಪೂರ್ಣ ಉಚಿತವಾಗಿದ್ದು ಪ್ರತಿ ಅಭ್ಯರ್ಥಿಗೂ 1 ಲಕ್ಷ ರೂ.ವೆಚ್ಚವಾಗಲಿದ್ದು ಅಷ್ಟೂ ಹಣವನ್ನು ಎಬಿಡಿ ಟ್ರಸ್ಟ್‌ನಿಂದ ಭರಿಸಲಾಗುತ್ತದೆ ಎಂದು ಹೇಳಿದರು.

ಕಳೆದ ವರ್ಷ ಡಿಸೆಂಬರ್‌ನಿಂದಲೂ ನಿರಂತರವಾಗಿ ತಮಿಳುನಾಡಿನ ಓಂ ಶಕ್ತಿ ದೇವಾಲಯಕ್ಕೆ ತೆರಳುವವರಿಗೆ ಬಸ್ ವ್ಯವಸ್ಥೆ ಮಾಡಿ ಕಳುಹಿಸುತ್ತಿದ್ದು ಇದುವರೆಗೂ 3 ಸಾವಿರ ಮಂದಿ ಮಾಲಾಧಾರಿಗಳನ್ನು ಕಳುಹಿಸಿದ್ದು ಇದೀಗ 500 ಮಂದಿಯನ್ನು ಎಲ್ಲ ವ್ಯವಸ್ಥೆ ಮಾಡಿ ದೇವಾಲಯಕ್ಕೆ ಕಳುಹಿಸುತ್ತಿದ್ದೇನೆ.

ಆ ತಾಯಿಯು ಎಲ್ಲರಿಗೂ ಒಳ್ಳೆಯದನ್ನು ಮಾಡಲಿ ಎಲ್ಲರ ಆರೋಗ್ಯ, ಆರ್ಥಿಕ ಮಟ್ಟ ಸುಧಾರಿಸಲು ನೆಮ್ಮದಿ ಸುಖ ಶಾಂತಿಯ ಬದುಕು ಎಲ್ಲರದ್ದಾಗಲಿ ಎಂದು ತಾಯಿಗೆ ಕೈ ಮುಗಿದು ಪ್ರಾರ್ಥಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಕೋಚಿಮುಲ್ ಮಾಜಿ ಅಧ್ಯಕ್ಷರಾದ ಕೆ.ಗುಡಿಯಪ್ಪ, ನಗರಸಭೆ ಮಾಜಿ ಉಪಾಧ್ಯಕ್ಷ ಅಪ್ಸರ್‌ಪಾಷ, ಮುಖಂಡರಾದ ನಾಗನರಸಿಂಹ,ಹಫೀಜ್, ಮುತ್ತೂರು ವೆಂಕಟೇಶ್ ಮತ್ತಿತರರು ಹಾಜರಿದ್ದರು.




## ಹಳಸುವ ಮುನ್ನ ಹಸಿದ ಹೊಟ್ಟೆಗೆ ಅನ್ನ ನೀಡೋಣ

ಒಂದು ದಿನ ರಸ್ತೆ ಬದಿ ಕಸದ ತೊಟ್ಟಿಗೆ ಯಾರೋ ಒಬ್ಬರೂ ಅನ್ನ ತಂದು ಬಿಸಾಕಿ ಹೋಗುತ್ತಾರೆ. ಇದನ್ನೇ ಕಾಯುವಂತಿದ್ದ ಒಂದಷ್ಟು ಮಕ್ಕಳು ತೊಟ್ಟಿಗೆ ಮುತ್ತಿಗೆ ಹಾಕಿದವರಂತೆ ಮುಗಿಬಿದ್ದು ಕಸದಿಂದ ಬೇರ್ಪಡಿಸಿಕೊಂಡು ಕೈಗೆ ಸಿಕ್ಕಷ್ಟು ಅನ್ನವನ್ನು ಬಾಯಿಗೆ ಹಾಕಿಕೊಳ್ಳುತ್ತಾರೆ. ಇದನ್ನು ಕಣ್ಣಾರೆ ನೋಡಿದ ಎಂ.ಬಿ.ಕೃಷ್ಣಮೂರ್ತಿ ಕರುಳು ಕಿವುಚಿದಂತಾಗಿ ಮಮ್ಮಲ ಮರಗುತ್ತಾರೆ. ನಾವೆಲ್ಲ ತಿಂದುಂಡು ಬಿಸಾಕುವ ಎಂಜಲನ್ನಕ್ಕೇ ಹಂಬಲಿಸಿ ಹಲುಬುವವರಿದ್ದಾರೆ. ತಾನು ಇಂಥವರಿಗಾಗಿ ಏನಾದರೂ ಮಾಡಬೇಕಲ್ಲವೆ? ಎಂದು ಯೋಚಿಸುವಂತಾಗುತ್ತದೆ.

ಮದುವೆ ಮುಗಿದ ಮೇಲೆ ಉಳಿದಂತಹ ಅಪಾರ ಪ್ರಮಾಣದ ಅಡುಗೆಯನ್ನು ಬಿಸಾಡುವ ಬದಲಾಗಿ ಇಂಥ ಹಸಿದ ಹೊಟ್ಟೆಗೆ ಹಾಕುವಂತಾದಾದರೆ, ಒಂದೋ ಆಹಾರ ಪದಾರ್ಥಗಳು ವ್ಯರ್ಥವಾಗುವುದನ್ನು ತಡೆದಂತಾಗುತ್ತದೆ. ಮತ್ತೊಂದು ಅನಾಥ, ನಿರ್ಗತಿಕರಿಗೆ ಊಟ ಹಾಕಿದ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದುಕೊಂಡವನೇ ಒಂದೊಳ್ಳೆ ಕೆಲಸದ ಹಿಂದೆ ಬೀಳುತ್ತಾನೆ.

ಅನಾಥರು,ಒಂದು ಕಡೆ ತುತ್ತು ಅನ್ನಕ್ಕಾಗಿ ಹಪಹಪಿಸುವ ಅದೆಷ್ಟೋ ನಿರ್ಗತಿಕರು, ಮತ್ತೊಂದು ಕಡೆ ಚರಂಡಿ ಪಾಲಾಗುವ ಬೇಡವಾಗಿ ಉಳಿದ ಆಹಾರ ಪದಾರ್ಥ. ಕಷ್ಟಪಟ್ಟು ಬೆವರು ಸುರಿಸಿ ರೈತ ಬೆಳೆದ ಆಹಾರ ಹಸಿದವರ ಹೊಟ್ಟೆಗೂ ಸೇರದೆ ವ್ಯರ್ಥವಾಗಿ ಹಾಳಾಗಬಾರದೆಂದು ಯೋಚಿಸಿದ ಪರಿಣಾಮವೇ 'ಮುಳಬಾಗಿಲು ಫುಡ್ ಬ್ಯಾಂಕ್' ಎಂಬ ಎನ್ಜಿಓ ವೊಂದರ ಹುಟ್ಟಿಗೆ ಕಾರಣ.





ಹಾಳಾಗಲಿರುವ ಅನ್ನ ಹಾಗೂ ಹಸಿದ ಹೊಟ್ಟೆಯ ನಡುವಿನ ಕೊಂಡಿಯಂತೆ ಸ್ವಯಂ ಪ್ರೇರಿತನಾಗಿ ಕೆಲಸ ಮಾಡಲು ಮುಂದಾದ ಆ ಯುವಕ ಎಂ ಬಿ .ಕೃಷ್ಣಮೂರ್ತಿ ಅವರು.

ಈತನ ಈ ನಿಸ್ವಾರ್ಥ ಕೆಲಸಕ್ಕೆ ಕೈಜೋಡಿಸಲೆಂದು ಮುಂದೆ ಬಂದ ಗೆಳೆಯರೇ ಮಂಜುನಾಥ್, ಅಂಜಿ ಅವರುಗಳು. ಆರಂಭದಲ್ಲಿ ಆಟೋ ವೊಂದನ್ನು ಬಾಡಿಗೆಗೆ ಪಡೆದು ಮದುವೆ ಮಂಟಪ, ಚೌಟ್ರಿಗಳಿಗೆ ತೆರಳಿ ಹೆಚ್ಚಾಗಿ ಉಳಿದಂಥ ಅನ್ನ, ಸಾಂಬಾರು, ಚಪಾತಿ, ಪಲ್ಯ ಸೇರಿದಂತೆ ಮೊದಲಾದ ಅಡುಗೆಯನ್ನು ಸಂಗ್ರಹಿಸಿ ಒಂದೊಂದು ಪಾತ್ರೆಯಲ್ಲಿ ತುಂಬಿಕೊಂಡು ಬಂದು, ಅದೇ ಆಟೋವನ್ನು ಅನಾಥರು, ಭಿಕ್ಷುಕರು ಇರುವ ಜಾಗಗಳನ್ನು ಹುಡುಕಿಕೊಂಡು ಹೋಗಿ ಹಂಚುವ ಕಾರ್ಯಕ್ಕಿಳಿಯುತ್ತಾರೆ. ಇದಕ್ಕಾಗಿ ತಗಲುವ ಖರ್ಚನ್ನು ಇವರೇ ಭರಿಸುತ್ತಾರೆ.

ಉತ್ತೇಜಿತರಾದ ಎಂ.ಬಿ. ಕೃಷ್ಣಮೂರ್ತಿ ಮತ್ತವರ ತಂಡಕ್ಕೆ ಹಸಿದವರಿಗೆ ಆಹಾರ ಪೊಟ್ಟಣಗಳನ್ನು ತಲುಪಿಸಲು ಊರು ಸುತ್ತು ಹಾಕುವುದೇ ಒಂದು ಹವ್ಯಾಸವಾಗುತ್ತದೆ.

ಮದುವೆ ಊಟ ಸಿಗದಿದ್ದಾಗ ಹೋಟೇಲ್ ನಲ್ಲಿ ಉಳಿದಂಥ ಅನ್ನಕ್ಕೆ ಮೊರೆಯಿಡುತ್ತಾರೆ. ಹಾಗಂತ ಇವರಾರೂ ಖಾಲಿಪೀಲಿ ಹುಡುಗರಲ್ಲ. ಇವರಲ್ಲಿ ಶಿಕ್ಷಕರು, ಸ್ವಂತ ಬಿಜಿನೆಸ್ ಮಾಡುವವರೂ ಇದ್ದಾರೆ. ಅಳಿದುಳಿದ ಅನ್ನ ಕೊಡುವವರಿಗೂ ಕೃತಜ್ಞತೆಯ ನೆಪದಲ್ಲಿ ಸಸಿಗಳನ್ನು ನೀಡುವ ಮೂಲಕ ಪರಿಸರ ಕಾಳಜಿ ಮೂಡಿಸುತ್ತಿರುವ ಮುಳಬಾಗಿಲು ಫುಡ್ ಬ್ಯಾಂಕ್ ನ ಈ ಹುಡುಗ ತಮ್ಮ ಈ ಕಾರ್ಯದಲ್ಲಿ ಇನ್ನಷ್ಟು ಶೈನ್ ಆಗಲು ಶಹಬ್ಬಾಶ್ ಎನ್ನಲೇಬೇಕು.

## ಏಕಮುಖ ಸಂಚಾರ: ಮಕ್ಕಳ ಪ್ರಾಣಕ್ಕೆ ಸಂಚಕಾರ!

**ವರದಿ: ರಾಮಸಮುದ್ರ ಎಸ್. ವೀರಭದ್ರಸ್ವಾಮಿ**

**ಚಾಮರಾಜನಗರ:** ಏಕಮುಖ ಸಂಚಾರ ಮಾಡಿದರೆ ಅಪಾಯ ಕಟ್ಟಿಟ್ಟ ಬುತ್ತಿ ಅಂತ ಗೊತ್ತಿದ್ದರೂ ವಾಹನ ಸವಾರರು ಏಕಮುಖ ಸಂಚಾರ ಮಾಡುವುದರಿಂದ ಮಕ್ಕಳ ಪ್ರಾಣಹಾನಿಗೆ ದಾರಿ ಮಾಡಿಕೊಡಲಾರಂಭಿಸಿದ್ದಾರೆ.

ನಗರದ ಜೋಡಿರಸ್ತೆ ಸಮೀಪ ಖಾಸಗಿ ಶಾಲಾ– ಕಾಲೇಜು ಇದ್ದು.. ಜೋಡಿರಸ್ತೆ ಒಂದು ಭಾಗದಲ್ಲಿ ನೂರಾರು ವಿದ್ಯಾರ್ಥಿಗಳು,ಕೆಲ ಉಪನ್ಯಾಸಕರು ಏಕ ಮುಖ ಸಂಚಾರ ಮಾಡಲಾರಂಬಿಸುತ್ತಾರೆ .ಇದರ ಜೊತೆ ಶಾಲಾ ಮಕ್ಕಳನ್ನ ಹೊತ್ತ ಆಟೊಗಳು ಕೂಡ ಏಕಮುಖಸಂಚಾರ ಮಾಡುವುದರಿಂದ ದಿನನಿತ್ಯ ಸಣ್ಣಪುಟ್ಟ ಅಪಘಾತಗಳು ಆಗುತ್ತಿದೆ .

ಅವೈಜ್ಞಾನಿಕ ರಸ್ತೆ, ಡಿವೈಡರ್ ಗಳಿಂದ ಅಪಘಾತಗಳು ಹೆಚ್ಚಾಗುತ್ತಿದೆ..ಇತ್ತೀಚೆಗೆ ಕಾಲೇಜಿನ ಶಿಕ್ಷಕಿಯೊಬ್ಬರಿಗೆ ಅಪಘಾತವಾದಾಗ ಡಿವೈಡರ್ ಮುಚ್ಚಿದ್ದರು. ಇದರಿಂದ ಮತ್ತಷ್ಟು ಏಕಮುಖ ಸಂಚಾರ ವ್ಯವಸ್ಥೆ ಹೆಚ್ಚಾಗತೊಡಗಿದವು.

ಕಾಲೇಜಿನಲ್ಲಿ ಎರಡು ದ್ವಾರಗಳಿದ್ದು ಒಂದು ದ್ವಾರ ಮುಚ್ಚಿದರೆ ಏಕಮುಖ ಸಂಚಾರ ಜೊತೆಗೆ ಅನದಿಕೃತ ವಾಹನ ನಿಲುಗಡೆ ಆಟೊ ಪಾರ್ಕಿಂಗ್ ತಡೆದು ವಾಹನ ದಟ್ಟಣೆಯಿಂದ ಸಂಚಾರ ಕಿರಿಕಿರಿ ತಪ್ಪಿಸಬಹುದು ಎನ್ನತ್ತಾರೆ ವಾಹನ ಸವಾರೊಬ್ಬರು.

ಪ್ರತಿನಿತ್ಯ ಹೊರವಲಯದಲ್ಲಿ ದಂಡ ವಿಧಿಸುವ ಆರಕ್ಷಕರು ಕಾಲೇಜಿನ ಮುಂಭಾಗ ಏಕಮುಖ ಸಂಚಾರ, ಅಪ್ರಾಪ್ತ ವಾಹನ ಚಾಲನೆ ಸಂಬಂದ ಪ್ರಕರಣ ದಾಖಲಿಸಿದರೆ ಇಂತ ವ್ಯವಸ್ಥೆ ತಗ್ಗಿಸಬಹುದಾಗಿದೆ



# ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯ



**ಮುಳಬಾಗಿಲು:** ತಾಲ್ಲೂಕಿನಾದ್ಯಾಂತ ಗ್ರಾಮ ಪಂಚಾಯಿತಿಗಳಲ್ಲಿ ಇ ಹಾಗೂ ಬಿ ಖಾತೆಗಳ ಅಕ್ರಮ ಹಾಗೂ ನರೇಗಾ ಕಾಮಗಾರಿಗಳಲ್ಲಿ ನಡೆದಿರುವ ಭ್ರಷ್ಟಚಾರವನ್ನು ತನಿಖೆ ಮಾಡಲು ವಿಶೇಷ ತಂಡ ರಚನೆ, ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಬಿಡುಗಡೆ ಒತ್ತಾಯಿಸಿ ರೈತ ಸಂಘದಿಂದ ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ ಸರ್ವೇಶ್ ಅವರಿಗೆ ಮನವಿ ನೀಡಿ ಒತ್ತಾಯಿಸಲಾಯಿತು.

ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿಕೊಟ್ಟ ಮಹಾತ್ಮ ಗಾಂಧಿಯವರ ಕನಸಂತೆ ಹಳ್ಳಿಗಳ ಅಭಿವೃದ್ಧಿಯೇ ದೇಶದ ಅಭಿವೃದ್ಧಿಯೆಂದು ಅವರ ಕನಸು ಕನಸಾಗಿಯೇ ಉಳಿದಿದೆ. ಸ್ವಾತಂತ್ರ್ಯ ಬಂದು 7 ದಶಕ ಕಳೆದರೂ ಗ್ರಾಮೀಣ ಪ್ರದೇಶದ ಅಭಿವೃದ್ಧಿ ಮಾತ್ರ ಮರೀಚಿಕೆಯಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರ ಸಾವಿರಾರು ಅನುದಾನವನ್ನು ಪಂಚಾಯಿತಿಗಳಿಗೆ ಬಿಡುಗಡೆ ಮಾಡುತ್ತಿದ್ದರೂ ಅಭಿವೃದ್ಧಿ ಮಾತ್ರ ಮರಿಚೀಕೆಯಾಗಿ ಚುನಾವಣೆ ಸಮಯದಲ್ಲಿ ಮಾತ್ರ ಹಳ್ಳಿಗಳ ಜ್ಞಾಪಕ ಜನಪ್ರತಿನಿದಿಗಳಿಗೆ ಬರುತ್ತದೆಂದು ತಾಲ್ಲೂಕಾದ್ಯಕ್ಷ ಯಲುವಳ್ಳಿ ಪ್ರಭಾಕರ್ ಆರೋಪಿಸಿದರು.

ಪಂಚಾಯಿತಿಯಲ್ಲಿ ನೀವೇಶನ ರಹಿತ ಬಡವರಿಗೆ ನೀಡಬೇಕಾದ ನೀವೇಶನಗಳು ಇಂದು ಬಲಾಡ್ಯರ ಪಾಲಾಗುತ್ತಿದೆ. ಜಾತಕ ಪಕ್ಷಿಗಳಂತೆ ಕಾಯುವ ಬಡವರು ಕಾದು ಕಾದು ಸ್ವಂತ ನೀವೇಶನವಿಲ್ಲದೆ ಅಧಿಕಾರಿಗಳ ವೈಪಲ್ಯತೆಗೆ ತಮ್ಮ ಪ್ರಾಣವೇ ಹಾರಿ ಹೋಗುವ ಮಟ್ಟಕ್ಕೆ ಅಧಿಕಾರಿಗಳು ನಡೆದುಕೊಳ್ಳುತ್ತಿದ್ದಾರೆಂದು ಅಸಮಾಧಾನ ವ್ಯಕ್ತಪಡಿಸಿದರು.

ಇ-ಖಾತೆ ಮತ್ತು ಬಿ-ಖಾತೆಯಲ್ಲಿ ಆಕ್ರಮ ತಾಲ್ಲೂಕಿನಾದ್ಯಂತ ಗಲ್ಲಿಗೊಂದು ನಾಯಿಕೊಡೆಗಳಂತೆ ಆಕ್ರಮ ಲೇಔಟ್‌ಗಳನ್ನು ಸೃಷ್ಠಿ ಮಾಡಿ ಬಡವರಿಗೆ ಕಡಿಮೆ ಬೆಲೆಯಲ್ಲಿ ನೀವೇಶನ ನೀಡುತ್ತೇವೆಂದು ವಂಚನೆ ಮಾಡುವ ದೊಡ್ಡ ದಂದೆಯೇ ನಡೆಯುತ್ತಿದೆ ಅದಕ್ಕೆ ಬೆಂಗವಲಾಗಿ ಅಧಿಕಾರಿಗಳು ನಿಂತಿದ್ದಾರೆ. ಯಾವುದೇ ಖಾತೆ ಮಾಡಬೇಕಾದರೆ ಸಂಬಂದಪಟ್ಟ ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳು ಸ್ಥಳ ಪರೀಶೀಲನೆ ಹಾಗೂ ದಾಖಲೆಗಳನ್ನು ಮಾಡುವ ಮುಖಾಂತರ ಕಾನೂನು ಬದ್ದವಾಗಿ ಮಾಡಬೇಕು. ಅದನ್ನು ಬಿಟ್ಟು ಕೆರೆ ರಾಜಕಾಲುವೆ ಗೋಮಾಳ ಗುಂಡುತೋಪುಗಳಿಗೂ ಖಾತೆಗಳ ದರ್ಬಾರು ಹೆಚ್ಚಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತ ಸಂಘದ ರಾಜ್ಯ ಉಪಾದ್ಯಕ್ಷ ಕೆ.ನಾರಾಯಣಗೌಡ ಮಾತನಾಡಿ ನರೇಗಾ ಕಾಮಗಾರಿಗಳಲ್ಲಿ ಜೆ,ಸಿ,ಬಿಗಳ ಅಬ್ಬರ ಜಾಬ್ ಕಾರ್ಡ್ಗಳ ದುರ್ಬಳಕೆ ಹೆಚ್ಚಾಗಿದೆ ದುಡಿಯುವ ಕೈಗೆ ಕೆಲಸ ನೀಡುವ ಬಹು ನೀರೀಕ್ಷೆಯ ಮಹಾತ್ಮ ಗಾಂಧಿ ನರೇಗಾ ಯೋಜನೆ ಇಂದು ಅಧಿಕಾರಿಗಳ ಮತ್ತು ಗುತ್ತಿಗೆದಾರರಿಗೆ ಚಿನ್ನದ ಮೊಟ್ಟೆ ಇಡುವ ಕಾಮಗಾರಿಗಳಾಗಿ ಮಾರ್ಪಟ್ಟಿದೆ. ಗ್ರಾಮೀಣ ಪ್ರದೇಶದ ಬಡ ಕೂಲಿ ಕಾರ್ಮಿಕರಿಗೆ ಕೆಲಸ ನೀಡುವ ನೆಪದಲ್ಲಿ ಜಾಬ್‌ಕಾರ್ಡ್ಗಳನ್ನು ಪಡೆದು ಕಾಮಗಾರಿಗಳನ್ನು ಜೆಸಿಬಿಗಳಲ್ಲಿ ಮಾಡುವ ಮುಖಾಂತರ ಲಕ್ಷ ಲಕ್ಷ ಲೂಟಿ ಮಾಡುವ ಜೊತೆಗೆ ಕಾಮಗಾರಿಗಳಿಲ್ಲದೆ ನಕಲಿ ದಾಖಲೆ ಸೃಷ್ಠಿ ಮಾಡಿ ಹಣ ದೋಚುವ ನರೇಗಾವಾಗಿ ಮಾರ್ಪಟ್ಟಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪಂಚಾಯಿತಿಗಳಲ್ಲಿನ ಸಿಬ್ಬಂದಿಯನ್ನು ವರ್ಷಕೊಮ್ಮೆ ಬದಲಾವಣೆ ಮಾಡಿ; ಪಂಚಾಯಿತಿಗಳಲ್ಲಿನ ಹೆಜ್ಜೆ ಹೆಜ್ಜೆಗೂ ನಡೆಯುವ ಭ್ರಷ್ಟಚಾರ ಅಲ್ಲಿನ ಕೆಳಹಂತದ ಬಿಲ್ ಕಲೆಕ್ಟರ್, ವಾಟರ್‌ಮೆನ್, ಕಂಪ್ಯೂಟರ್ ಅಪರೇಟರ್‌ಗಳ ಪಾತ್ರ ಬಹುದೊಡ್ಡದಾಗಿದೆ. ಭ್ರಷ್ಟಚಾರ ನಿಲ್ಲಬೇಕು ಹಳ್ಳಿಗಳ ಅಭಿವೃದ್ದಿಯಾಗಬೇಕಾದರೆ ವರ್ಷಕ್ಕೊಮ್ಮೆ ಕಡ್ಡಾಯವಾಗಿ ಅಧಿಕಾರಿಗಳ ವರ್ಗಾವಣೆ ಆಗಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳು ಮತ್ತು ಜನಸಾಮಾನ್ಯರ ಸಮ್ಯೆಗಳನ್ನು ಆಲಿಸಿ ಪರಿಹಾರ ಮಾಡುವ ಗ್ರಾಮಸಭೆಗಳು ಇಂದು ಛಾಯಾಚಿತ್ರಕ್ಕೆ ಸೀಮಿತವಾಗಿವೆ. ಜೊತೆಗೆ ಹಳ್ಳಿಗಳ ಚರಂಡಿ ವಿದ್ಯುತ್ ದೀಪ, ರಸ್ತೆಗಳ ಅಭಿವೃದ್ಧಿಗೆ ಬಿಡುಗಡೆಯಾಗುವ 14-15 ನೇ ಹಣಕಾಸಿನ ದುರ್ಬಳಕೆ ತನಿಖೆ ಮಾಡಬೇಕೆಂದು ಆಗ್ರಹಿಸಿದರು.

ಒಂದು ವಾರದೊಳಗೆ ತಾಲ್ಲೂಕಿನಾದ್ಯಂತ ಗ್ರಾಮ ಪಂಚಾಯಿತಿಗಳಲ್ಲಿ ಆಕ್ರಮ ಇ ಹಾಗೂ ಬಿ ಖಾತೆಗಳ ಆಕ್ರಮ ಹಾಗೂ ನರೇಗಾದ ಕಾಮಗಾರಿಗಳಲ್ಲಿನಡೆದಿರುವ ಭ್ರಷ್ಟಚಾರವನ್ನು ತನಿಖೆ ಮಾಡಲು ವಿಶೇಷ ತಂಡ ರಚನೆ ಮಾಡಲು ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿಗಳಾದ ಸರ್ವೆಶ್ ನರೇಗಾ ಕಾಮಗಾರಿ ಯಂತ್ರೋಪಕರಣಗಳಲ್ಲಿ ಮಾಡುತ್ತಿರುವ ಬಗ್ಗೆ ತನಿಖೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವ ಜೊತೆಗೆ ಲೇಔಟ್‌ಗಳ ದಾಖಲೆಗಳನ್ನು ಪರೀಶೀಲನೆ ಮಾಡುವವರೆಗೂ ಯಾವುದೇ ಕಾರಣಕ್ಕೂ ಖಾತೆಗಳು ಮಾಡದಂತೆ ಅಧಿಕಾರಿಗಳಿಗೆ ಸೂಚನೆ ನೀಡುವ ಭರವಸೆಯನ್ನು ನೀಡಿದರು.

ಮನವಿ ನೀಡುವಾಗ ರಾಜ್ಯ ಪ್ರಧಾನ ಕಾರ್ಯದರ್ಶಿ ಪಾರುಕ್‌ಪಾಷ, ಜಿಲ್ಲಾದ್ಯಕ್ಷ ಈಕಂಬಳ್ಳಿ ಮಂಜುನಾಥ್, ಜಿ, ಕಾರ್ಯದ್ಯಕ್ಷ ಹೆಬ್ಬಣಿ ಆನಂದ್‌ರೆಡ್ಡಿ, ತಾ.ಪ್ರ.ಕಾ ರಾಜೇಶ್, ಮೇಲಾಗಣಿ ವಿಜಯ್‌ಪಾಲ್, ತಾ.ಉ ಭಾಸ್ಕರ್, ನ.ಅ ಜುಬೇರ್‌ಪಾಷ, ವಿಜಯ್‌ಪಾಲ್, ಆದಿಲ್‌ಪಾಷ, ಪುತ್ತೇರಿ ರಾಜು, ಸುನಿಲ್ ಕುಮಾರ್, ಆಂಬ್ಲಿಕಲ್ ಮಂಜುನಾಥ್, ಪದ್ಮಘಟ್ಟ ಧರ್ಮ , ನಂಗಲಿ ನಾಗೇಶ್, ಕೇಶವ, ವೇಣು, ಮುಂತಾದವರಿದ್ದರು.

# ಸಾಲ ಮರು ಪಾವತಿ ಮಾಡದ ಮನೆಗೆ ಬೀಗ: ಬೀದಿಗೆ ಬಿದ್ದ ಕುಟುಂಬ



**ಚಾಮರಾಜನಗರ:** ಸಕಾಲದಲ್ಲಿ ಸಾಲ ಮರು ಪಾವತಿ ಮಾಡದ ಮನೆಯನು ಮೈಕ್ರೋ ಫೈನಾನ್ಸ್ ನವರು ಸೀಜ್ ಮಾಡಿದ್ದು ವಾಸಿಸಲು ಮನ ಇಲ್ಲದ ಕುಟುಂಬವೊಂದು ಬೀದಿಗೆ ಘಟನೆ ಚಾಮರಾಜನಗರ ತಾಲ್ಲೂಕಿನ ಸಂತೇಮರಹಳ್ಳಿಯಲ್ಲಿ ನಡೆದಿದೆ.

ಚಾಮರಾಜನಗರ ತಾಲ್ಲೂಕಿನ ಸಂತೇಮರಹಳ್ಳಿ ಗ್ರಾಮದ ರಾಜೇಶ್ ಹಾಗೂ ಶ್ವೇತ ದಂಪತಿಗಳು ಕೆಲ ವರ್ಷಗಳ ಹಿಂದೆ ಚಾಮರಾಜನಗರದ ಲ್ಲಿರುವ ಮೈಕ್ರೋ ಫೈನಾನ್ಸ್ ಬ್ಯಾಂಕ್‌ನಲ್ಲಿ ಮನೆಯ ಮೇಲೆ 15 ಲಕ್ಷ ಸಾಲ ಪಡೆದಿದ್ದರು.

ಸಕಾಲದಲ್ಲಿ ಸಾಲ ಮರು ಪಾವತಿ ಮಾಡದ ಓನ್ನೆಲೆಯಲ್ಲಿ ವಾರದ ಹಿಂದೆ ಬ್ಯಾಂಕ್‌ನವರು ಮನರ ಇದರಿಂದಾಗಿ ಕುಟುಂಬ ಮನೆಯ ಮುಂಭಾಗ ಜಗಲಿಯಲ್ಲಿ ವಾಸಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಬ್ಯಾಂಕ್‌ನವರ ಹತ್ತಿರ ರೈತ ಮುಖಂಡರನ್ನು ಕರೆದುಕೊಂಡು ಹೋಗಿ ಸ್ವಲ್ಪ ಹಣ ಪಾವತಿ ಮಾಡುವುದಾಗಿ ಹೇಳಿದರು ಸಹ ನಮಗೆ ಪೂರ್ಣ ಹಣ ಕಟ್ಟಬೇಕು ಎಂದು ನಮ್ಮ ಮನೆಯನ್ನು ಮುಟ್ಟುಗೋಲು ಮಾಡಿಕೊಂಡಿದ್ದಾರೆ. ಇದರಿಂದಾಗಿ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆ ಆಗುತ್ತಿದೆ. ಮನೆಯ ಹೊರಗಡೆ ಇರುವ ಶೌಚಾಲಯ ಹಾಗೂ ಸ್ನಾನದ ಕೊಠಡಿಗೂ ಬೀಗ ಜಡಿದಿದ್ದು ತೊಂದರೆಯಾಗಿದೆ. ಸಂಬಂಧಪಟ್ಟವರು ನಮಗೆ ನ್ಯಾಯ ಕೊಡಿಸಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಜಡಿದು ಹೋಗಿದ್ದಾರೆ. ಧರಣಿ ನಡೆಸುವುದಾಗಿ ರಾಜೇಶ್ ತಿಳಿಸಿದರು.

# ರಾಷ್ಟ್ರೀಯ ಹಬ್ಬಗಳ ಆಚರಣೆ; ಮಕ್ಕಳಲ್ಲಿ ಸರ್ವ ಸಮಾನತೆ ಮೂಡಲು ಸಾಧ್ಯ



**ನಾಗಮಂಗಲ:** ರಾಷ್ಟ್ರೀಯ ಹಬ್ಬಗಳ ಆಚರಣೆಯಿಂದ ಮಕ್ಕಳಿಗೆ ದೇಶದ ಸ್ವತಂತ್ರ ಹೋರಾಟಗಾರರು ಯೋಧರು ದೇಶಭಕ್ತಿಯ ಭಾವನೆ ಬಗ್ಗೆ ಸರ್ವ ಸಮಾನತೆ ಬೆಳವಣಿಗೆಗೆ ಸಾಧ್ಯವಾಗುತ್ತದೆ ಎಂದು ಸಿಆರ್‌ಪಿ ಸುರೇಶ್ ತಿಳಿಸಿದರು.

ಅವರು ದೇವಲಾಪುರ ಹೋಬಳಿ ಕರಡಹಳ್ಳಿ ವ್ಯಾಪ್ತಿಯ ಹರಳಕೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಗಣರಾಜ್ಯೋತ್ಸವದ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಗಣರಾಜ್ಯೋತ್ಸವ ಸಮಾರಂಭದಲ್ಲಿ ಶಾಲಾ ಮಕ್ಕಳಿಂದಲೇ ಕಾರ್ಯಕ್ರಮ ಆಯೋಜನೆ ಮಾಡಿದ್ದು ಸಮಾರಂಭದಲ್ಲಿ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಣೆ ಸ್ವಾಮಿ ಎಂಬುವರು ಉಚಿತವಾಗಿ ನೀಡಿದರು.

ಸಭೆಯಲ್ಲಿ ಶಾಲಾ ಮುಖ್ಯ ಶಿಕ್ಷಕರಾದ ಶ್ರೀನಿವಾಸ್ ಗೌಡ ಶಾಲಾ ಶಿಕ್ಷಕರು ಎಸ್ ಡಿ ಎಂ ಸಿ ಅಧ್ಯಕ್ಷರಾದ ಸುವರ್ಣ ರವರು ಮಂಡಳಿಯ ಸದಸ್ಯರು ಗ್ರಾಮಸ್ಥರು ಹಾಜರಿದ್ದರು

# ಸಹಕಾರ ಸಂಘದಲ್ಲಿ ಅವ್ಯವಹಾರ



**ಮಾಲೂರು:** ತಾಲ್ಲೂಕಿನ ಹಾರೋಹಳ್ಳಿ ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಬಾರಿ ಅವವ್ಯಹಾರ ನಡೆದಿರುವುದಾಗಿ ಸದಸ್ಯರು, ಹಾಲು ಉತ್ಪಾದಕ ರೈತರು ಕಾರ್ಯದರ್ಶಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರೆ.

ತಾಲ್ಲೂಕಿನ ಅಬ್ಬೇನಹಳ್ಳಿ ಗ್ರಾ.ಪಂ.ವ್ಯಾಪ್ತಿಯ ಹಾರೋಹಳ್ಳಿ ಗ್ರಾಮದಲ್ಲಿ ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘ ಪ್ರಾರಂಭದಿಂದಲು ಇದುವರೆಗೆ ಹಾಲು ಪೂರೈಸುವ ರೈತರಿಗೆ ಸರಿಯಾದ ಬಟವಾಡೆ ಮಾಡದೇ ಹಾಗೂ ವರ್ಷಕ್ಕೊಂದು ಬಾರಿ ಬೋನಸ್ ಸಹ ನೀಡದೇ ಲಪಟಾಯಿಸಿ ವಂಚಿಸಿರಿವುದಾಗಿ ಮಹಿಳಾ ಸಂಘದ ಸದಸ್ಯರು, ಹಾಲು ಉತ್ಪಾದಕ ರೈತರು ದೂರಿದರು. ಯಾವುದೇ ಲೆಕ್ಕವಿಲ್ಲ, ಯಾರೇ ಕಾರ್ಯದರ್ಶಿ ಅವರನ್ನು ಪ್ರಶ್ನೆ ಮಾಡಿದರೆ ಅವರನ್ನು ಸಂಘದಿಂದ ವಜಾಗೊಳಿಸುತ್ತಾರೆ.

ಸದಸ್ಯರು ಸಂಘದ ವಹಿವಾಟು ನಡೆಸುವ ಹಣ ಕೊಡದೆ ಚೆಕ್ ನೀಡುತ್ತಾರೆ . ಚೆಕ್ ಎತ್ತಿಕೊಂಡು ಬ್ಯಾಂಕ್ ಗೆ ಹೋದರೆ ಚೆಕ್ ಬೌನ್ಸ್ ಅಗುತ್ತಿದೆ. ಕಾರ್ಯದರ್ಶಿ ಅವರನ್ನು ಕೇಳಿದರೆ ನಾಳೆ, ಒಂದು ವಾರ ತಿಂಗಳಲ್ಲಿ ಹಣ ಜಮಾ ಮಾಡುತ್ತೇನೆ ಎಂದು ಹಾರಿಕೆ ಉತ್ತರ ನೀಡುತ್ತಾಳೆ. ಸಂಘ ಪ್ರಾರಂಭವಾಗಿ 20 ವರ್ಷಗಳಾದರೂ ಇದುವರೆಗೆ ಹಾಲು ಉತ್ಪಾದಕರಿಗೆ ಸರಕಾರದಿಂದ ಹಾಗೂ ಒಕ್ಕೂಟದಿಂದ ಬರುವ ಸೌಲಭ್ಯಗಳು ಮಾಹಿತಿ ನೀಡಿಲ್ಲ. ಸಂಘದ ಅಧ್ಯಕ್ಷರು ಅವರ ಸಂಬಂಧಿಕರೇ ಅಗಬೇಕು. ಇದುವರೆಗೂ ಷೇರುದಾರರ ಗಮನಕ್ಕೆ ತರದೇ ಚುನಾವಣೆ ನಡೆಸದೇ ಅವರ ಇಚ್ಛಾನುಸಾರ ಅಧ್ಯಕ್ಷರ, ಉಪಾಧ್ಯಕ್ಷನ್ನು ಆಯ್ಕೆ ಮಾಡಿಕೊಳ್ಳುತ್ತಾಳೆ.

ಇಂತಹ ಕಾರ್ಯದರ್ಶಿ ಸುಶೀಲಮ್ಮ ನಮ್ಮ ಸಂಘದಲ್ಲಿ ಕಾರ್ಯದರ್ಶಿ ಯಾಗಿ ಕಾರ್ಯನಿರ್ವಹಿಸಲು ಅವಶ್ಯಕತೆ ಇಲ್ಲ. ಕಾರ್ಯದರ್ಶಿ ಅವರನ್ನು ವಜಾಗೊಳಿಸಿ ಮತ್ತೊಬ್ಬರನ್ನು ನೇಮಕಗೊಳಿಸಿ ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘವನ್ನು ಉಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಲ್ಲಿ ಮಹಿಳೆಯರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಾರದಮ್ಮ, ಜಯಮ್ಮ, ಸೌಮ್ಯ, ಶಂಕುತಲಮ್ಮ, ಪದ್ಮಾವತಿ, ರತ್ನಮ್ಮ, ಸರೋಜಮ್ಮ, ರೇಣುಕಾ, ಅಭಿಲಾಷ, ಪಿಳಮ್ಮ, ರಾಧ, ಪುಟ್ಟಮ್ಮ, ಅನಿತ, ಚೌಡಮ್ಮ, ಗೌರಮ್ಮ, ಉಷಾ, ರಾಮಕ್ಕ, ಲಕ್ಷ್ಮಮ್ಮ, ಮುಖಂಡರಾದ ಚಂದ್ರಾರೆಡ್ಡಿ, ನಿರಂಜನ್ ಕುಮಾರ್, ಅಣ್ಣಯ್ಯರೆಡ್ಡಿ, ಕೃಷ್ಣಪ್ಪ, ಮುನಿಕೃಷ್ಣ, ಮೋಹನ್, ಕೇಶವರೆಡ್ಡಿ ಸೇರಿದಂತೆ ಹಲವಾರು ಮುಖಂಡರು ಹಾಜರಿದ್ದರು.

# ಪಠ್ಯೇತರ ಚಟುವಟಿಕೆಗೆ ಗಮನ ಕೊಡಿ

**ನಾಗಮಂಗಲ:** ಮಕ್ಕಳಿಗೆ ಪಠ್ಯದ ಜೊತೆ ಜೊತೆಯಲ್ಲೇ ಭವಿಷ್ಯದ ಪ್ರಜೆಗಳಾಗಿ ರೂಪಿಸಲು ಜ್ಞಾನಪರಿಕಲ್ಪನೆಯ ಬೆಳೆಸುವಂತೆ ಸಚಿವರಾದ ಚೆಲುವಾಯ ಸ್ವಾಮಿ ಅವರು ಮಾತನಾಡಿದರು.

ಅವರು ನಾಗಮಂಗಲ ತಾಲೂಕಿನ ಬೆಳ್ಳೂರು ಪಟ್ಟಣದಲ್ಲಿ ಪದವಿಪೂರ್ವ ಕಾಲೇಜು ಕಟ್ಟಡವನ್ನು ಒಂದು ಕೋಟಿ ವೆಚ್ಚ ಮತ್ತು ಪ್ರಾಥಮಿಕ ಪ್ರೌಢಶಾಲಾ ಕಟ್ಟಡ 44 ಲಕ್ಷ ವೆಚ್ಚದ ನೂತನ ಕಟ್ಟಡಗಳನ್ನು ಉದ್ಘಾಟನೆ ಮಾಡುತ್ತಾ ಮಾತನಾಡಿದರು

ಮಕ್ಕಳು ಕೇವಲ ಪರೀಕ್ಷೆ ಅಂಕ ಗಳಿಸುವ ಅಷ್ಟಕ್ಕೆ ಸೀಮಿತವಾಗಿರದೆ ತಮ್ಮ ಜೀವನದ ಬದುಕನ್ನು ರೂಪಿಸಿಕೊಳ್ಳುವ ಶಿಕ್ಷಣದ ಜೊತೆ ಜೊತೆಯಲಿ ದೇಶದ ಭವಿಷ್ಯದ ಸವಾಲು ಸಮಸ್ಯೆಗಳು ಆಧುನಿಕ ತಂತ್ರಜ್ಞಾನದ ಜ್ಞಾನದ ಅವಶ್ಯಕತೆಗಳನ್ನು ಶಿಕ್ಷಕರಾದ ನಾವುಗಳು ಕಲಿಕೆಯ ಹಂತದಲ್ಲಿ ರೂಪಿಸಿದಾಗ ಮಾತ್ರ ಜೀವನದ ಬದುಕಿನ ಭವಿಷ್ಯದ ಪ್ರಜೆಗಳಾಗಿ ರೂಪಿಸಲು ಸಾಧ್ಯವಾಗುತ್ತದೆ ಎಂದು ಈ ಸಂದರ್ಭದಲ್ಲಿ ಮಾತನಾಡಿದರು.

ಶಿಕ್ಷಕರು ಶಾಲಾ ಅವಧಿಗೆ ಹಾಜರಾಗಿ ಶಾಲಾ ಅವಧಿ ಮುಗಿದ ನಂತರ ಹೊರಡುವುದು ಅಷ್ಟಕ್ಕೆ ಸೀಮಿತವಾಗಿರದೆ ಶಾಲಾ ಅವಧಿಯ ನಂತರವೂ ಒಂದಷ್ಟು ಸಮಯವನ್ನು ವಿದ್ಯಾರ್ಥಿಗಳ ಜೊತೆ ವರ್ತಮ ದೇಶದ ವರ್ತಮಾನ ಭವಿಷ್ಯದ ಸವಾಲು ಸಂವಾದಗಳನ್ನು ಚರ್ಚೆ ಮಾಡುವ ಮುಖಾಂತರ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ ಸಹಾಯವಾಗುವಂತೆ ಶಿಕ್ಷಕರು ತಮ್ಮ ಸಮಯದ ವಿದ್ಯಾರ್ಥಿಗಳೊಂದಿಗೆ ತಮ್ಮ ಜ್ಞಾನದ ಕೌಶಲ್ಯ ಅಭಿವೃದ್ಧಿಯನ್ನು ನೀಡಲಿ ಎಂಬುದು ಸಚಿವರ ಆಶಯ ವೆಂದು ತಮ್ಮ ಭಾವನೆಯನ್ನು ತಿಳಿಸಿದರು.

ಸಮಾರಂಭದಲ್ಲಿ ಉಪ ವಿಭಾಗಾಧಿಕಾರಿಗಳಾದ ಶ್ರೀನಿವಾಸ್ ತಾಲೂಕು ದಂಡಾಧಿಕಾರಿಗಳಾದ ಆದರ್ಶ್. ಬೆಳ್ಳೂರು ಟೌನ್ ಪಂಚಾಯಿತಿ ಮುಖ್ಯ ಅಧಿಕಾರಿ ಲಕ್ಷ್ಮಣ್ ತಾಲೂಕು ಆರೋಗ್ಯ ಅಧಿಕಾರಿಗಳು ರಮೇಶ್ ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಮೂಡ್ಲಿಗೌಡ. ಉಪನ್ಯಾಸಕ ಚಂದ್ರು. ಧನಂಜಯ ಉಪನ್ಯಾಸಕರು ಶಿಕ್ಷಕರು ಗಣ್ಯರು ಮುಖಂಡರು ಹಾಜರಿದ್ದರು



# ಸಂಸದ ಬೊಮ್ಮಾಯಿ ಹುಟ್ಟುಹಬ್ಬದ ನಿಮಿತ್ತ ಆರೋಗ್ಯ ತಪಾಸಣೆ ಶಿಬಿರ

**ಹಾವೇರಿ:** ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಯವರ 65 ಹುಟ್ಟು ಹಬ್ಬದ ಪ್ರಯುಕ್ತ ಬಸವರಾಜ ಬೊಮ್ಮಾಯಿ ಅಭಿಮಾನಿ ಬಳಗದ ವತಿಯಿಂದ ಇಂದು ಮುಂಜಾನೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆ ವರೆಗೆ ಉಚಿತ ಆರೋಗ್ಯ ತಪಾಸಣೆ, ಕಣ್ಣು ತಪಾಸಣೆ, ರಕ್ತದಾನ ಶಿಬಿರ ಏರ್ಪಡಿಸಲಾಗಿದೆ.

ಶಿಗ್ಗಾವಿಯ ಬಸವರಾಜ ಬೊಮ್ಮಾಯಿ ಯವರ ಸಮುದಾಯ ಭವನದಲ್ಲಿ ನಡೆಯುವುದು ಆದ್ದರಿಂದ ಈ ಕಾರ್ಯಕ್ರಮಕ್ಕೆ ತಂದೆ ತಾಯಿಂದಿರು ಶಿಗ್ಗಾಂವ ಸವಣೂರು ತಾಲೂಕಿನ ಎಲ್ಲಾ ಸಂಘ ಸಂಸ್ಥೆಯ ಅಧ್ಯಕ್ಷರು ಉಪಾಧ್ಯಕ್ಷರು ಸರ್ವಸದಸ್ಯರು, ಸಾಹಿತಿಗಳು,ಕಲಾವಿದರು ಹಾಗೂ ತಾಲೂಕಿನ ಗಣ್ಯಮಾನ್ಯರು ಆಗಮಿಸಲು ಬಸವರಾಜ ಬೊಮ್ಮಾಯಿ ಅಭಿಮಾನಿ ಬಳಗದ ಪ್ರಕಟಣೆ ತಿಳಿಸಿದೆ.

ಬಸವರಾಜ ಬೊಮ್ಮಾಯಿಯವರ ಜನ್ಮ ದಿನಾಚರಣೆ ಹಿನ್ನಲೆಯಲ್ಲಿ ಶಿಗ್ಗಾವಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಮುಖಂಡ ಭರತ್ ಬೊಮ್ಮಾಯಿಯವರು ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಹಾವೇರಿಯ ಇಜಾರಿ ಲಕ್ಮಾಪುರದ ಜ್ಯೋತಿ ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ನಂತರ ಗಾಂಧಿ ವೃತ್ತದಲ್ಲಿ ನಡೆಯುವ 108 ಜಂಗಮ ವಟುಗಳಿಗೆ ಏರ್ಪಡಿಸಿರುವ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಶಿಗ್ಗಾವಿಯ ಬಸವರಾಜ ಬೊಮ್ಮಾಯಿಯವರ ಸಭಾ ಭವನದಲ್ಲಿ ಏರ್ಪಸಿರುವ ಬಸವರಾಜ ಬೊಮ್ಮಾಯಿಯವರ ಹುಟ್ಟು ಹಬ್ಬ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ನಂತರ ಕಾರಡಗಿ ವೀರಭದ್ರೇಶ್ವರ ದೇವಸ್ಥಾನಕ್ಕೆ ಭೇಟಿ ವಿಶೇಷ ಪೂಜೆ ಸಲ್ಲಿಸಲಿದ್ದಾರೆ. ನಂತರ ಸವಣೂರಿನ ಬುದ್ದಿಮಾಂದ್ಯ ಮತ್ತ ಅಂಧ ಮಕ್ಕಳ ಶಾಲೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿಯವರ ಹುಟ್ಟು ಹಬ್ಬ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ಹುಬ್ಬಳ್ಳಿಯ ಸದ್ಗುರು ಶ್ರೀ ಸಿದ್ಧಾರೂಢ ಮಠಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಲಿದ್ದಾರೆ.

# ವೈದ್ಯರ ಸಲಹೆ ಮೇರೆಗೆ ಔಷಧಿ ಬಳಸಿ:ಶ್ರೀಕಂಠ




**ಶಿಡ್ಲಘಟ್ಟ:** ಇತ್ತೀಚಿನ ದಿನಗಳಲ್ಲಿ ಐಶಾರಾಮಿ ಜೀವನದಿಂದ ನಗರ ಪ್ರದೇಶದಲ್ಲಿ ಪ್ರತಿ 100 ಮಂದಿಗೆ 20 ಮಂದಿ ಮತ್ತು ಗ್ರಾಮೀಣ ಪ್ರದೇಶದಲ್ಲಿ ಶೇ. 10 ಮಂದಿ ಮಧುಮೇಹ ಮತ್ತು ಅಧಿಕ ರಕ್ತದೊತ್ತಡದಿಂದ ಬಳಲುತ್ತಿದ್ದಾರೆ, ಸಮಸ್ಯೆಗಳನ್ನು ಆರಂಭದ ಹಂತದಲ್ಲೇ ತಪಾಸಣೆ ಮಾಡಿಸುವ ಮೂಲಕ, ವೈದ್ಯರ ಸಲಹೆ ಮೇರೆಗೆ ಔಷಧಿಗಳನ್ನು ಬಳಸುವುದು ಮತ್ತು ಜೀವನ ಶೈಲಿಯಲ್ಲಿ ಬದಲಾವಣೆಗಳನ್ನು ತರುವುದರಿಂದ ಕಡಿಮೆ ಮಾಡಬಹುದು ಎಂದು ಬೆಂಗಳೂರಿನ ಸಮತ್ವಂ ಸೇವಾ ಸಂಸ್ಥೆಯ ಮುಖ್ಯಸ್ಥರಾದ ಡಾ. ಸತ್ಯನಾರಾಯಣ ಶ್ರೀಕಂಠ ತಿಳಿಸಿದರು.

ತಾಲ್ಲೂಕಿನ ಮಳ್ಳೂರು ಗ್ರಾಮದಲ್ಲಿನ ಗೌರಮ್ಮ ಮಲ್ಲಿಶೆಟ್ಟಿ ಆರೋಗ್ಯ ಕೇಂದ್ರದಲ್ಲಿ ಸಮತ್ವಂ ಸ್ವಯಂ ಸೇವಾ ಸಂಸ್ಥೆ ಹಾಗೂ ಪುವ್ವಾಡ ಫೌಂಡೇಷನ್‌ನ ಆಶ್ರಯದಲ್ಲಿ ನಡೆದ ಅಧಿಕ ರಕ್ತದೊತ್ತಡ, ಮಧುಮೇಹ, ಮತ್ತು ಕಣ್ಣಿನ ಉಚಿತ ತಪಾಸಣೆ ಹಾಗೂ ಔಷಧೋಪಚಾರ ಶಿಬಿರದಲ್ಲಿ ಅವರು ಮಾತನಾಡಿದರು.

ವ್ಯಾಯಾಮ, ಯೋಗ, ಮತ್ತು ಧಾರ್ಮಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಮಧುಮೇಹ ಮತ್ತು ಅಧಿಕ ರಕ್ತದೊತ್ತಡದಿಂದ ಉಂಟಾಗುವ ದೀರ್ಘಕಾಲೀನ ಪರಿಣಾಮಗಳನ್ನು ತಪ್ಪಿಸಬಹುದು ಅಡ್ಡ ಪರಿಣಾಮಗಳಿಂದ ದೂರವಾಗಲು ಇದು ಸಹಾಯಕ ಎಂದು ಹೇಳಿದರು.


ಡಾ.ಶ್ರೀಕಂಠ ಮಾತನಾಡಿ ಸಮತ್ವಂ ಸೇವಾ ಸಂಸ್ಥೆಯು ದಾನಿಗಳ ನೆರವಿನಿಂದ ರಾಜ್ಯದ ಉದ್ದಗಲಕ್ಕೂ 3 ಲಕ್ಷಕ್ಕೂ ಹೆಚ್ಚು ಮಂದಿಗೆ ಉಚಿತ ತಪಾಸಣೆ ಮತ್ತು ಔಷಧಿ ವಿತರಣೆ ಮಾಡುತ್ತಿದೆ, ಬೆಂಗಳೂರು ಕೇಂದ್ರದ ಕಚೇರಿಯಿಂದ ಇಂತಹ ಸೇವಾ ಚಟುವಟಿಕೆಗಳನ್ನು ನಡೆಸುತ್ತಿದ್ದೇವೆ,ಮಳ್ಳೂರಿನ ಗೌರಮ್ಮ ಮಲ್ಲಿಶೆಟ್ಟಿ ಆರೋಗ್ಯ ಕೇಂದ್ರದಲ್ಲಿ ಈಗಿನಿಂದಲೇ ನಮ್ಮ ರಾಮಕೃಷ್ಣ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಿದ್ದೇವೆ ಎಂದರು.

ಆಯ್ಕೆಯಾದ 350 ಮಂದಿಗೆ 3 ವರ್ಷಗಳ ಕಾಲ ನಿರಂತರ ತಪಾಸಣೆ ಮತ್ತು ಉಚಿತ ಔಷಧಿಗಳನ್ನು ನೀಡಲಾಗುವುದು ಎಂದು ನುಡಿದರು.

ಶಿಬಿರದಲ್ಲಿ 700 ಕ್ಕೂ ಹೆಚ್ಚು ಜನರಿಗೆ ಮಧುಮೇಹ, ಅಧಿಕ ರಕ್ತದೊತ್ತಡ, ಮತ್ತು ಕಣ್ಣಿನ ತಪಾಸಣೆ ಮಾಡಿ ಔಷಧಿಗಳನ್ನು ವಿತರಿಸಲಾಯಿತು,ಶಿಬಿರಾರ್ಥಿಗಳಿಗೆ ಪೌಷ್ಟಿಕ ಪಾನೀಯ ಮತ್ತು ಊಟವನ್ನು ವ್ಯವಸ್ಥೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ಡಾ.ಚೈತ್ರ, ಡಾ.ಪ್ರವಾಡ್ ಸಂದೀಪ್, ಡಾ.ಪ್ರಿಯಾಂಕ, ವೇಲೂರು ಬಿ.ಎನ್.ಸಚಿನ್, ಎಂ.ಕೆ. ವೀರಕುಮಾರ್,ಸ್ವಯಂಸೇವಕರಾದ ಮನೋಜ್, ಪ್ರವೀಣ್, ಎನ್. ಮಂಜುನಾಥ್, ವಿನಯ್, ಸತೀಶ್ ಹಾಜರಿದ್ದರು.

# ಗಣರಾಜ್ಯೋತ್ಸವ: ನಿವೃತ್ತ ಯೋಧರಿಗೆ ಅವಮಾನ



**ಮುಳಬಾಗಿಲು:** ನಗರದ ಮಾರುತಿ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಿವೃತ್ತ ಯೋಧರು ಹಾಗೂ ಶಾಲೆಯ ಸಿಬ್ಬಂದಿ ಸಹಯೋಗದಲ್ಲಿ ವಿದ್ಯಾರ್ಥಿಗಳೊಂದಿಗೆ ಅದ್ದೂರಿ 76 ಗಣರಾಜ್ಯೋತ್ಸವ ದಿನಾಚರಣೆಯನ್ನು ನಿವೃತ್ತ ಯೋಧರು ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ಯೋಧರ ಸಂಘದ ತಾಲೂಕು ಅಧ್ಯಕ್ಷ ಗುಜ್ಜನಹಳ್ಳಿ ಜಿ ಎನ್ ನಾಗಭೂಷಣ್ ರಾವ್ ಮಾತನಾಡಿ ಮುಳಬಾಗಿಲಿನ ನೇತಾಜಿ ಕ್ರೀಡಾಂಗಣದಲ್ಲಿ ಅದ್ದೂರಿಯಾಗಿ 76ನೇ ಗಣರಾಜ್ಯ ದಿನಾಚರಣೆಯನ್ನು ತಾಲೂಕು ಆಡಳಿತ ಮತ್ತು ಶಾಸಕರ ಸಹಯೋಗದಲ್ಲಿ ಅದ್ದೂರಿಯಾಗಿ ಆಯೋಜಿಸಲಾಗಿತ್ತು. ಆದರೆ ಈ ಕಾರ್ಯಕ್ರಮದಲ್ಲಿ ತಾಲೂಕು ಆಡಳಿತ ಮತ್ತು ಶಾಸಕರು ನಿವೃತ್ತ ಯೋಧರಿಗೆ ಸರಿಯಾದ ಸ್ಥಾನ ಮಾನ ನೀಡಿಲ್ಲ, ಏನು ಮಾಧ್ಯಮಗಳಲ್ಲಿ ತಿಳಿಸಿದಂತೆ ನಿವೃತ್ತ ಯೋಧರಿಗೆ ಸನ್ಮಾನ ಕಾರ್ಯಕ್ರಮವನ್ನು ಮಾಡುವ ಕುರಿತು ಈ ಹಿಂದೆ ತಿಳಿಸಿದ್ದರೂ ಅದರಂತೆ ಆಹ್ವಾನ ಪತ್ರಿಕೆಗಳನ್ನು ಸಹ ಹೊಡಿಸಿದ್ದರು ಆದರೆ ಆ ಒಂದು ಆಹ್ವಾನ ಪತ್ರಿಕೆಯಲ್ಲಿ ನಿವೃತ್ತ ಯೋಧರ ಬಗ್ಗೆ ಮತ್ತು ನಿವೃತ್ತ ಯೋಧರ ಯಾರೊಬ್ಬರ ಹೆಸರನ್ನು ಸಹ ಉಲ್ಲೇಖಿಸದೆ ಕೇವಲ ನಾಮಕ ಅವಸ್ಥೆಗೆ 4-5 ಜನರಿಗೆ ಮಾತ್ರ ಆಹ್ವಾನ ಪತ್ರಿಕೆಯನ್ನು ನೀಡಿದ್ದು. ಇದು ನಿವೃತ್ತ ಯೋಧರಿಗೆ ಒಂದು ರೀತಿಯಲ್ಲಿ ಅವಮಾನ ಮಾಡಿಸಿದಂತೆ ಎಂದು ಆರೋಪಿಸಿದ್ದರು. ಹೊರರಾಜ್ಯ ಹಾಗೂ ಬೇರೆ ಜಿಲ್ಲೆಗಳಲ್ಲಿ ನಿವೃತ್ತ ಯೋಧರಿಗೆ ಅಧಿಕಾರಿಗಳು ಬಹಳಷ್ಟು ಗೌರವನ್ನು ಸಲ್ಲಿಸುತ್ತಾರೆ.ಆದರೆ ಮುಳಬಾಗಿಲು ತಾಲೂಕಿನಿಂದ ದೇಶದ ರಕ್ಷಣೆಗಾಗಿ ಸರ್ವವನ್ನು ತ್ಯಾಗ ಮಾಡಿ ಸೇವೆಯನ್ನು ಸಲ್ಲಿಸಿದಂತಹ ಮಾಜಿ ನಿವೃತ್ತ ಯೋಧರಿಗೆ ಶಾಸಕರು ಮತ್ತು ತಾಲೂಕು ಆಡಳಿತ ಸರಿಯಾದಂತಹ ಗೌರವವನ್ನು ನೀಡಿಲ್ಲ. ಇದು ಯಾರಿಂದ ಈ ಲೋಪವಾಗಿದೆ ಎಂಬುದು ಸಹ ಪರಿಗಣನೆಗೆ ತೆಗೆದುಕೊಂಡು ಮುಂದಿನ ದಿನಗಳಲ್ಲಿ ಇಂತಹ ತಪ್ಪುಗಳು ಆಗದಂತೆ ಕಾರ್ಯಕ್ರಮಗಳನ್ನು ಬಹಳ ಜಾಗರೂಕತೆಯಿಂದ ಆಯೋಜಿಸಬೇಕೆಂದು ತಮ್ಮ ನೋವನ್ನು ತಿಳಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳೊಂದಿಗೆ ಸಿಹಿ ತಿಂಡಿಗಳನ್ನು ಹಂಚಿ ಶಾಲಾ ಸಿಬ್ಬಂದಿಯ ಜೊತೆ ತಾಲೂಕಿನ ನಿವೃತ್ತ ಯೋಧರು ದೇಶದ ಹೆಮ್ಮೆಯ ಪ್ರತೀಕವಾದ ರಾಷ್ಟ್ರ ಧ್ವಜವನ್ನು ಧ್ವಜಾರೋಹಣ ಮಾಡಿ ತಮ್ಮ ಸಂತಸವನ್ನು ಹಂಚಿಕೊಂಡರು .ಸೇವೆ ಯಿಂದ ನಿವೃತ್ತರಾದರು ದೇಶಭಕ್ತಿ ತಮ್ಮಲ್ಲಿ ಕಿಂಚಿತ್ತು ಕಮ್ಮಿಯಾಗಿಲ್ಲ ಎಂದು ನಿವೃತ್ತಿಯಾದರೂ ಈ ಶಾಲೆಯಲ್ಲಿ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಸಾಕ್ಷಿಯಾದರು.

ಈ ಸಂದರ್ಭದಲ್ಲಿ ನಿವೃತ್ತ ಮಾಜಿ ಯೋಧರ ಸಂಘದ ಗೌರವಾಧ್ಯಕ್ಷ ರಹಮತುಲ್ಲಾ, ಕಾರ್ಯದರ್ಶಿ ನದೀಮ್ ಪಾಷ, ಖಜಾಂಚಿ ಸುಬ್ರಮಣಿ ,ಸಮಾಜ ಸೇವಕರು ಭಾಷಾ ,ವೀರ ನಾರಿಯರಾದ ಲಲಿತಮ್ಮ ,ಶಾಂತಮ್ಮ ,ಮುಗ್ಬಲ್ ನಿಸು ಹಾಗೂ ವೆಂಕಟರಾಮಪ್ಪ ,ವೇಣುಗೋಪಾಲ್, ವೆಂಕಟೇಶಪ್ಪ ,ಕಲೀಲ್, ಗೋಪಾಲಪ್ಪ ಸೇರಿದಂತೆ ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀಧರ್ ಬಾಬು ,ಕಾಂತಾಬಾಯಿ ,ನಾಗೇಂದ್ರ ,ರಾಜು, ಮಂಜುನಾಥ್ ,ಕಲ್ಪನಾ ,ಅಶ್ವಿನಿ ,ಮಮತಾ ಸೇರಿದಂತೆ ಶಾಲೆಯ ಇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು

## ಖ್ಯಾತ ಕಲಾವಿದರಿಂದ ಶ್ರೇಷ್ಠ ಸಂಗೀತ ಪ್ರದರ್ಶನ



**ನವದೆಹಲಿ:** ರಾಷ್ಟ್ರಪತಿ ಭವನದಲ್ಲಿ ನಡೆದ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕರ್ನಾಟಕದ ಖ್ಯಾತ ಕಲಾವಿದರು ತಮ್ಮ ಶ್ರೇಷ್ಠ ಸಂಗೀತ ಪ್ರದರ್ಶನವನ್ನು ನೀಡಿ ರಾಜ್ಯದ ಕೀರ್ತಿಯನ್ನು ಮತ್ತೆ ರಾಷ್ಟ್ರಪತಿ ಭವನದ ಹೊಸ್ತಿಲಿಗೆ ಕೊಂಡೊಯಿತು.

ಭಾರತ ಗಣತಂತ್ರದ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಮತ್ತು ಇಂಡೋನೇಷಿಯಾದ ರಾಷ್ಟ್ರಪತಿ ಪ್ರಬೋವೋ ಸುಬಿಯಾಂತೋ ಅವರ ಸಮ್ಮುಖದಲ್ಲಿ ಈ ಕಾರ್ಯಕ್ರಮ ನಡೆಯಿತು.

ಕೊಳಲಿನಲ್ಲಿ ವಿದ್ವಾನ್ ರಾಜಕಮಲ್, ಪಿಟೀಲಿನಲ್ಲಿ ವಿದ್ವಾನ್ ಸುಮಂತ್ ಮಂಜುನಾಥ್, ವೀಣೆಯಲ್ಲಿ ವಿದುಷಿ ಐಶ್ವರ್ಯಾ ಮಣಿಕರ್ಣಿಕಾ, ಮೃದಂಗದಲ್ಲಿ ವಿದ್ವಾನ್ ಮಂಜುನಾಥ್ ಬಿ.ಸಿ., ಖಂಜೀರದಲ್ಲಿ ವಿದ್ವಾನ್ ಜಿ ಗುರು ಪ್ರಸನ್ನ ಮತ್ತು ತವಿಲ್‌ನಲ್ಲಿ ವಿದ್ವಾನ್ ತೇಜಾ ಆರ್ ತಮ್ಮ ಮಧುರ ಸಂಗೀತದ ಮೂಲಕ ಪ್ರೇಕ್ಷಕರ ಮನಸೂರೆಗೊಂಡರು.

ಸಂಗೀತ ನಾಟಕ ಅಕಾಡಮಿ ಕಾರ್ಯಕ್ರಮಾಧಿಕಾರಿ ಶಿಲ್ಪಾ ಅರುಣ್ ಕುಮಾರ್ ಕಾರ್ಯಕ್ರಮ ನಿರ್ವಹಿಸಿದರು. ಈ ಅದ್ಭುತ ಪ್ರದರ್ಶನವು ಕರ್ನಾಟಕದ ಸಾಂಸ್ಕೃತಿಕ ವೈಭವವನ್ನು ಜಾಗತಿಕ ಮಟ್ಟದಲ್ಲಿ ಉಜ್ವಲಗೊಳಿಸುವ ಮಹತ್ವದ ಕ್ಷಣವಾಯಿತು.

## ಸಲ್ಮಾನ್ ಖಾನ್ ಆಪ್ತ, ಬಾಬಾ ಸಿದ್ದಿಕಿ ಹತ್ಯೆಗೆ ಕಾರಣ ತಿಳಿಸಿದ ಶೂಟರ್!

**ಮಹಾರಾಷ್ಟ್ರ:** 1993ರ ಮುಂಬೈ ಸ್ಫೋಟ ಪ್ರಕರಣದ ಸಂಚುಕೋರ ಹಾಗೂ ಭೂಗತ ಪಾತಕಿ ದಾವೂದ್ ಇಬ್ರಾಹಿಂ ಜೊತೆಗಿನ ನಂಟು ಹೊಂದಿದ್ದ ಹಿನ್ನೆಲೆಯಲ್ಲಿ ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿಯನ್ನು ಹತ್ಯೆ ಮಾಡುವಂತೆ ಗ್ಯಾಂಗ್‌ಸ್ಟರ್ ಅನ್ಮೋಲ್ ಬಿಷ್ಣೋಯಿ ಸೂಚಿಸಿದ್ದರು ಎಂದು ಕೃತ್ಯದ ಪ್ರಮುಖ ಶೂಟರ್ ಶಿವಕುಮಾರ್ ಗೌತಮ್ ಪೊಲೀಸರ ಮುಂದೆ ಬಾಯ್ಬಿಟ್ಟಿದ್ದಾನೆ.

ಕಳೆದ ವರ್ಷದ ಅ.12ರಂದು ಮಹಾರಾಷ್ಟ್ರದ ಮಾಜಿ ಸಚಿವ ಬಾಬಾ ಸಿದ್ದಿಕಿ ಹತ್ಯೆ ಸಂಬಂಧಿಸಿದಂತೆ ಪೊಲೀಸರು ನ್ಯಾಯಾಲಯಕ್ಕೆ ಸಲ್ಲಿಸಿರುವ ಚಾರ್ಜ್‌ಶೀಟ್‌ನಲ್ಲಿ ಆರೋಪಿ ಗೌತಮ್‌ನ ಹೇಳಿಕೆ ದಾಖಲಾಗಿದೆ. 450 ಪುಟಗಳ ಚಾರ್ಜ್‌ಶೀಟ್ ಅನ್ನು ವಿಶೇಷ ಎಂಸಿಒಸಿಎ ನ್ಯಾಯಾಲಯದ ಮುಂದೆ ಸಲ್ಲಿಸಲಾಗಿದ್ದು, ಆರು ಮಂದಿ ಆರೋಪಿಗಳ ತಪ್ಪೊಪ್ಪಿಗೆಯೊಂದಿಗೆ 16 ಆರೋಪಿಗಳು ಕೃತ್ಯದಲ್ಲಿ ಭಾಗಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಗುಜರಿ ಆಯುತ್ತಿದ್ದ ವ್ಯಕ್ತಿಗೆ ಡೀಲ್: ಬಾಬಾ ಸಿದ್ದಿಕಿ ಅಥವಾ ಜೀಶನ್ ಸಿದ್ದಿಕಿಯನ್ನು ಹತ್ಯೆ ಮಾಡಿದರೆ 15 ಲಕ್ಷ ರೂ ನೀಡುವುದಾಗಿ ನಮಗೆ ಸೂಚನೆ ನೀಡಲಾಗಿತ್ತು ಎಂದು ಗೌತಮ್ ಹೇಳಿಕೆ



ನೀಡಿದ್ದಾನೆ. ನಾನು ಗುಜರಿ ಸಂಗ್ರಹಿಸಿ, ಪ್ರಕರಣದ ಸಹ ಆರೋಪಿಯಾಗಿರುವ ಹರೀಶ್ ಕುಮಾರ್ ಕಶ್ಯಪ್‌ಗೆ ಮಾರಾಟ ಮಾಡುತ್ತಿದ್ದೆ. ಕಶ್ಯಪ್ ಗುಜರಿ ಅಂಗಡಿ ನಡೆಸುತ್ತಿದ್ದ. ಇದೇ ಸಂದರ್ಭದಲ್ಲಿ ನನಗೆ ಪ್ರವೀಣ್ ಲೋಂಕರ್ ಹಾಗೂ ಆತನ ಸಹೋದರ ಶುಭಂ ಲೋಂಕರ್ ಪರಿಚಯವಾಯಿತು ಎಂದು ಆತ ಪೊಲೀಸರಿಗೆ ವಿವರಿಸಿದ್ದಾನೆ.

ನಾನು ಮತ್ತು ನನ್ನ ಸಹೋದರ ಬಿಷ್ಣೋಯಿ ಗ್ಯಾಂಗ್‌ಗೆ ಕೆಲಸಮಾಡುವಂತೆ ಒಂದು ದಿನ ಶುಭಂ ಲೋಂಕರ್ ತಿಳಿಸಿದ. ಜೂನ್ 2024ರಂದು ಶುಭಂ ಲೋಂಕರ್ ಧರ್ಮರಾಜ್ ಕಶ್ಯಪ್‌ಗೆ ನಮ್ಮ ಕೆಲಸ ಮಾಡಿದರೆ, 10ರಿಂದ 15 ಲಕ್ಷ ರೂ ನೀಡುವುದಾಗಿ ತಿಳಿಸಿದ. ನಾನು ಕೆಲಸದ ಕುರಿತು ವಿಚಾರಿಸಿದಾಗ ಬಾಬಾ ಸಿದ್ದಿಕಿ ಅಥವಾ ಆತನ ಮಗ ಜೀಶನ್ ಸಿದ್ದಿಕಿಯನ್ನು ಕೊಲ್ಲಬೇಕು ಎಂದು ಹೇಳಿದ. ಆದರೆ, ಹೆಚ್ಚಿನ ವಿವರ ನೀಡಲಿಲ್ಲ ಎಂದು ಹೇಳಿರುವುದು ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಲಾಗಿದೆ.

ಮುಂಬೈ ಸ್ಫೋಟ ಪ್ರಕರಣ ಹಾಗೂ ದಾವೂದ್ ಇಬ್ರಾಹಿಂ ಜೊತೆಗಿನ ಒಡನಾಟದಿಂದಾಗಿ ಸಿದ್ದಿಕಿಯನ್ನು ಕೊಲ್ಲಬೇಕು ಎಂದು ಬಿಷ್ಣೋಯಿ ಹೇಳಿದ. ಅಲ್ಲದೇ, ಏನಾದರೂ ಅಗತ್ಯವಿದ್ದಲ್ಲಿ ಶುಭಂ ಲೋಂಕರ್ ಹಣದ ವ್ಯವಸ್ಥೆ ಮಾಡುವುದಾಗಿ ತಿಳಿಸುವ ಜೊತೆಗೆ ಕೃತ್ಯಕ್ಕೆ ಪ್ರೇರಣೆಯ ಮಾತುಗಳನ್ನಾಡಿದರು. ಇದಾದ ಬಳಿಕ ನಾವಿಬ್ಬರೂ ಲೋಂಕರ್ ಸಹೋದರ ಬಿಷ್ಣೋಯಿ ಗ್ಯಾಂಗ್‌ಗೆ ಕೆಲಸ ಮಾಡಲು ಹೇಳಿದರು. ಶುಭಂ ಸೂಚನೆಯಂತೆ ನಾನು ಮೊಬೈಲ್‌ನಲ್ಲಿ ಸ್ನಾಪ್‌ಚಾಟ್ ಡೌನ್‌ಲೋಡ್ ಮಾಡಿಕೊಂಡೆ, ಅನ್ಮೋಲ್ ಬಿಷ್ಣೋಯಿ ಜೊತೆಗೆ ನೇರವಾಗಿ ಮಾತನಾಡಿದೆ ಎಂದು ಶೂಟರ್ ತಿಳಿಸಿದ್ದಾನೆ.

ಕೃತ್ಯಕ್ಕೆ ಮುನ್ನ ಗೌತಮ್ ಮತ್ತು ಕಶ್ಯಪ್ ಶುಭಂ ಲೋಂಕರ್ ಪರಿಚಿತ ಮತ್ತೊಬ್ಬ ವ್ಯಕ್ತಿ ಗುರ್ಮಿಲ್ ಸಿಂಗ್ ಎಂಬಾತನನ್ನು ಅಮೃತ್‌ಸರ್‌ನಿಂದ ಮುಂಬೈಗೆ ಕೊಲೆ ಮಾಡಲು ಕಳುಹಿಸಲಾಗಿತ್ತು. ಶುಭಂ ಲೋಂಕರ್‌ಗೆ ಶಸ್ತ್ರಾಸ್ತ್ರಗಳನ್ನು ನೀಡಿ ಶೂಟಿಂಗ್ ತರಬೇತಿ ನಡೆಸುವಂತೆ ತಿಳಿಸಿದ್ದರು. ಮೂವರು ಶೂಟರ್‌ಗಳು ಖೊಪೊಲಿ ರೈಲ್ವೆ ನಿಲ್ದಾಣದ ಸುತ್ತಮುತ್ತದ ಅರಣ್ಯದಲ್ಲಿ ತರಬೇತಿ ನೀಡಿದರು ಎಂದು ಆರೋಪಿಗಳು ತಪ್ಪೊಪ್ಪಿಗೆಯಲ್ಲಿ ತಿಳಿಸಿದ್ದಾರೆ.

ಈ ಪ್ರಕರಣದಲ್ಲಿ ಶುಭಂ ಲೋಂಕರ್, ಯಾಸಿನ್ ಅಖ್ತರ್ ಮತ್ತು ಅನ್ಮೋಲ್ ಬಿಷ್ಣೋಯಿ ವಾಂಟೆಡ್ ಅಪರಾಧಿಗಳಾಗಿದ್ದಾರೆ. ಶೂಟರ್ ಗುರ್ಮಿಲ್ ಸಿಂಗ್ ತಪ್ಪೊಪ್ಪಿಗೆಯಲ್ಲಿ, 2022ರ ಆಗಸ್ಟ್‌ನಲ್ಲಿ ತನ್ನ ತಾಯಿಯ ಸಾವಿನ ನಂತರ ಮಾನಸಿಕ ಆರೋಗ್ಯ ಹದಗೆಟ್ಟಿತು ಎಂದು ತಿಳಿಸಿದ್ದು, ಜೈಲಿನಲ್ಲಿದ್ದಾಗ ಜೀಶನ್ ಅಖ್ತರ್ ಮೂಲಕ ಅನ್ಮೋಲ್ ಬಿಷ್ಣೋಯಿ ನಿಕಟ ಸಂಪರ್ಕಕ್ಕೆ ಒಳಗಾಗಿದ್ದಾಗಿ ತಿಳಿಸಿದ್ದಾನೆ. ಕೃತ್ಯಕ್ಕೆ ನನಗೆ 50 ಸಾವಿರ ರೂ ನೀಡುವ ಜೊತೆಗೆ ದೇಶ ತೊರೆಯಲು ಸಹಾಯ ಮಾಡುವುದಾಗಿ ಹೇಳಿದ್ದರು ಎಂಬ ಮಾಹಿತಿ ಚಾರ್ಜ್‌ಶೀಟ್‌ನಲ್ಲಿ ದಾಖಲಾಗಿದೆ.

ಕೊಲೆ ಪ್ರಕರಣದ ಎಲ್ಲಾ ಆರೋಪಿಗಳ ಮೇಲೆ ಮಹಾರಾಷ್ಟ್ರ ಅಪರಾಧ ಸಂಘಟನೆ ನಿಯಂತ್ರಣ ಕಾಯ್ದೆ (ಎಂಸಿಒಸಿಎ) ಅಡಿ ಪ್ರಕರಣ ದಾಖಲಿಸಲಾಗಿದ್ದು, ಎಲ್ಲರೂ ಸದ್ಯ ನ್ಯಾಯಾಂಗ ವಶದಲ್ಲಿದ್ದಾರೆ. 66 ವರ್ಷದ ಬಾಬಾ ಸಿದ್ದಿಕಿಯನ್ನು ಮುಂಬೈನ ಪೂರ್ವ ಬಾಂದ್ರಾದ ಅವರ ಕಚೇರಿಯ ಹೊರಗೆ ಮೂವರು ಗುಂಡಿಕ್ಕಿ ಹತ್ಯೆ ಮಾಡಿದ್ದರು.

## ಅನಧಿಕೃತ ಜಾಹೀರಾತುಗಳು ಅಳವಡಿಸಿರುವವರ ಮೇಲೆ ಎಫ್‌ಐಆರ್ ದಾಖಲಿಸಿ: ತುಷಾರ್ ಗಿರಿನಾಥ್

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿರುವವರ ಮೇಲೆ ಎಫ್.ಐ.ಆರ್ ದಾಖಲಿಸಲು ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಇಂದು ಪಾಲಿಕೆ ಕೇಂದ್ರ ಕಛೇರಿಯಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳನ್ನು ತಡೆಯಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಾಲಿಕೆಯ ಎಲ್ಲಾ 8 ವಲಯಗಳಲ್ಲಿಯೂ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿರುವುದನ್ನು ಗುರುತಿಸಿ ಕೂಡಲೆ ಅದನ್ನು ತೆರವುಗೊಳಿಸಬೇಕು. ಜೊತೆಗೆ ಅನಧಿಕೃತ ಜಾಹೀರಾತು ಅಳವಡಿಸಿರುವವರ ಮೇಲೆ ಎಫ್.ಐ.ಆರ್ ದಾಖಲಿಸಬೇಕೆಂದು ಸೂಚಿಸಲಾಯಿತು.

ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ನೀಡಿ:

ಪಾಲಿಕೆ ವ್ಯಾಪ್ತಿಯ 8 ವಲಯಗಳಲ್ಲಿ ಸಮೀಕ್ಷೆಯ ಮೂಲಕ 27655 ಬೀದಿ ಬದಿ ವ್ಯಾಪಾರಿಗಳನ್ನು ಗುರುತಿಸಲಾಗಿದೆ. ಗುರುತಿಸಿರುವ ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ನೀಡಿ ಅವರಿಗೆ ನಿಗದಿಪಡಿಸಿರುವ ಸ್ಥಳದಲ್ಲೇ ಮಾರಾಟ ಮಾಡಲು ಕ್ರಮವಹಿಸಬೇಕೆಂದು ಸೂಚನೆ ನೀಡಲಾಯಿತು.


ಒಂಟಿ ಮನೆ ಯೋಜನೆ ಅನುಷ್ಠಾನ: ನಗರದಲ್ಲಿ ಒಂಟಿ ಮನೆ ಯೋಜನೆಗಳಿಗೆ ಅರ್ಜಿಗಳನ್ನು ಸಲ್ಲಿಸಿರುವ ಪೈಕಿ, ಅರ್ಹ ಫಲಾನುಭವಿಗಳನ್ನು ಕೂಡಲೆ ಗುರುತಿಸಬೇಕು. ಅನಂತರ ಹಂತ-ಹಂತವಾಗಿ ಅನುದಾನ ಬಿಡುಗಡೆಗೊಳಿಸಲು ಅಗತ್ಯ ಕ್ರಮವಹಿಸಬೇಕೆಂದು ಸೂಚನೆ ನೀಡಲಾಯಿತು.

ಈ ವೇಳೆ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್, ಡಾ. ಕೆ ಹರೀಶ್ ಕುಮಾರ್, ಸುರಳ್ಕರ್ ವಿಕಾಸ್ ಕಿಶೋರ್, ಅವಿನಾಶ್ ಮೆನನ್ ರಾಜೇಂದ್ರನ್, ಪ್ರೀತಿ ಗೆಹ್ಲೋಟ್, ವಲಯ ಆಯುಕ್ತರಾದ ಸತೀಶ್, ಅರ್ಚನಾ, ಸ್ನೇಹಲ್, ವಿನತ್ ಪ್ರಿಯಾ, ರಮ್ಯಾ, ರಮೇಶ್, ಕರೀಗೌಡ, ಪ್ರಧಾನ ಅಭಿಯಂತರರು, ಮುಖ್ಯ ಅಭಿಯಂತರರು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

## ಕೈಲಾಸ ಮಾನಸ ಸರೋವರ ಯಾತ್ರೆ ಪುನರಾರಂಭಕ್ಕೆ ನಿರ್ಧಾರ

**ನವದೆಹಲಿ:** ಭಾರತ ಮತ್ತು ಚೀನಾ 2 ದಿನಗಳ ವಿದೇಶಾಂಗ ಕಾರ್ಯದರ್ಶಿ ಮಟ್ಟದ ಮಾತುಕತೆ ನಡೆಸಿದ್ದು, ಬೇಸಿಗೆಯಲ್ಲಿ ಕೈಲಾಸ-ಮಾನಸ ಸರೋವರ ಯಾತ್ರೆಯನ್ನು ಪುನರಾರಂಭಿಸಲು ನಿರ್ಧರಿಸಲಾಗಿದೆ. ಅಸ್ತಿತ್ವದಲ್ಲಿರುವ ಒಪ್ಪಂದಗಳ ಪ್ರಕಾರ, ಹಾಗೆ ಮಾಡುವ ವಿಧಾನಗಳ ಸಂಬಂಧಿತ ಕಾರ್ಯವಿಧಾನವು ಚರ್ಚಿಸುತ್ತದೆ ಎಂದು ಸರ್ಕಾರ ತಿಳಿಸಿದೆ. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಇಂದು ಭಾರತ ಮತ್ತು ಚೀನಾ ನಡುವಿನ ವಿದೇಶಾಂಗ ಕಾರ್ಯದರ್ಶಿ- ಉಪ ವಿದೇಶಾಂಗ ಸಚಿವ ಕಾರ್ಯವಿಧಾನದ ಸಭೆಗಾಗಿ ಬೀಜಿಂಗ್‌ಗೆ ಭೇಟಿ ನೀಡಿದ್ದರು.

ಅಕ್ಟೋಬರ್‌ನಲ್ಲಿ ಕಜಾನ್‌ನಲ್ಲಿ ನಡೆದ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಚೀನಾ ಅಧ್ಯಕ್ಷ ಕ್ಸಿ-ಜಿನ್‌ಪಿಂಗ್ ನಡುವೆ ಒಪ್ಪಿಕೊಂಡಂತೆ ಎರಡೂ ಕಡೆಯವರು ಭಾರತ-ಚೀನಾ ದ್ವಿಪಕ್ಷೀಯ



ಸಂಬಂಧಗಳ ಸ್ಥಿತಿಯನ್ನು ಪರಿಶೀಲಿಸಿದ್ದಾರೆ. ಸಂಬಂಧಗಳನ್ನು ಸ್ಥಿರಗೊಳಿಸಲು ಮತ್ತು ಪುನರ್‌ನಿರ್ಮಿಸಲು ಕ್ರಮಗಳನ್ನು ತೆಗೆದುಕೊಳ್ಳಲು ಒಪ್ಪಿಕೊಂಡಿದ್ದಾರೆ.

ಭಾರತ-ಚೀನಾ ಸಂಬಂಧಗಳು ದ್ವಿಪಕ್ಷೀಯ ಸಂಬಂಧಗಳ ಸಾಮಾನ್ಯೀಕರಣದತ್ತ ಸಾಗುತ್ತಿರುವಾಗ ಭಾರತ ಮತ್ತು ಚೀನಾ ಎರಡೂ ದೇಶಗಳ ನಡುವೆ ನೇರ ವಿಮಾನಗಳ ಮೂಲಕ ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಪುನರಾರಂಭಿಸಲು ಒಪ್ಪಿಕೊಂಡಿವೆ. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರ ಬೀಜಿಂಗ್‌ಗೆ 2 ದಿನಗಳ ಭೇಟಿಯ ಸಮಯದಲ್ಲಿ ಈ ನಿರ್ಧಾರ ಬಂದಿದೆ. ಈ ಸಭೆಯಲ್ಲಿ 2025ರ ಬೇಸಿಗೆಯಲ್ಲಿ ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಪುನರಾರಂಭಿಸಲು ಎರಡೂ ಕಡೆಯವರು ನಿರ್ಧರಿಸಿದರು.

## ಅತ್ಯಾಚಾರ ಪ್ರಕರಣದ ಅಪರಾಧಿ ರಾಮ್ ರಹೀಮ್‌ಗೆ 12ನೇ ಬಾರಿ ಸಿಕ್ಕು ಪೆರೋಲ್!

**ಚಂಡೀಗಢ:** ಹರಿಯಾಣದ ರೋಹ್ಟಕ್‌ನ ಸುನಾರಿಯಾ ಜೈಲಿನಲ್ಲಿ 20 ವರ್ಷಗಳ ಜೈಲು ಶಿಕ್ಷೆ ಅನುಭವಿಸುತ್ತಿರುವ ವಿವಾದಾತ್ಮಕ ಡೇರಾ ಸಚ್ಚಾ ಸೌದಾ ಪಂಥದ ಮುಖ್ಯಸ್ಥ ಗುರ್ಮೀತ್ ರಾಮ್ ರಹೀಮ್ ಸಿಂಗ್‌ಗೆ ಮಂಗಳವಾರ ಮತ್ತೊಮ್ಮೆ 30 ದಿನಗಳ ಪೆರೋಲ್ ನೀಡಲಾಗಿದೆ. ಕಳೆದ ನಾಲ್ಕು ವರ್ಷಗಳಲ್ಲಿ ರಾಮ್ ರಹೀಮ್ ಸಿಂಗ್‌ಗೆ ಇದು 12ನೇ ಪೆರೋಲ್ ಆಗಿದೆ. ತನ್ನ ಇಬ್ಬರು ಶಿಷ್ಯೆಯರ ಮೇಲೆ ಅತ್ಯಾಚಾರ ಎಸಗಿದ ಅಪರಾಧದ ಮೇಲೆ ಈತ ಜೈಲು ಶಿಕ್ಷೆ ಅನುಭವಿಸುತ್ತಿದ್ದಾನೆ.



2017ರ ಆಗಸ್ಟ್‌ನಲ್ಲಿ 20 ವರ್ಷಗಳ ಜೈಲು ಶಿಕ್ಷೆಗೆ ಗುರಿಯಾದ ಬಳಿಕ ಇದೇ ಮೊದಲ ಬಾರಿಗೆ ಸಿರ್ಸಾದಲ್ಲಿರುವ ತನ್ನ ಪಂಥದ ಡೇರಾಗೆ ತೆರಳಲಿರುವ ಗುರ್ಮೀತ್, ಅಲ್ಲಿ 10 ದಿನಗಳ ಕಾಲ ಇರಲಿದ್ದಾನೆ. ನಂತರ ಉತ್ತರ ಪ್ರದೇಶದ ಬಾಗ್ ಪಥ್?ಗೆ ತೆರಳಲಿದ್ದಾನೆ.

ಕಳೆದ ವರ್ಷದ ಅಕ್ಟೋಬರ್ 5ರಂದು ಹರಿಯಾಣದಲ್ಲಿ ಮತದಾನ ನಡೆಯಲು ನಾಲ್ಕು ದಿನಗಳ ಮುನ್ನ ಗುರ್ಮೀತ್ 20 ದಿನಗಳ ಪೆರೋಲ್ ಪಡೆದಿದ್ದ. ಅಪಾರ ಸಂಖ್ಯೆಯ ಅನುಯಾಯಿಗಳನ್ನು ಹೊಂದಿದ್ದ ಈತ ಅವರ ಮೇಲೆ ರಾಜಕೀಯವಾಗಿ ಪ್ರಭಾವ ಬೀರಬಲ್ಲವನಾಗಿದ್ದರಿಂದ ಹರಿಯಾಣದ ರಾಜಕೀಯ ಮುಖಂಡರು ಮತ್ತು ಪಕ್ಷಗಳು ದಶಕಗಳ ಕಾಲ ಈತನ ಬೆಂಬಲ ಪಡೆಯಲು ಹಾತೊರೆಯುತ್ತಿದ್ದರು. ಕಳೆದ ಬಾರಿ ತಮ್ಮ ತಂದೆ ಮಗರ್ ಸಿಂಗ್ ಅವರ ಪುಣ್ಯತಿಥಿಯ ಕಾರಣಕ್ಕಾಗಿ ಪೆರೋಲ್ ಕೋರಿದ್ದ. ಅಕ್ಟೋಬರ್ 5ರಂದು ಈತನ ತಂದೆಯ ಪುಣ್ಯತಿಥಿಯನ್ನು ಪಾರಮಾರ್ಥಿ ದಿವಸ್ ಎಂದು ಆಚರಿಸಲಾಗುತ್ತದೆ. ಕಳೆದ ವರ್ಷ ಹರಿಯಾಣ ಸರ್ಕಾರ ಆಗಸ್ಟ್‌ನಲ್ಲಿ ಈತನಿಗೆ 21 ದಿನಗಳ ಫರ್ಲೋ ರಜೆಯನ್ನು ನೀಡಿತ್ತು. ಅದು ಸೆಪ್ಟೆಂಬರ್ 2ರಂದು ಕೊನೆಗೊಂಡಿತ್ತು.

ರಾಮ್ ರಹೀಮ್ ಪ್ರಸ್ತುತ ರಾಜ್ಯ ರಾಜಧಾನಿ ಚಂಡೀಗಢದಿಂದ 250 ಕಿ.ಮೀ ದೂರದಲ್ಲಿರುವ ರೋಹ್ಟಕ್‌ನ ಭಾರಿ ಭದ್ರತೆಯ ಸುನಾರಿಯಾ ಜೈಲಿನಲ್ಲಿದ್ದಾನೆ. ಈ ಹಿಂದೆರಾಮ್ ರಹೀಮ್ ತನ್ನ ಸಾಕು ಹೆಣ್ಣುಮಕ್ಕಳ ವಿವಾಹ ಸಮಾರಂಭದಲ್ಲಿ ಭಾಗವಹಿಸಲು ಸಲ್ಲಿಸಿದ್ದ ಪೆರೋಲ್ ಅರ್ಜಿಯನ್ನು ಹೈಕೋರ್ಟ್ ತಿರಸ್ಕರಿಸಿತ್ತು. ಇಬ್ಬರು ಮಹಿಳೆಯರ ಮೇಲೆ ಅತ್ಯಾಚಾರ ಎಸಗಿದ ಆರೋಪದಲ್ಲಿ ಸ್ವಯಂ ಘೋಷಿತ ದೇವಮಾನವನಿಗೆ 2017ರ ಆಗಸ್ಟ್‌ನಲ್ಲಿ 20 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ.

ಪತ್ರಕರ್ತನ ಕೊಲೆ ಕೇಸ್: 2019ರಲ್ಲಿ ಪಂಚಕುಲದ ವಿಶೇಷ ಸಿಬಿಐ ನ್ಯಾಯಾಲಯವು 16 ವರ್ಷಗಳ ಹಿಂದೆ ಪತ್ರಕರ್ತನ ಕೊಲೆ ಪ್ರಕರಣದಲ್ಲಿ ಈತನಿಗೆ ಮತ್ತು ಇತರ ಮೂವರಿಗೆ ಜೀವಾವಧಿ ಶಿಕ್ಷೆ ವಿಧಿಸಿತ್ತು. ಆಗಸ್ಟ್ 25, 2017 ರಂದು ಈತನಿಗೆ ಶಿಕ್ಷೆ ವಿಧಿಸಿದಾಗ ಪಂಚಕುಲ ಮತ್ತು ಸಿರ್ಸಾದಲ್ಲಿ ಹಿಂಸಾಚಾರ ನಡೆದು 41 ಜನರು ಸಾವನ್ನಪ್ಪಿದ್ದರು ಮತ್ತು 260ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು.

## ಪೊಲೀಸರ ತಪ್ಪಿನಿಂದ ಒಬ್ಬ ಅಮಾಯಕನ ಜೀವನ ಹಾಳು

**ಥಾಣೆ:** ನಟ ಸೈಫ್ ಅಲಿ ಖಾನ್ ಮೇಲಿನ ಹಲ್ಲೆ ಪ್ರಕರಣದಲ್ಲಿ ಶಂಕಿತ ಆರೋಪಿಯಾಗಿ ಛತ್ತೀಸ್‌ಗಢದ ದುರ್ಗ್‌ನಲ್ಲಿ ಬಂಧಿತನಾಗಿರುವ ವ್ಯಕ್ತಿಯ ತಂದೆ ಪೊಲೀಸರು ತಮ ಮಗನ ಜೀವನವನ್ನು ಹಾಳು ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಥಾಣೆ ಜಿಲ್ಲೆಯ ಟಿಟ್ವಾಲಾದ ಇಂದಿರಾನಗರ ಚಾಲ್‌ನ ಚಾಲಕ ಮತ್ತು ನಿವಾಸಿ ಆಕಾಶ್ ಕನೋಜಿಯಾ (31) ಅವರನ್ನು ಮುಂಬೈ ಪೊಲೀಸರ ಸುಳಿವಿನ ನಂತರ ಜನವರಿ 18 ರಂದು ರೈಲ್ವೇ ಪ್ರೊಟೆಕ್ಷನ್ ಫೋರ್ಸ್ (ಆರ್‌ಪಿಎಫ್) ದುರ್ಗ್ ನಿಲ್ದಾಣದಲ್ಲಿ ರೈಲಿನಿಂದ ಬಂಧಿಸಲಾಗಿತ್ತು.

ಜನವರಿ 19 ರಂದು, ಮುಂಬೈ ಪೊಲೀಸರು ಬಾಂಗ್ಲಾದೇಶಿ ಪ್ರಜೆ ಶರೀಫುಲ್ ಇಸ್ಲಾಂ ಶೆಹಜಾದ್ ಮೊಹಮದ್ ರೋಹಿಲ್ಲಾ ಅಮೀನ್ ಫಕೀರ್ ಅಲಿಯಾಸ್ ವಿಜಯ್ ದಾಸ್ ಅವರನ್ನು ನಟನ ಮೇಲಿನ ದಾಳಿಗಾಗಿ ನೆರೆಯ ಥಾಣೆಯಿಂದ ಬಂಧಿಸಿದ ನಂತರ ಕನೋಜಿಯಾ ಅವರನ್ನು ದುರ್ಗ್ ಆರ್‌ಪಿಎಫ್ ಬಿಡುಗಡೆ ಮಾಡಿದೆ. ಪೊಲೀಸರು ನನ್ನ ಮಗನ ಗುರುತನ್ನು ಪರಿಶೀಲಿಸದೆ ಬಂಧಿಸಿದ್ದಾರೆ, ಈ ತಪ್ಪು ಅವನ ಜೀವನವನ್ನು ಹಾಳುಮಾಡಿದೆ, ಈಗ, ಮಾನಸಿಕ ಆಘಾತದಿಂದಾಗಿ, ಆಕಾಶ್ ಕೆಲಸದ ಮೇಲೆ ಕೇಂದ್ರೀಕರಿಸಲು ಅಥವಾ ಅವನ ಕುಟುಂಬದೊಂದಿಗೆ ಸಂವಹನ ನಡೆಸಲು ಆತನಿಗೆ ಸಾಧ್ಯವಾಗುತ್ತಿಲ್ಲ. ಅವನು ಹಿಂದೆ ಸರಿದಿದ್ದಾನೆ, ಸರಿಯಾಗಿ ಮಾತನಾಡುವುದಿಲ್ಲ, ಮತ್ತು ಆತ ಎಲ್ಲಾ ಪ್ರೇರಣೆಯನ್ನು ಕಳೆದುಕೊಂಡಿದ್ದಾನೆ ಎಂದು ಅವರ ತಂದೆ ಕೈಲಾಶ್ ಕನೋಜಿಯಾ ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಹೇಳಿದರು.

ನನ್ನ ಮಗನಿಗೂ ನಿಜವಾದ ಆರೋಪಿಗೂ ಯಾವುದೇ ಸಾಮ್ಯತೆ ಇಲ್ಲ ಎಂದು ಜನರು ಹೇಳುತ್ತಿದ್ದಾರೆ, ಅವನು ಕೆಲಸ ಕಳೆದುಕೊಂಡನು ಮತ್ತು ಅವನ ಮದುವೆಯನ್ನು ರದ್ದುಗೊಳಿಸಲಾಯಿತು, ಯಾರು ಹೊಣೆ ಪೊಲೀಸರ ವರ್ತನೆಯು ಆಕಾಶ್‌ನ ಭವಿಷ್ಯವನ್ನು ನಾಶಮಾಡಿದೆ, ಎಂದು ಅವರು ಹೇಳಿದರು. ಆಕಾಶ್ ಕೂಡ ಪೊಲೀಸ್ ಕ್ರಮದ ನಂತರ ತನ್ನ ಜೀವನವು ಸಂಪೂರ್ಣ ಅಸ್ತವ್ಯಸ್ತವಾಗಿದೆ ಎಂದು ಹೇಳಿದರು, ಅವನಿಗೆ ಕೆಲಸವಿಲ್ಲ, ಅವನ ನಿರೀಕ್ಷಿತ ವಧು ಮತ್ತು ಅವನ ಕುಟುಂಬದಿಂದ ಅವಮಾನವನ್ನು ಎದುರಿಸುತ್ತಿದೆ.

## ಭಾರತ,ಚೀನಾಗೆ ಟ್ರಂಪ್ ಶಾಕ್

**ವಾಷಿಂಗ್ಟನ್:** ಅಮೆರಿಕಕ್ಕೆ ಹಾನಿ ಉಂಟುಮಾಡುವ ದೇಶಗಳ ಮೇಲೆ ಅಮೆರಿಕ ಸುಂಕ ವಿಧಿಸಲಿದೆ ಎಂದು ಅಧ್ಯಕ್ಷ ಡೊನಾಲ್?ಡ ಟ್ರಂಪ್ ಹೇಳಿದ್ದಾರೆ.ಈ ನಡುವೆ ಚೀನಾ, ಭಾರತ ಮತ್ತು ಬ್ರೆಜಿಲ್ ಹೆಚ್ಚಿನ ಸುಂಕದ ದೇಶಗಳೆಂದು ಘೋಷಿಸಿದ್ದಾರೆ. ನಾವು ಹೊರಗಿನ ದೇಶಗಳು ಮತ್ತು ಹೊರಗಿನ ಜನರ ಮೇಲೆ ಸುಂಕ ವಿಧಿಸಲಿದ್ದೇವೆ ,ಅದು ನಮಗೆ ನಿಜವಾಗಿಯೂ ಹಾನಿಯನ್ನುಂಟುಮಾಡುತ್ತದೆ ಸರಿ, ಅವರು ನಮಗೆ ಹಾನಿಯನ್ನುಂಟು ಮಾಡುತ್ತಾರೆ, ಆದರೆ ಅವರು ಮೂಲತಃ ತಮ ದೇಶವನ್ನು ಒಳ್ಳೆಯದಾಗಿಸಲು ಬಯಸುತ್ತಾರೆ ಎಂದು ಟ್ರಂಪ್ ಕಳೆದ ವಾರ ಎರಡನೇ ಅವಧಿಗೆ ಅಧ್ಯಕ್ಷರಾದ ನಂತರ ಫ್ಲೋರಿಡಾದಲ್ಲಿ ಹೇಳಿದ್ದರು,ಆದರೆ ಯಾವ ದೇಶ ಎಂದು ಹೇಳಿರಲಿಲ್ಲ.

ಚೀನಾ ಪ್ರಚಂಡ ಸುಂಕ ತಯಾರಕ, ಮತ್ತು ಭಾರತ ಮತ್ತು ಬ್ರೆಜಿಲ್ ಮತ್ತು ಇತರ ಹಲವು ದೇಶಗಳಿವೆ , ಆದ್ದರಿಂದ ನಾವು ಇನ್ನು ಮುಂದೆ ಬಿಡುವುದಿಲ್ಲ ಏಕೆಂದರೆ ಅಮೆರಿಕ ಮೊದಲ ಆದ್ಯತೆಯಾಗಬೇಕುಎಂದು ಅವರು ಹೇಳಿದರು. ನಮ ಖಜಾನೆಗೆ ಹಣ ಬರಲಿದೆ ಮತ್ತು ಅಮೆರಿಕ ಮತ್ತೆ ಬಹಳ ಶ್ರೀಮಂತವಾಗಲಿರುವ ಅತ್ಯಂತ ನ್ಯಾಯಯುತ ವ್ಯವಸ್ಥೆಯನ್ನು ಸ್ಥಾಪಿಸುತ್ತದೆ ಅದು ಬಹಳ ಬೇಗನೆ ಸಂಭವಿಸುತ್ತದೆ ಎಂದು ಹೇಳಿದರು.ಅಮೆರಿಕವು



ಹಿಂದಿಗಿಂತಲೂ ಹೆಚ್ಚು ಶ್ರೀಮಂತ ಮತ್ತು ಶಕ್ತಿಶಾಲಿ ವ್ಯವಸ್ಥೆಗೆ ಮರಳುವ ಸಮಯ ಬಂದಿದೆ ಎಂದು ಟ್ರಂಪ್ ಒತ್ತಿ ಹೇಳಿದರು.


ಟ್ರಂಪ್ ಈಗಾಗಲೇ ಭಾರತವನ್ನು ಒಳಗೊಂಡಿರುವ ಬ್ರಿಕ್ಸ ಗುಂಪಿನ ಮೇಲೆ ಶೇಕಡಾ 100 ಸುಂಕಗಳನ್ನು ವಿಧಿಸುವ ಬಗ್ಗೆ ಮಾತನಾಡಿದ್ದಾರೆ. ನೀವು ತೆರಿಗೆಗಳು ಅಥವಾ ಸುಂಕಗಳನ್ನು ಪಾವತಿಸುವುದನ್ನು ನಿಲ್ಲಿಸಲು ಬಯಸಿದರೆ, ನೀವು ಅಮೆರಿಕದಲ್ಲಿಯೇ ನಿಮ ಸ್ಥಾವರವನ್ನು ನಿರ್ಮಿಸಬೇಕು. ಇದರಿಂದ ದಾಖಲೆಯ ಮಟ್ಟದಲ್ಲಿ ಅದು ಸಂಭವಿಸುತ್ತದೆ. ಮುಂದಿನ ಅಲ್ಪಾವಧಿಯಲ್ಲಿಯೇ ಯಾರೂ ಊಹಿಸಿರುವುದಕ್ಕಿಂತ ಹೆಚ್ಚಿನ ಸ್ಥಾವರಗಳನ್ನು ನಾವು ನಿರ್ಮಿಸಲಿದ್ದೇವೆ ಎಂದರು.

ಅಮೆರಿಕದಲ್ಲಿ, ವಿಶೇಷವಾಗಿ ಔಷಧಗಳು, ಅರೆವಾಹಕಗಳು ಮತ್ತು ಉಕ್ಕಿನಂತಹ ಕೈಗಾರಿಕೆಗಳಲ್ಲಿ ಸ್ಥಾವರಗಳನ್ನು ನಿರ್ಮಿಸುವ ಕಂಪನಿಗಳನ್ನು ಅಮೆರಿಕ ಬೆಂಬಲಿಸುತ್ತದೆ ಎಂದು ಅಧ್ಯಕ್ಷರು ಹೇಳಿದರು.

## ಸನಾತನ ಮಂಡಳಿ ಸ್ಥಾಪನೆಗೆ ಋಷಿಗಳ ಕರೆ

**ಮಹಾಕುಂಭ ನಗರ:** ಇಲ್ಲಿ ನಡೆಯುತ್ತಿರುವ ಮಹಾಕುಂಭದ ನಡುವೆ ನಡೆದ ಧರ್ಮ ಸಂಸದ್‌ನಲ್ಲಿ ಸನಾತನ ಮಂಡಳಿಯನ್ನು ಸ್ಥಾಪಿಸಲು ವಿವಿಧ ಮತಮಾನ್ಯಗಳು ಮತ್ತು ಗುಂಪುಗಳನ್ನು ಪ್ರತಿನಿಧಿಸುವ ಋಷಿಗಳು ಕರೆ ನೀಡಿದ್ದಾರೆ. ಹಿಂದೂ ದೇವಾಲಯಗಳನ್ನು ಕೆಡವಿ ನಿರ್ಮಿಸಿದ ಮಸೀದಿಗಳನ್ನು ಸಂರಕ್ಷಿಸಲು ಸಮಾಲೋಚನೆಯಿಲ್ಲದೆ ಕಾನೂನನ್ನು ಹೇರಲಾಗಿದೆ ಎಂದು ಹೇಳಿದ ಜಗದ್ಗುರು ವಿದ್ಯಾಭಾಸ್ಕರ್ ಜಿ ಮಹಾರಾಜ್ ಅವರು ಪೂಜಾ ಸ್ಥಳಗಳ (ವಿಶೇಷ ನಿಬಂಧನೆಗಳು) ಕಾಯ್ದೆಯನ್ನು ರದ್ದುಗೊಳಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಒತ್ತಾಯಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಸಂಸತ್ತಿನಲ್ಲಿ ತಮ ಬಹುಮತವನ್ನು ಬಳಸಿಕೊಂಡು ಪೂಜಾ ಸ್ಥಳಗಳ ಕಾಯಿದೆಯನ್ನು ಕಿತ್ತೊಗೆಯಬೇಕು. ಆ ಸಮಯದಲ್ಲಿ ಸರಕಾರ ಯಾವುದೇ ಚರ್ಚೆಯಿಲ್ಲದೆ ಈ ಕಾನೂನನ್ನು ಜಾರಿಗೊಳಿಸಿ ರಾಷ್ಟ್ರದ ಮೇಲೆ ಹೇರಿತ್ತು



ಎಂದಿದ್ದಾರೆ. ಸನಾತನ ಧರ್ಮವನ್ನು ಉಳಿಸುವುದರ ಮೇಲೆ ಎಲ್ಲಾ ಜೀವಿಗಳ ಉಳಿವು ಅವಲಂಬಿತವಾಗಿದೆ ಎಂದು ಅವರು ಪ್ರತಿಪಾದಿಸಿದರು. ಸನಾತನ ಮಂಡಳಿಯನ್ನು ಸ್ಥಾಪಿಸುವುದು ಸನಾತನಿಯನ್ನು ರಕ್ಷಿಸಲು ಈ ಸಮಯದ ಅಗತ್ಯವಾಗಿದೆ ಎಂದು ಅವರು ಹೇಳಿದರು.

ಸನಾತನ ಧರ್ಮ ಸಂಸದ್ (ಸನಾತನ ಧಾರ್ಮಿಕ ಸಂಸತ್ತು) ಅಧ್ಯಕ್ಷತೆ ವಹಿಸಿದ್ದ ನಿಂಬಾಕರ್ ಪೀಠಾಧೀಶ್ವರ ಶ್ಯಾಮ್ ಶರಣ ದೇವಾಚಾರ್ಯರು, ಮಂಡಳಿಯು ಸನಾತನ ಧರ್ಮವನ್ನು ಕಾಪಾಡುತ್ತದೆ ಮತ್ತು ಭವಿಷ್ಯದ ಪೀಳಿಗೆಯ ಭದ್ರತೆಯನ್ನು ಖಚಿತಪಡಿಸುತ್ತದೆ ಎಂದು ಹೇಳಿದರು. ತಿರುಪತಿ ಬಾಲಾಜಿಯಂತಹ ದೇವಾಲಯಗಳಿಗೆ ಹೊರಗಿನವರು ನುಸುಳುವುದನ್ನು ತಡೆಯಲು ಮತ್ತು ನಮ ನಂಬಿಕೆಯನ್ನು ಭ್ರಷ್ಟಗೊಳಿಸುವುದನ್ನು ತಡೆಯಲು ಮಂಡಳಿಯು ನಿರ್ಣಾಯಕವಾಗಿದೆ. ಒಮೆ ಇರಾನ್, ಅಫ್ಘಾನಿಸ್ತಾನ, ನೇಪಾಳ ಮತ್ತು ಭೂತಾನ್‌ನಂತಹ ರಾಷ್ಟ್ರಗಳು ಭಾರತದೊಂದಿಗೆ ಸಾಂಸ್ಕೃತಿಕವಾಗಿ ಹೊಂದಿಕೊಂಡವು. ನಾವು ಕಾರ್ಯನಿರ್ವಹಿಸದಿದ್ದರೆ ಭಾರತವೂ ಹಿಂದೂಗಳ ಕೈಯಿಂದ ಜಾರಿಕೊಳ್ಳಬಹುದು ಎಂದು ಎಚ್ಚರಿಸಿದರು. ಇಸ್ಕಾನ್ ನಾಯಕ ಗೌರಂಗ್ ದಾಸ್ ಜಿ ಮಹಾರಾಜ್ ಅವರು ಸನಾತನಿಗಳು ಏಕೀಕತ ಸಂಸ್ಥೆಯ ಅಗತ್ಯವನ್ನು ಎತ್ತಿ ತೋರಿಸಿದರು.

## ಎಎಪಿ ಪರ ಶತ್ರುಘ್ನ ಸಿನ್ಹಾ ಪ್ರಚಾರ

ನವದೆಹಲಿ: ಫೆಬ್ರವರಿ 5 ರಂದು ನಡೆಯಲಿರುವ ವಿಧಾನಸಭಾ ಚುನಾವಣೆಗೆ ಮುನ್ನ ತಣಮೂಲ ಕಾಂಗ್ರೆಸ್ ಸಂಸದ ಶತ್ರುಘ್ನ ಸಿನ್ಹಾ ಅವರು ದೆಹಲಿಯಲ್ಲಿ ಆಮ್ ಆದಿ ಪಕ್ಷದ ಪರ ಪ್ರಚಾರ ನಡೆಸಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಅಸನ್ಸೋಲ್‌ನ ಟಿಎಂಸಿ ಸಂಸದ ಸಿನ್ಹಾ ಅವರು ಫೆಬ್ರವರಿ 1 ಮತ್ತು 2 ರಂದು ಕನಿಷ್ಠ ಮೂರು ಕ್ಷೇತ್ರಗಳಲ್ಲಿ ಆಪ್ ಪರವಾಗಿ ಪ್ರಚಾರ ನಡೆಸಲಿದ್ದಾರೆ. ಇವುಗಳಲ್ಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ನವದೆಹಲಿ ಕ್ಷೇತ್ರ, ಮುಖ್ಯಮಂತ್ರಿ ಅತಿಶಿ ಅವರ ಕಲ್ಕಾಜಿ ಕ್ಷೇತ್ರ ಮತ್ತು ಮನೀಶ್ ಸಿಸೋಡಿಯಾ ಅವರ ಜಂಗ್‌ಪುರ ಕ್ಷೇತ್ರಗಳಲ್ಲಿ ಪ್ರಚಾರ ನಡೆಸಲಿದ್ದಾರೆ.

ಬಿಹಾರದಿಂದ ಬಂದಿರುವ ನಟ-ರಾಜಕಾರಣಿಯು ದೆಹಲಿಯ ಪೂರ್ವಾಂಚಲಿ ಮತದಾರರನ್ನು ಸಜ್ಜುಗೊಳಿಸಬಹುದು ಎಂದು ಟಿಎಂಸಿ ನಂಬುತ್ತದೆ, ಇದು ಬಿಹಾರ ಮತ್ತು ಉತ್ತರ ಪ್ರದೇಶದಿಂದ ವಲಸೆ ಬಂದವರನ್ನು ಉಲ್ಲೇಖಿಸುತ್ತದೆ. ಪೂರ್ವಾಂಚಲಿಗಳು ನಗರದಲ್ಲಿ ಬಿಹಾರಿಗಳು ಪ್ರಭಾವಿ ಮತದಾರರಾಗಿದ್ದಾರೆ. ಇನ್ನೂ ಒಬ್ಬರು ಅಥವಾ



ಇಬ್ಬರು ಟಿಎಂಸಿ ನಾಯಕರು ದೆಹಲಿಯಲ್ಲಿ ಪ್ರಚಾರಕ್ಕೆ ಸೇರಬಹುದು ಎಂದು ಮೂಲಗಳು ತಿಳಿಸಿವೆ.

ದೆಹಲಿ ಚುನಾವಣೆಗೆ ಟಿಎಂಸಿ ಎಎಪಿಗೆ ಬೆಂಬಲವನ್ನು ನೀಡಿತ್ತು, ಅಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಸಹ ಕಣದಲ್ಲಿದ್ದು ತ್ರಿಕೋನ ಸ್ಪರ್ಧೆಯಾಗಿದೆ. ಟಿಎಂಸಿ ಮತ್ತು ಎಎಪಿ ಇಂಡಿ ಒಕ್ಕೂಟದ ಭಾಗವಾಗಿದ್ದು, ಕಾಂಗ್ರೆಸ್ ತನ್ನ ದೊಡ್ಡ ಪಕ್ಷವಾಗಿದೆ. ಪಕ್ಷವು ಬಿಜೆಪಿಯ ವಿರುದ್ಧ ಮಾತ್ರವಲ್ಲದೆ ಕಾಂಗ್ರೆಸ್ ವಿರುದ್ಧವೂ ಪ್ರಚಾರ ನಡೆಸಲಿದೆ ಎಂದು ಟಿಎಂಸಿಯ ಹಿರಿಯ ನಾಯಕರೊಬ್ಬರು ಹೇಳಿದ್ದಾರೆ ಇದು ವಿರೋಧ ಪಕ್ಷದ ಮೈತ್ರಿಯೊಳಗಿನ ಬಿರುಕುಗಳನ್ನು ಪ್ರತಿಬಿಂಬಿಸುತ್ತದೆ.

# ಲೆಹಂಗಾದಲ್ಲಿ ರಂಗೇರಿಸಿದ ಅಂಜಲಿ



ಬಹುಭಾಷಾ ನಟಿ ಅಂಜಲಿ ಕನ್ನಡ ಸಿನಿಮಾಗಳಲ್ಲಿ ಕೂಡ ನಟಿಸಿದ್ದಾರೆ. ಸಂಕ್ರಾಂತಿ ಸಂಭ್ರಮದಲ್ಲಿ ಬಂದಿದ್ದ 'ಗೇಮ್ ಚೇಂಜರ್' ಚಿತ್ರದಲ್ಲೂ ಮಿಂಚಿದ್ದರು. ಆದರೆ ಚಿತ್ರದ ಗೆಲ್ಲಲಿಲ್ಲ. ಆಕೆ ಮಾಡಿದ್ದ ಪಾತ್ರದ ಬಗ್ಗೆ ಮೆಚ್ಚುಗೆ ವ್ಯಕ್ತವಾಗಿತ್ತು. ಸದ್ಯ ಪರ್ಪಲ್ ಕಲರ್ ಲೆಹಂಗಾದಲ್ಲಿ ಫೋಟೊಶೂಟ್ ಮಾಡಿಸಿ ಹಂಚಿಕೊಂಡಿದ್ದಾರೆ. ಅದಕ್ಕೆ ಅಭಿಮಾನಿಗಳು ಲೈಕ್ಸ್, ಕಾಮೆಂಟ್ಸ್ ಮಾಡುತ್ತಿದ್ದಾರೆ.

ತಮಿಳು ನಟಿ ಕನ್ನಡದ 'ಹೊಂಗನಸು' ಚಿತ್ರದಲ್ಲಿ ನಟಿಸಿದ್ದರು. ಇತ್ತೀಚೆಗೆ ಆಕೆ ನಟಿಸಿದ್ದ 'ಗೇಮ್ ಚೇಂಜರ್' ಸಿನಿಮಾ ಬಿಡುಗಡೆಯಾಗಿದೆ. ಇದೆಲ್ಲದರ ನಡುವೆ ಲೆಹಾಂಗಾದಲ್ಲಿ ಫೋಟೊಶೂಟ್ ಮಾಡಿಸಿದ್ದಾರೆ.

ಪರ್ಪಲ್ ಕಲರ್ ಲೆಹಂಗಾದಲ್ಲಿ ಅಂಜಲಿ ಮಿಂಚಿದ್ದಾರೆ. ಡೀಪ್‌ನೆಕ್ ಬ್ಲೌಸ್ ಹಾಗೂ ಪಿಂಕ್, ಪರ್ಪಲ್ ಕಲರ್ ಲೆಹಂಗಾ ಸ್ಕರ್ಟ್ ತೊಟ್ಟು ಕಾಣಿಸಿಕೊಂಡಿದ್ದಾರೆ.

ನನ್ನ ಇಷ್ಟದ ಬಣ್ಣ, ಕಾಸ್ಟ್ಯೂಮ್ ಎಂದು ಅಂಜಲಿ ಬರೆದುಕೊಂಡಿದ್ದಾರೆ. ಅಭಿಮಾನಿಗಳು ಲೈಕ್ಸ್ ಮಾಡಿ ಮೆಚ್ಚುಗೆ ಸೂಚಿಸುತ್ತಿದ್ದಾರೆ. ಕೆಲವರು ಕಾಮೆಂಟ್ ಬಾಕ್ಸ್‌ನಲ್ಲೇ ಕವಿಗಳಾಗಿಬಿಟ್ಟಿದ್ದಾರೆ.

ಸಂಕ್ರಾಂತಿಗೆ ಬಿಡುಗಡೆಯಾದ 'ಮದಗಜ ರಾಜ' ಚಿತ್ರದಲ್ಲಿ ಕೂಡ ಅಂಜಲಿ ನಟಿಸಿದ್ದರು. 12 ವರ್ಷಗಳ ಬಳಿಕ ವಿಶಾಲ್ ನಟನೆಯ ಈ ಸಿನಿಮಾ ತೆರೆಗೆ ಬಂದಿತ್ತು. 'ಈಗೈ' ಎನ್ನುವ ತಮಿಳು ಸಿನಿಮಾವೊಂದು ನಟಿ ಅಂಜಲಿ ಕೈಯಲ್ಲಿ ಇದೆ. ಮತ್ತಷ್ಟು ಸಿನಿಮಾಗಳ ಮಾತುಕತೆ ನಡೀತಿದೆ.



# ಅಮ್ಮಮ್ಮನಿಗೆ ಸೀರೆಯಲ್ಲಿ ನೋಡೋ ಆಸೆಯಿತ್ತು

**ಸೀರೆಯುಟ್ಟು ಎರಡು ಫೋಟೊಗಳನ್ನು ಶೇರ್ ಮಾಡಿ ಅಜ್ಜಿಯನ್ನು ನೆನಪಿಸಿಕೊಂಡಿದ್ದಾರೆ. "ನನ್ನ ಅಮ್ಮಮ್ಮ ಪ್ರತಿಬಾರಿಯೂ ನನ್ನನ್ನು ಸೀರೆಯಲ್ಲಿ ನೋಡುವ ಆಸೆಯನ್ನು ವ್ಯಕ್ತಪಡಿಸಿದ್ದರು.**



ಸ್ಯಾಂಡಲ್‌ವುಡ್ ಸೂಪರ್‌ಸ್ಟಾರ್ ಕಿಚ್ಚ ಸುದೀಪ್ ಇತ್ತೀಚೆಗೆ ಸಿಕ್ಕಾಪಟ್ಟೆ ಸುದ್ದಿಯಲ್ಲಿ ಇದ್ದಾರೆ. ಕಿಚ್ಚ ಸುದೀಪ್ ನಟಿಸಿದ 'ಮ್ಯಾಕ್ಸ್' ಸಿನಿಮಾ ಬಾಕ್ಸಾಫೀಸ್‌ನಲ್ಲಿ ಸೂಪರ್ ಹಿಟ್ ಆಗಿದೆ. ಇದೇ ಖುಷಿಯಲ್ಲಿ ಇರುವಾಗಲೇ ಸುದೀಪ್‌ಗೆ ರಾಜ್ಯ ಪ್ರಶಸ್ತಿ ಕೂಡ ಅನೌನ್ಸ್ ಆಗಿತ್ತು. 2019ರ 'ಪೈಲ್ವಾನ್' ಸಿನಿಮಾದ ನಟನೆಗಾಗಿ ಕಿಚ್ಚನಿಗೆ ರಾಷ್ಟ್ರ ಪ್ರಶಸ್ತಿ ಘೋಷಣೆಯಾಗಿತ್ತು. ಅದನ್ನು ಕಿಚ್ಚ ಸುದೀಪ್ ನಿರಾಕರಿಸಿದ್ದಾರೆ.

ಇತ್ತ ರಾಜ್ಯ ಪ್ರಶಸ್ತಿಯನ್ನು ನಿರಾಕರಿಸಿ ಕಿಚ್ಚ ಸುದೀಪ್ ಸುದ್ದಿಯಲ್ಲಿ ಇದ್ದರೆ, ಇನ್ನೊಂದು ಕಡೆ ಸುದೀಪ್ ಪುತ್ರಿ ಸಾನ್ವಿ ಕೂಡ ಸದ್ದು ಮಾಡುತ್ತಿದ್ದಾರೆ. ಇತ್ತೀಚೆಗೆ ತಮ್ಮ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಸೀರೆಯುಟ್ಟಿರುವ ಎರಡು ಫೋಟೊಗಳನ್ನು ಶೇರ್ ಮಾಡಿಕೊಂಡಿದ್ದಾರೆ.

ಈ ಫೋಟೊಗಳು ನೆಟ್ಟಿಗರಿಗೆ ಸಿಕ್ಕಾಪಟ್ಟೆ ಇಷ್ಟ ಆಗಿವೆ. ಆ ಫೋಟೊಗಳಿಗೆ ಮೆಚ್ಚುಗೆಗಳನ್ನು ಸೂಚಿಸುತ್ತಿದ್ದಾರೆ. ಕಿಚ್ಚ ಸುದೀಪ್ ಪುತ್ರಿ ಸಾನ್ವಿ ಕೂಡ ಇತ್ತೀಚೆಗೆ ಸಿನಿಮಾರಂಗಕ್ಕೆ ಎಂಟ್ರಿ ಕೊಟ್ಟಿದ್ದರು. ತಂದೆ ನಟಿಸಿದ್ದ 'ಮ್ಯಾಕ್ಸ್' ಸಿನಿಮಾದ ಒಂದು ಹಾಡನ್ನು ಹಾಡಿ ಕಿಚ್ಚ ಸುದೀಪ್ ಅಭಿಮಾನಿಗಳ ಮನಸ್ಸನ್ನು ಗೆದ್ದಿದ್ದರು.

ಈಗ ಅಜ್ಜಿಯ ಸೀರೆಯನ್ನು ಧರಿಸಿ ನೆಟ್ಟಿಗರ ಮನಗೆದ್ದಿದ್ದಾರೆ. ಪಕ್ಕಾ ಟ್ರೆಡಿಷನಲ್ ಲುಕ್‌ನಲ್ಲಿ ಅಜ್ಜಿಯ ಸೀರೆಯುಟ್ಟು ಕ್ಯಾಮರಾಗೆ ಪೋಸ್ ಕೊಟ್ಟಿದ್ದನ್ನು ಮೆಚ್ಚಿಕೊಂಡಿದ್ದಾರೆ. ಅಂದು ಸ್ನೇಹಿತನಿಗಾಗಿ ನಿರ್ಧಾರ ಬದಲಿಸಿದ್ದ ಕಿಚ್ಚ ಮತ್ತೆ ಯೂಟರ್ನ್ ಹೊಡೆದಿದ್ದೇಕೆ? ಸಾನ್ವಿ ಸುದೀಪ್ ಸೋಶಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ಆಕ್ಟಿವ್ ಆಗಿದ್ದಾರೆ. ಆಗಾಗ ಲೈಫ್‌ನ ಇಂಟ್ರೆಸ್ಟಿಂಗ್ ವಿಷಯಗಳನ್ನು ಹಂಚಿಕೊಳ್ಳುತ್ತಲೇ ಇರುತ್ತಾರೆ.

ಇನ್ನು ಇತ್ತೀಚೆಗೆ ಗಾಯಕಿಯಾಗಿಯೂ ಗುರುತಿಸಿಕೊಂಡಿದ್ದರಿಂದ ಅವರಿಗೂ ಫ್ಯಾನ್ ಫಾಲೋವಿಂಗ್ ಹೆಚ್ಚಾಗಿದ್ದಾರೆ. ಇದೀಗ ಅಜ್ಜಿಯ ಸೀರೆಯುಟ್ಟು ಅವರನ್ನು ನೆನಪಿಸಿಕೊಂಡಿದ್ದಾರೆ. ಅಜ್ಜಿ ಹಾಗೂ ಮೊಮ್ಮಗಳ ನಡುವಿನ ಬಾಂಧವ್ಯಕ್ಕೆ ನೆಟ್ಟಿಗರು ಕೂಡ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಸೀರೆಯುಟ್ಟು ಎರಡು ಫೋಟೊಗಳನ್ನು ಶೇರ್ ಮಾಡಿ ಅಜ್ಜಿಯನ್ನು ನೆನಪಿಸಿಕೊಂಡಿದ್ದಾರೆ. "ನನ್ನ ಅಮ್ಮಮ್ಮ ಪ್ರತಿಬಾರಿಯೂ ನನ್ನನ್ನು ಸೀರೆಯಲ್ಲಿ ನೋಡುವ ಆಸೆಯನ್ನು ವ್ಯಕ್ತಪಡಿಸಿದ್ದರು.

ಇಂದು ಅವರು ಉಡುತ್ತಿದ್ದ ಸೀರೆಯನ್ನು ಧರಿಸಿರುವುದಕ್ಕೆ ಹೆಮ್ಮೆಯಾಗುತ್ತಿದೆ" ಎಂದು ಸಾನ್ವಿ ಸುದೀಪ್ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಹೀಗಾಗಿ ಅಜ್ಜಿ ಹಾಗೂ ಮೊಮ್ಮಗಳ ಬಾಂಧವ್ಯವನ್ನು ನೆಟ್ಟಿಗರು ಮೆಚ್ಚಿದ್ದಾರೆ. ಸಾನ್ವಿ ಸುದೀಪ್ ಸುಂದರ ಫೋಟೊಗಳಿಗೆ ಕಾಮೆಂಟ್‌ಗಳನ್ನು ಮಾಡುತ್ತಿದ್ದಾರೆ. ಎಮೋಜಿಗಳನ್ನು ಕಳುಹಿಸುತ್ತಿದ್ದಾರೆ. ಹಾಗೇ ಕಾಮೆಂಟ್‌ಗಳನ್ನು ಮಾಡುತ್ತಿದ್ದಾರೆ. "ಸೇಮ್ ಟು ಸೇಮ್ ನಿಮ್ ಅಜ್ಜಿ ಸರೋಜಮ್ಮ ಅವರ ತರಾನೇ ಇದ್ದೀರಾ ಮೇಡಂ" ಎಂದು ಕಾಮೆಂಟ್ ಮಾಡಿದ್ದಾರೆ. ಇನ್ನೊಬ್ಬರು "ನಮ್ಮ ಪುಟ್ಟ ಹುಡುಗಿ ಬೆಳೆದು ಬಿಟ್ಟಳು" ಎಂದು ಹೆಮ್ಮೆಯಿಂದ ಕಾಮೆಂಟ್ ಮಾಡಿದ್ದಾರೆ.

# ಪ್ಯಾಂಟ್ ಜಿಪ್ ಬಿಚ್ಚಿದ ಪಟಾಕ

**ನಭಾ ಸಖತ್ ಆಕ್ಟೀವ್ ಆಗಿರುತ್ತಾರೆ. ಬಿಂದಾಸ್ ಫೋಟೊ ಶೂಟ್‌ಗಳಲ್ಲಿ ಮಿಂಚುತ್ತಿರುತ್ತಾರೆ. ಸದ್ಯ ಆಕೆಯ ಹೊಸ ಫೋಟೊಶೂಟ್ ವೈರಲ್ ಆಗುತ್ತಿದೆ. ಒಳಉಡುಪಿನ ಜಾಹೀರಾತುಗಾಗಿ ಬಿಂದಾಸ್ ಅವತಾರದಲ್ಲಿ ದರ್ಶನ ಕೊಟ್ಟಿದ್ದಾರೆ.**




ಕನ್ನಡ ನಟಿ ನಭಾ ನಟೇಶ್ ಸದ್ಯ ತೆಲುಗು ಚಿತ್ರರಂಗದಲ್ಲೇ ಸೆಟ್ಲ್ ಆಗಿ ಬಿಟ್ಟಿದ್ದಾರೆ. ಕನ್ನಡ ಚಿತ್ರರಂಗವನ್ನು ಮರೆತೇಬಿಟ್ಟಿದ್ದಾರೆ. ಶೃಂಗೇರಿ ಮೂಲದ ಬೆಡಗಿ 'ವಜ್ರಕಾಯ' ಚಿತ್ರದ ಮೂಲಕ ಬಣ್ಣದ ಲೋಕಕ್ಕೆ ಬಂದಿದ್ದರು.

ಬಳಿಕ ಮತ್ತೆರಡು ಸಿನಿಮಾಗಳಲ್ಲಿ ಮಿಂಚಿದರು. ತೆಲುಗು ಸಿನಿಮಾಗಳಲ್ಲಿ ನಟಿಸಲು ಆರಂಭಿಸಿದ ಬಳಿಕ ಮತ್ತೆ ಸ್ಯಾಂಡಲ್‌ವುಡ್ ಕಡೆ ಮುಖ ಮಾಡಲಿಲ್ಲ. ಟಾಲಿವುಡ್‌ನಲ್ಲಿ ಕೂಡ ದೊಡ್ಡ ಬ್ರೇಕ್ ಸಿಗಲಿಲ್ಲ. ಇದ್ದಿದ್ದರಲ್ಲಿ 'ಇಸ್ಮಾರ್ಟ್ ಶಂಕರ್' ಸಿನಿಮಾ ತಕ್ಕಮಟ್ಟಿಗೆ ಹೆಸರು ತಂದುಕೊಟ್ಟಿತ್ತು.

ಇನ್ನು ಶೃಂಗೇರಿ ಚೆಲುವೆ ನಟನೆಗೆ ಅವಕಾಶ ಇರುವ ಪಾತ್ರಗಳಿಗಿಂತ ಗ್ಲಾಮರ್ ಗೊಂಬೆಯಂತೆ ಮಿಂಚಿದ್ದೇ ಹೆಚ್ಚು. ಎರಡು ವರ್ಷಗಳ ಹಿಂದೆ ಪಟಾಕ ಚೆಲುವೆ ಗಾಯಗೊಂಡಿದ್ದರು. ಶಸ್ತ್ರ ಚಿಕಿತ್ಸೆ ಬಳಿಕ ವಿಶ್ರಾಂತಿ ಪಡೆದಿದ್ದರು. ಈ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಮಾಹಿತಿ ಹಂಚಿಕೊಂಡಿದ್ದರು.

ಅಪಘಾತವೊಂದರಲ್ಲಿ ನನ್ನ ಎಡ ಭುಜಕ್ಕೆ ಪೆಟ್ಟಾಗಿತ್ತು. ಮೂಳೆ ಮುರಿದತ್ತು. ಅದಕ್ಕಾಗಿ ಪದೇ ಪದೆ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದೆ ಎಂದು ಹೇಳಿಕೊಂಡಿದ್ದರು. 'ಪುಷ್ಪ'– 3 ಐಟಂ ಸಾಂಗ್‌ನಲ್ಲಿ ಕುಣಿಯೋದ್ಯಾರು? ಸಮಂತಾ, ಶ್ರೀಲೀಲಾ ಬಳಿಕ ಯಾರಿಗೆ ಅವಕಾಶ? ಕಳೆದ ವರ್ಷ ನಭಾ ನಟಿಸಿದ 'ಡಾರ್ಲಿಂಗ್' ಸಿನಿಮಾ ಬಿಡುಗಡೆ ಆಗಿತ್ತು. ಇನ್ನು ಸೋಶಿಯಲ್ ಮೀಡಿಯಾದಲ್ಲಿ ನಭಾ ಸಖತ್ ಆಕ್ಟೀವ್ ಆಗಿರುತ್ತಾರೆ. ಬಿಂದಾಸ್ ಫೋಟೊಶೂಟ್‌ಗಳಲ್ಲಿ ಮಿಂಚುತ್ತಿರುತ್ತಾರೆ. ಸದ್ಯ ಆಕೆಯ ಹೊಸ ಫೋಟೊಶೂಟ್ ವೈರಲ್ ಆಗುತ್ತಿದೆ. ಒಳಉಡುಪಿನ ಜಾಹೀರಾತುಗಾಗಿ ಬಿಂದಾಸ್ ಅವತಾರದಲ್ಲಿ ದರ್ಶನ ಕೊಟ್ಟಿದ್ದಾರೆ.

ಒಳ ಉಡುಪು ಹೈಲೆಟ್ ಆಗುವಂತೆ ಶರ್ಟ್, ಪ್ಯಾಂಟ್ ಬಟನ್ ಬಿಚ್ಚಿ ಪೋಸ್ ಕೊಟ್ಟಿದ್ದಾರೆ. ಪ್ಯಾಂಟ್ ಜಿಪ್ ಕೂಡ ತೆಗೆದಂತೆ ಕ್ಯಾಮರಾ ಮುಂದೆ ಬಿಂದಾಸ್ ಆಗಿ ಕಾಣಿಸಿಕೊಂಡಿದ್ದಾರೆ. ಅಭಿಮಾನಿಗಳು ಲೈಕ್ಸ್, ಕಾಮೆಂಟ್ಸ್ ಮಾಡಿ ಮೆಚ್ಚುಗೆ ಸೂಚಿಸುತ್ತಿದ್ದಾರೆ. ಕೆಲವರು ಕೆಟ್ಟ ಕೆಟ್ಟದಾಗಿ ಕಾಮೆಂಟ್ ಮಾಡುತ್ತಿದ್ದಾರೆ. 'ಸ್ವಯಂಬು' ಹಾಗೂ 'ನಾಗಬಂಧಂ' ಎಂಬ ಎರಡು ಸಿನಿಮಾಗಳಲ್ಲಿ ನಭಾ ನಟೇಶ್ ಬಣ್ಣ ಹಚ್ಚಿದ್ದಾರೆ. ಇನ್‌ಸ್ಟಾಗ್ರಾಮ್‌ನಲ್ಲಿ 50 ಲಕ್ಷಕ್ಕೂ ಹೆಚ್ಚು ಫಾಲೋವರ್ಸ್ ಪಟಾಕ ಪೋರಿಗೆ ಇದ್ದಾರೆ. ಈಗಾಗಲೇ 700ಕ್ಕೂ ಅಧಿಕ ಪೋಸ್ಟ್ ಮಾಡಿದ್ದಾರೆ.

400ಕ್ಕೂ ಅಧಿಕ ಜನರನ್ನು ಆಕೆ ಫಾಲೋ ಮಾಡುತ್ತಿದ್ದಾರೆ. ಮೊದಲ ಚಿತ್ರದಲ್ಲೇ ಹ್ಯಾಟ್ರಿಕ್ ಹೀರೊ ಶಿವರಾಜ್‌ಕುಮಾರ್ ಜೊತೆ ನಭಾ ನಟಿಸಿದ್ದರು. 'ವಜ್ರಕಾಯ' ಚಿತ್ರದ ಖಡಕ್ ಪಾತ್ರದಲ್ಲಿ ಮಿಂಚಿದ್ದರು. ಭರತನಾಟ್ಯ ಕೂಡ ಕಲಿತಿರುವ ನಭಾ ಒಳ್ಳೆ ಡ್ಯಾನ್ಸರ್ ಕೂಡ ಹೌದು. 'ವಜ್ರಕಾಯ' ಬಳಿಕ 'ಲೀ' ಹಾಗೂ 'ಸಾಹೇಬ' ಎಂಬ ಮತ್ತೆರಡು ಕನ್ನಡ ಸಿನಿಮಾಗಳಲ್ಲಿ ಬಣ್ಣ ಹಚ್ಚಿದ್ದು ಗೊತ್ತೇಯಿದೆ. 'ನನ್ನು ದೋಚುಕುಂದುವಟೇ' ತೆಲುಗಿನಲ್ಲಿ ನಭಾ ನಟೇಶ್ ನಟಿಸಿದ ಮೊದಲ ಸಿನಿಮಾ. ಬಳಿಕ 'ಅದುಗೋ', 'ಇಸ್ಮಾರ್ಟ್ ಶಂಕರ್', 'ಡಿಸ್ಕೋ ರಾಜಾ', 'ಸೋಲೊ ಬ್ರದುಕೆ ಸೋ ಬೆಟರ್', 'ಅಲ್ಲುಡು ಅದುರ್ಸ್', 'ಮೆಸ್ಟ್ರೋ' ಹೀಗೆ ಒಂದಷ್ಟು ಸಿನಿಮಾಗಳಲ್ಲಿ ಅವಕಾಶ ಪಡೆದುಕೊಂಡಿದ್ದರು. ದೊಡ್ಡಮಟ್ಟದ ಗೆಲುವು ಮಾತ್ರ ಸಿಗಲೇಯಿಲ್ಲ. ಸದ್ಯ ಮತ್ತಷ್ಟು ಕಥೆಗಳನ್ನು ಕೇಳುತ್ತಿದ್ದಾರೆ. ಶೀಘ್ರದಲ್ಲೇ ಇನ್ನೆರಡು ಸಿನಿಮಾಗಳಲ್ಲಿ ನಟಿಸುವ ಬಗ್ಗೆ ಮಾಹಿತಿ ಸಿಗಲಿದೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-**61** Email-mussanje2010@gmail.com, Phone: **9448074878**